ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 10 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 12 ಸಂಚಿಕೆ : 201
1–2–2025 ಶನಿವಾರ

₹3 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 12 ISSUE : 201

### 2024–25ನೇ ಸಾಲಿನ ಆರ್ಥಿಕ ಸಮೀಕ್ಷೆ ಮಂಡಿಸಿದ ನಿರ್ಮಲಾ ಸೀತಾರಾಮನ್

## ಶೇ.6.3ರಿಂದ ಶೇ. 6.8ರ ಜಿಡಿಪಿ ಅಂದಾಜು

**ನವದೆಹಲಿ:** ಸಂಸತ್ತಿನ ಬಜೆಟ್ ಅಧಿವೇಶನ ಆರಂಭ ದಿನವಾದ ಇಂದು ಶುಕ್ರವಾರ ರಾಷ್ಟ್ರಪತಿಗಳ ಭಾಷಣ ನಂತರ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಸಂಸತ್ತಿನ ಉಭಯ ಸದನಗಳಲ್ಲಿ 2024–25ರ ಆರ್ಥಿಕ ಸಮೀಕ್ಷೆಯನ್ನು ಮಂಡಿಸಿದರು, ಈ ಸಮೀಕ್ಷೆಯು 2025–26ರ ಹಣಕಾಸು ವರ್ಷದ ಜಿಡಿಪಿ ಬೆಳವಣಿಗೆಯನ್ನು ಶೇಕಡಾ 6.3 ಮತ್ತು ಶೇಕಡಾ 6.8ರ ನಡುವೆ ಇರಬಹುದೆಂದು ಅಂದಾಜಿಸಿದೆ.



ಸರ್ಕಾರದ ಮುಖ್ಯ ಆರ್ಥಿಕ ಸಲಹೆಗಾರರ ಮಾರ್ಗದರ್ಶನದಲ್ಲಿ ಹಣಕಾಸು ಸಚಿವಾಲಯ ಸಿದ್ಧಪಡಿಸಿದ ವಾರ್ಷಿಕ ವರದಿಯಾದ ಈ ಸಮೀಕ್ಷೆಯು, ಪ್ರಸಕ್ತ ವರ್ಷದ ಭಾರತದ ಆರ್ಥಿಕತೆಯ ಒಳನೋಟ ನೀಡುತ್ತದೆ ಮತ್ತು ಕೇಂದ್ರ ಬಜೆಟ್‌ಗೆ ಮುಂಚಿತವಾಗಿ ನೀತಿ ನಿರೂಪಕರಿಗೆ ಒಂದು ದಿಕ್ಸೂಚಿ ನೀಡುತ್ತದೆ.

ನಿಧಾನಗತಿಯ ಜಿಡಿಪಿ ಬೆಳವಣಿಗೆ, ದುರ್ಬಲ ಬಳಕೆ ಮತ್ತು ಖಾಸಗಿ ಹೂಡಿಕೆ ಮತ್ತು ಎಐ ಮತ್ತು ಆಟೋಮೇಶನ್ ಏರಿಕೆಯ ನಡುವೆ ಉದ್ಯೋಗ ಸೃಷ್ಟಿಯಲ್ಲಿನ ತೊಂದರೆಗಳು ಇತ್ಯಾದಿ ಆರ್ಥಿಕತೆ ಸವಾಲುಗಳನ್ನು ಎದುರಿಸುತ್ತಿರುವುದರಿಂದ – ಆರ್ಥಿಕ ಸಮೀಕ್ಷೆಯು ಈ ಕೆಲವು ಸಮಸ್ಯೆಗಳನ್ನು ಪರಿಹರಿಸುವ ನಿರೀಕ್ಷೆಯಿದೆ.

ಹಣಕಾಸು ಸಚಿವಾಲಯ ಮತ್ತು ಅದರ ಅಧಿಕಾರಿಗಳು ಆರ್ಥಿಕ ಸಮೀಕ್ಷೆಯನ್ನು ಸ್ವತಂತ್ರವಾಗಿ ತಯಾರಿಸುತ್ತಾರೆ. ಅದು ಬಜೆಟ್ ಮೇಲೆ ಪ್ರಭಾವ ಬೀರುವುದಿಲ್ಲ ಎಂದು ಹೇಳಿಕೊಂಡರೂ, ಮುಂಬರುವ ಸಂಭಾವ್ಯ ಬೆಳವಣಿಗೆಗಳ ಬಗ್ಗೆ ಒಳನೋಟಗಳನ್ನು ನೀಡುತ್ತದೆ.

ಮೊದಲ ಆರ್ಥಿಕ ಸಮೀಕ್ಷೆಯು 1950–51ರಲ್ಲಿ ಅಸ್ತಿತ್ವಕ್ಕೆ ಬಂದಿತು, ಅದು ಬಜೆಟ್ ದಾಖಲೆಗಳ ಭಾಗವಾಗಿತ್ತು. 1960 ರ ದಶಕದಲ್ಲಿ, ಇದನ್ನು ಕೇಂದ್ರ ಬಜೆಟ್‌ನಿಂದ ಬೇರ್ಪಡಿಸಿ ಬಜೆಟ್ ಮಂಡನೆಗೆ ಒಂದು ದಿನ ಮೊದಲು ಮಂಡಿಸಲಾಯಿತು. 2025–26 ರ ಕೇಂದ್ರ ಬಜೆಟ್ ನ್ನು ಹಣಕಾಸು ಸಚಿವರು ನಾಳೆ ಮಂಡಿಸಲಿದ್ದಾರೆ.

ಕಳೆದ ವರ್ಷ, ಆರ್ಥಿಕ ಸಮೀಕ್ಷೆಯು ಶೇಕಡಾ 6.5ರಿಂದ ಶೇಕಡಾ 7ರಷ್ಟು ಕಡಿಮೆ ಬೆಳವಣಿಗೆಯ ದರವನ್ನು ಮುನ್ಸೂಚಿಸಿತ್ತು, ಇದು ಆರ್ ಬಿಐ ಯೋಜಿಸಿದ ಶೇಕಡಾ 7.2ಕ್ಕಿಂತ ಕಡಿಮೆಯಾಗಿದೆ. ಸಮೀಕ್ಷೆಯ ವಿಷಯ ಆರ್ಥಿಕ ಸ್ಥಿತಿಸ್ಥಾಪಕತ್ವ ಮತ್ತು 2024 ರ ಕೇಂದ್ರ ಬಜೆಟ್‌ನಲ್ಲಿ ಪ್ರಸ್ತಾಪಿಸಲಾದ ನೀತಿಗಳಿಗೆ ಅನ್ವಯಿಸಿತ್ತು.

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ದೆಹಲಿಯಲ್ಲಿ ಮುಂಬರುವ 2025–26 ರ ಕೇಂದ್ರ ಬಜೆಟ್‌ಗೆ ಸಂಬಂಧಿಸಿದಂತೆ ಪಾಲುದಾರರು ಮತ್ತು ಕಾರ್ಮಿಕ ಸಂಘಗಳ ಪ್ರತಿನಿಧಿಗಳೊಂದಿಗೆ ಎಂಟನೇ ಬಜೆಟ್ ಪೂರ್ವ ಸಮಾಲೋಚನೆಯ ಅಧ್ಯಕ್ಷತೆ ವಹಿಸಿದ್ದಾರೆ.

### ಫೆ. 1 ಕ್ಕೆ ಕೇಂದ್ರ ಬಜೆಟ್ ಮಂಡನೆ

## ನಿರ್ಮಲಾಗೆ ಸವಾಲಿನ ಸರಮಾಲೆ

**ನವದೆಹಲಿ:** ಕೇಂದ್ರ ಹಣಕಾಸು ಸಚಿವೆ ನಿಮ್ ಲಾ ಸೀತಾರಾಮನ್ ಅವರು ಫೆಬ್ರುವರಿ 1ರಂದು 2025–26ನೇ ಸಾಲಿನ ಖರ್ಜಿ ಮಂಡಿಸಲಿದ್ದು, ಅವರ ಮುಂದೆ ಸವಾಲುಗಳ ಮೂಟೆಯೇ ಇದೆ ಎಂದು ಅಕ ತಜ್ಞರು ಹೇಳಿದ್ದಾರೆ.

ಕೇಂದ್ರ ಹಣಕಾಸು ಕಾರ್ಯದರ್ಶಿ ತುಹಿನ ಕಾ0ತ ಪಾ0ಡ ಸೇರಿ ಹಿರಿಯ ಅಧಿಕಾರಿಗಳೊಟ್ಟಿಗೆ ನಿರ್ಮಲಾ ಬಜೆಟ್ ತಯಾರಿ ನಡೆಸಿದ್ದಾರೆ. ಈ ಬಾರಿಯ ಆಯವ್ಯಯದ ಗಾತ್ರವು 150 ಲಕ್ಷ ಕೋಟಿಗೆ ಮುಟ್ಟಲಿದೆ ಎಂದು

ಅಂದಾಜಿಸಲಾಗಿದೆ. ಆದರೆ, ದೇಶದ ಆರ್ಥಿಕ ಬೆಳವಣಿಗೆ ದರವು ಇಳಿಕೆಯ ಪಥದಲ್ಲಿ ಸಾಗುತ್ತಿರುವುದು ಅವರಿಗೆ ಸವಾಲೊಡ್ಡಿದೆ ಎಂದು ಹೇಳಿದ್ದಾರೆ.



2024–25ನೇ ಆರ್ಥಿಕ ಸಾಲಿನ ಸೆಪ್ಟೆಂಬರ್ ತ್ರೈಮಾಸಿಕದಲ್ಲಿ ಒಟ್ಟು ಆಂತರಿಕ ಉತ್ಪನ್ನವು (ಜಿಡಿಪಿ) ಎರಡು ವರ್ಷ ಕನಿಷ್ಠ ಮಟ್ಟಕ್ಕೆ ದಾಖಲಾಗಿದೆ. ಅಲ್ಲದೆ, ಪೂರ್ಣ ಆರ್ಥಿಕ ವರ್ಷದಲ್ಲಿ ಶೇ 64ರಷ್ಟು ದಾಖಲಾಗಲಿದೆ ಎಂದು ರಾಷ್ಟ್ರೀ ಸಾಂಖ್ಯಿಕ ಕಚೇರಿಯು ಅಂದಾಜಿಸಿದೆ. ಇದು 2023 24ನೇ ಸಾಲಿನಲ್ಲಿ ದಾಖಲಾಗಿದ್ದ ಶೇ 8.2ಕ್ಕಿಂತಲೂ ಕಡಿಮೆಯಿ

ಮತ್ತೂ0ದದ ಅಗತ್ಯ ವಸ್ತುಗಳ ಬೆಲೆಯಲ್ಲಿ ಏರಿಕೆಯಾಗಿದೆ. ಆದರೆ, ಸಂಬಳ ಹಾಗೂ ಕೂಲಿ ದರದಲ್ಲಿ ಏರಿಕೆಯಾಗಿಲ್ಲ ಇದರಿಂದ ಮಧ್ಯಮ ವರ್ಗದ ಜನರ ಬದುಕು ಹೈರಾಣಾಗಿದೆ. ಹಾಗಾಗಿ, ಎಲ್ಲಾ ವರ್ಗದ ಜನರ ಜೀವನಮಟ್ಟದ ಸುಧಾರಣೆಯನ್ನು ಗಮನದಲ್ಲಿಟ್ಟುಕೊಂಡು ನಿರ್ಮಳಾ ಅವರು ದೂರದೃಷ್ಟಿಯುಳ್ಳ ಬಜೆಟ್ ಮಂಡಿಸುವ ಸಾಧ್ಯತೆಯಿ ದು ತಜ್ಞರು ಹೇಳಿದ್ದಾರೆ.


ಸರ ಅಮೇರಿಕದ ಡಾಲರ್ ಎದುರು ರೂಪಾಯಿ ವರ ಅದ ಕುರಿತವು ಮುಂದುವರಿದಿದ ಭಾರತೀಯ ರಿಸರ್ವ್ ಬ್ಯಾಂಕ ಮಧ್ಯ ಪ್ರವೇಶದ ಹೊರತಾಗಿಯೂ ರೂಪಾಯಿಯ ಶಂಕೆಯ ಹಳಿಗೆ ಮರಳಿಲ್ಲ ಇದು ಸರ್ಕಾರದ ವರಮಾನ ಮತ್ತು ವೆಚ್ಚದ ನಡುವಣ ಅಂತರವಾದ ತ್ರಯ ಕೊರತೆ ಹೆಚ್ಚಳಕ್ಕೆ ಎಡೆಮಾಡಿಕೊಟ್ಟಿದೆ. 2025 24ನೇ ಸಾಲಿನಲ್ಲಿ ವಿತ್ತೀಯ ಕೊರತೆಯನ್ನು ಲೇಸರ ತರಿಸುವ ಸರ್ಕಾರದ ಗುರಿಗೆ ಅಕ್ಷರಶಃ ಸವಾಲೊದಿದೆ ಎಂದು ಹೇಳಿದ್ದಾರೆ.

ಗ್ರಾಮೀಣ ಮತ್ತು ನಗರ ಪ್ರದೇಶದಲ್ಲಿ ಸರಕು ಮತ್ತು ದೇವರು ಬೇಡಿಕೆ ಪ್ರಮಾಣ ತಗಿದೆ. ಜಾಗತಿಕ ಬಿಕ್ಕಟಿನಿಂದಾಗಿ ಚಾರಿತ್ರಿಕ ದಾಖಲೆಗೆ ಸಜ್ಜು

ನಿರ್ಮಲಾ ಅವರು ಸತತ ಎಂಟು ತಾಲ ಕೇಂದ್ರ ಬಜೆಟ್ ಮಂಡಿಸಿದ ಚಾಲಕ ಪ್ರಯಕ ಭಾಜನರಾಗಲು ಸಾಗಿದ್ದಾರೆ. ಅವರಿಗೆ ಪಲುತ್ತದೆ

ಮೊರಾರ್ಜಿ ಅವರು 1959 1964ರ ನಡುವ ಆರು ಬಾರಿ ಹಾಗೂ 1967 1969ರ ನಡುವ ನಾಲ್ಕು ಸಲ ರೀತ ಮಂಡಿಸಿದ್ದಾರೆ,

## ಸಚಿನ್‌ಗೆ ಬಿಸಿಸಿಐ ಜೀವಮಾನ ಪ್ರಶಸ್ತಿ



**ಮುಂಬೈ:** ಕ್ರಿಕೆಟ್ ದಂತಕಥೆ ಸಚಿನ್ ತೆಂಡೂಲ್ಕರ್ ಅವರು 2024ನೇ ಸಾಲಿನ ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿಯ (ಬಿಸಿಸಿಐ) ಕರ್ನಲ್ ಸಿ.ಕೆ. ನಾಯ್ಡು ಜೀವಮಾನ ಸಾಧನೆ ಪ್ರಶಸ್ತಿಗೆ ಭಾಜನರಾಗಿದ್ದಾರೆ.

ಭಾರತದ ಪರ 664 ಅಂತರರಾಷ್ಟ್ರೀಯ ಪಂದ್ಯಗಳನ್ನು ಆಡಿರುವ ಸಚಿನ್ ಅವರ ಹೆಸರಿನಲ್ಲಿ ಟೆಸ್ಟ್, ಏಕದಿನ ಕ್ರಿಕೆಟ್‌ನಲ್ಲಿ ಅತಿ ಹೆಚ್ಚು ರನ್‌ಗಳಿಸಿದ ದಾಖಲೆ ಇದೆ.

ಕ್ರಿಕೆಟ್ ಕ್ಷೇತ್ರಕ್ಕೆ ಸಚಿನ್ ಅವರ ಕೊಡುಗೆ ಗಮನಿಸಿ, ಬಿಸಿಸಿಐ 2024ನೇ ಸಾಲಿನ ಕರ್ನಲ್ ಸಿ.ಕೆ ನಾಯ್ಡು ಜೀವಮಾನ ಸಾಧನೆ ಪ್ರಶಸ್ತಿ ನೀಡುತ್ತಿದೆ ಎಂದು ಮಂಡಳಿ ಪಿಟಿಐಗೆ ಮಾಹಿತಿ ನೀಡಿದೆ.ಸಚಿನ್ 200 ಟೆಸ್ಟ್ ಪಂದ್ಯಗಳು, 463 ಏಕದಿನ ಪಂದ್ಯಗಳಲ್ಲಿ ಆಡುವ ಮೂಲಕ ಅತಿ ಹೆಚ್ಚು ಪಂದ್ಯವನ್ನಾಡಿದ ಕ್ರಿಕೆಟಿಗ ಎನಿಸಿಕೊಂಡಿದ್ದಾರೆ. ಟೆಸ್ಟ್‌ನಲ್ಲಿ 15,921 ರನ್‌ಗಳು ಹಾಗೂ ಏಕದಿನದಲ್ಲಿ 18,426 ರನ್‌ಗಳನ್ನು ಸಿಡಿಸಿದ್ದಾರೆ. ಸಚಿನ್ ತಮ್ಮ ವೃತ್ತಿ ಜೀವನದಲ್ಲಿ ಒಂದು ಅಂತರರಾಷ್ಟ್ರೀಯ ಟಿ20 ಪಂದ್ಯವನ್ನಾಡಿದ್ದಾರೆ. 2023ನೇ ಸಾಲಿನಲ್ಲಿ ಈ ಪ್ರಶಸ್ತಿ ಭಾರತ ತಂಡದ ಮಾಜಿ ಮುಖ್ಯ ಕೋಚ್ ರವಿ ಶಾಸ್ತ್ರಿ ಮತ್ತು ಮಾಜಿ ವಿಕೆಟ್ ಕೀಪರ್ ಫಾರೂಕ್ ಎಂಜಿನಿಯರ್ ಅವರಿಗೆ ಸಲ್ಲಿತ್ತು.

## ಫೆ.1ಕ್ಕೆ ಶ್ರೀಮಡಿವಾಳ ಮಾಚಿದೇವರ ಜಯಂತಿ

**ದಾವಣಗೆರೆ:** ವಚನ ಸಾಹಿತ್ಯ ರಕ್ಷಕ, ಗಣಾಚಾರ ಸಂಪನ್ನ, ಶರಣರ ದಂಡ ನಾಯಕ, ಬಸವಣ್ಣನವರ ಅನುಯಾಯಿಗಳಾದಿದ್ದ ವೀರಘಂಟೆ ಶ್ರೀ ಮಡಿವಾಳ ಮಾಚಿದೇವರ 910ನೇ ಜಯಂತಿ ಆಚರಣೆ ಫೆಬ್ರವರಿ1ರಂದು ಬೆಳಿಗ್ಗೆ 10ಕ್ಕೆ ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಆಯೋಜಿಸಲಾಗಿದೆ. ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರ ಸ್ವಾಮಿ, ಎಡಿಸಿ ಪಿ.ಎನ್.ಲೋಕೇಶ್, ದಾವಣಗೆರೆ ಜಿಲ್ಲಾ ಮಡಿವಾಳ ಮಾಚಿದೇವ ಸಂಘದ ಜಿಲ್ಲಾಧ್ಯಕ್ಷ ಎಂ.ನಾಗೇಂದ್ರಪ್ಪ ಸೇರಿದಂತೆ ಹಲವಾರು ಗಣ್ಯರು ಆಗಮಿಸಲಿದ್ದಾರೆ. ಕಾರ್ಯಕ್ರಮಕ್ಕೆ ಮಡಿವಾಳ ಸಮುದಾಯದ ಬಂಧುಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಕೋರಲಾಗಿದೆ.

## ಫೆ.1ಕ್ಕೆ ಸಾಸ್ವೆಹಳ್ಳಿಯಲ್ಲಿ ಎಡಿವಿಸ್ ವಾರ್ಷಿಕೋತ್ಸವ ಸಮಾರಂಭ

**ದಾವಣಗೆರೆ:** ಹೊನ್ನಾಳಿ ತಾಲೂಕಿನ ಸಾಸ್ವೆಹಳ್ಳಿ ಗ್ರಾಮದ ಎಡಿವಿಎಸ್ ಸಮೂಹ ಸಂಸ್ಥೆಗಳ 2024–25ನೇ ಸಾಲಿನ ವಾರ್ಷಿಕೋತ್ಸವ ಸಮಾರಂಭ ಫೆಬ್ರವರಿ 1ರಂದು ಶನಿವಾರ ಮಧ್ಯಾಹ್ನ 3ಕ್ಕೆ ಸಾಸ್ವೆಹಳ್ಳಿಯ ಎಡಿವಿಎಸ್ ಆವರಣದಲ್ಲಿ ನಡೆಯಲಿದೆ. ಸಂಸ್ಥೆಯ ಸಂಸ್ಥಾಪಕ ಕಾರ್ಯದರ್ಶಿ ಶಾಂತ ಕೃಷ್ಣಮೂರ್ತಿ ಅಧ್ಯಕ್ಷತೆ ವಹಿಸಲಿದ್ದು, ಸಂಸ್ಥಾಪಕ ಅಧ್ಯಕ್ಷ ಡಾ.ಎಸ್.ಹೆಚ್ ಕೃಷ್ಣಮೂರ್ತಿ ಪ್ರಾಸ್ತಾವಿಕವಾಗಿ ಮಾತನಾಡಲಿದ್ದು, ಹೊನ್ನಾಳಿ ಶಾಸಕ ಡಿ.ಜಿ.ಶಾಂತನಗೌಡ ಕಾರ್ಯಕ್ರಮ ಉದ್ಘಾಟಿಸಿವರು. ಹಳೇ ವಿದ್ಯಾರ್ಥಿಗಳ ಸಂಘವನ್ನು ಜಿಲ್ಲಾ ರಕ್ಷಣಾಧಿಕಾರಿ ಉಮಾ ಪ್ರಶಾಂತ್ ಉದ್ಘಾಟಿಸಿವರು.

ಮುಖ್ಯ ಅತಿಥಿಗಳಾಗಿ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಹೆಚ್.ಬಿ.ಮಂಜಪ್ಪ, ಹೊನ್ನಾಳಿ ತಹಶೀಲ್ದಾರ್ ಪಟ್ಟರಾಜಗೌಡ, ಹೊನ್ನಾಳಿ ಸಿಪಿಐ ಸುನೀಲ್‌ಕುಮಾರ್, ದಾವಣಗೆರೆ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್.ಹೆಚ್.ಅರುಣ್‌ಕುಮಾರ್, ಉಮಾಪತಿ, ಸಣ್ಣಕ್ಕಿಗೌಡ್ರು, ಎ.ಕೆ.ನಾಗಪ್ಪ, ಶೀಲಾಗದ್ದಿಗೇಶ್, ಎ.ಆರ್.ಚಂದ್ರಶೇಖರ್, ಎ.ಹೆಚ್.ಗದ್ದಿಗೇಶ್, ಬಬ್ಬಾರ್‌ಅಲಿಖಾನ್, ಡಾ.ಎಸ್.ಕೆ.ಸಂಪತ್, ಡಾ.ರಾಜು, ಡಾ.ಎಸ್.ಕೆ.ಚೇತನ್, ಡಾ.ಪ್ರತಿಮಾ ಚೇತನ್, ಹೆಚ್.ಬಿ.ಗಣಪತಿ, ಕೆ.ಶ್ಯಾಮ್, ಆರ್.ಷಣ್ಮುಖ, ಜಿ.ಟಿ.ಯಲ್ಲಪ್ಪ, ಬಿ.ಎನ್.ಸತ್ಯಪ್ಪ, ಜಿ.ಎನ್.ಗೌರಮ್ಮ ಇತರರು ಆಗಮಿಸಲಿದ್ದಾರೆ ಎಂದು ಶಾಲಾ ಆಡಳಿತ ಮಂಡಳಿ ತಿಳಿಸಿದೆ.

## ಕ್ಯಾಬ್ ಒಳಗೆ ನುಗ್ಗಿ ಕಾಲೇಜು ವಿದ್ಯಾರ್ಥಿನಿಗೆ ಲೈಂಗಿಕ ದೌರ್ಜನ್ಯ

**ಬೆಂಗಳೂರು:** ಸೋಮವಾರ ಬೆಳಗಿನ ಜಾವ 24 ವರ್ಷದ ಕಾಲೇಜು ವಿದ್ಯಾರ್ಥಿನಿಯೊಬ್ಬಳ ಕ್ಯಾಬ್‌ಗೆ ಹತ್ತಲು ಯತ್ನಿಸಿದ ಇಬ್ಬರು ಅಪರಿಚಿತ ವ್ಯಕ್ತಿಗಳು ಆಕೆಯ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದಾರೆ.ಬಾಣಸವಾಡಿ ಪೊಲೀಸ್ ಠಾಣಾ ವ್ಯಾಪ್ತಿಯ ಕಮ್ಮನಹಳ್ಳಿ ಬಳಿ ಈ ಘಟನೆ ನಡೆದಿದ್ದು, ಪೊಲೀಸರು ಇನ್ನೂ ಆರೋಪಿಯನ್ನು ಬಂಧಿಸಿಲ್ಲ. ಸೋಮವಾರ ಬೆಳಗಿನ ಜಾವ 2 ರಿಂದ 3 ಗಂಟೆಯ ನಡುವೆ ಈ ಘಟನೆ ನಡೆದಿದೆ ಎಂದು ಪೊಲೀಸರು ತಿಳಿಸಿದ್ದಾರೆ.

### ಆತ್ಮಹತ್ಯೆ ಮಾಡಿಕೊಳ್ಳಬೇಡಿ, ದೂರು ದಾಖಲಿಸಿ

## ಮೈಕ್ರೋ ಫೈನಾನ್ಸ್ ಸಂಸ್ಥೆಗಳ ವಿರುದ್ಧ ಕ್ರಮ: ಸಿದ್ದರಾಮಯ್ಯ

**ಮೈಸೂರು:** ಮೈಕ್ರೊಫೈನಾನ್ಸ್ ಸಂಸ್ಥೆಗಳಿಗೆ ಹೆದರಿ ಯಾರೂ ಜೀವ ಕಳೆದುಕೊಳ್ಳಬೇಡಿ ಮತ್ತು ಅವರ ಪ್ರತಿನಿಧಿಗಳು ಕಿರುಕುಳ ನೀಡಿದರೆ ಅಂತಹ ಸಂಸ್ಥೆಗಳ ವಿರುದ್ಧ ದೂರು ದಾಖಲಿಸಿದರೆ ಸರ್ಕಾರ ಅಗತ್ಯ ಕ್ರಮ ಕೈಗೊಳ್ಳುತ್ತದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಶುಕ್ರವಾರ ತಿಳಿಸಿದ್ದಾರೆ.

ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕಿರುಕುಳ ನೀಡುವ ಸಂಸ್ಥೆಗಳ ವಿರುದ್ಧ ಪೊಲೀಸರಿಗೆ ದೂರು ಕೊಡಿ, ಸರ್ಕಾರ ನಿಮ್ಮೊಂದಿಗಿದೆ. ಮೈಕ್ರೊಫೈನಾನ್ಸ್ ಸಂಸ್ಥೆಗಳ ಅಕ್ರಮ ವಸೂಲಿ ಪದ್ಧತಿಯಿಂದ ಯಾರೂ ಆತ್ಮಹತ್ಯೆ ಮಾಡಿಕೊಳ್ಳಬಾರದು. ನೀವು ಯಾವುದೇ ರೀತಿಯ ಕಿರುಕುಳವನ್ನು ಎದುರಿಸಿದರೆ, ಕೂಡಲೇ ದೂರು ನೀಡಿ. ನಾವು ಕಾನೂನು ಕ್ರಮ ಕೈಗೊಳ್ಳುತ್ತೇವೆ' ಎಂದು ಹೇಳಿದರು.



ಭಾರತೀಯ ರಿಸರ್ವ್ ಬ್ಯಾಂಕ್ (ಆರ್‌ಬಿಐ) ನಿಯಮಗಳನ್ನು ಉಲ್ಲಂಘಿಸುವ, ಅಧಿಕ ಬಡ್ಡಿ ದರ ವಿಧಿಸುವ ಅಥವಾ ಕಾನೂನುಬಾಹಿರವಾಗಿ ಕಾರ್ಯನಿರ್ವಹಿಸುವ ಮೈಕ್ರೊಫೈನಾನ್ಸ್ ಸಂಸ್ಥೆಗಳ ವಿರುದ್ಧ ರಾಜ್ಯ ಸರ್ಕಾರ ಕಾನೂನು ಕ್ರಮ ಕೈಗೊಳ್ಳಲಿದೆ. ಈ ಸಂಸ್ಥೆಗಳನ್ನು ನಿಯಂತ್ರಿಸಲು ಶೀಘ್ರವೇ ನಿರ್ದೇಶನ ನೀಡಲಾಗುವುದು ಎಂದರು.

ಮೈಕ್ರೋಫೈನಾನ್ಸ್ ಸಂಸ್ಥೆಗಳಿಂದ ಜನರು ಎದುರಿಸುತ್ತಿರುವ ತೊಂದರೆ ಮತ್ತು ರಾಜ್ಯದಲ್ಲಿ ಗೂಂಡಾ ರಾಜ್ ಆಡಳಿತವಿದೆ ಎಂಬ ಬಿಜೆಪಿ ಆರೋಪಗಳಿಗೆ ಪ್ರತಿಕ್ರಿಯಿಸಿದ ಸಿಎಂ, ಜನರು ತಮಗೆ ಲಭ್ಯವಿರುವ ಮೂಲಗಳಿಂದ ಸಾಲ ತೆಗೆದುಕೊಳ್ಳುತ್ತಾರೆ. ಆದರೆ, ಖಾಸಗಿ ಹಣಕಾಸು ಸಂಸ್ಥೆಗಳು ಮತ್ತು ಲೇವಾದೇವಿಗಾರರು ಹೆಚ್ಚಿನ ಬಡ್ಡಿ ದರ ಹೇರುತ್ತಾರೆ ಮತ್ತು ಜನರನ್ನು ಬೆದರಿಸಲು ಗೂಂಡಾಗಳನ್ನು ಬಳಸುತ್ತಾರೆ ಎಂದು ದೂರಿದರು. ಮೈಕ್ರೋಫೈನಾನ್ಸ್ ಸಂಸ್ಥೆಗಳು ವಾರ್ಷಿಕ ಶೇ 28–30 ರಷ್ಟು ಬಡ್ಡಿ ದರವನ್ನು ವಿಧಿಸುತ್ತಿದ್ದು, ಇದರಿಂದ ಸಾಲಗಾರರು ಸಂಕಷ್ಟಕ್ಕೆ ಸಿಲುಕಿ ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾರೆ. ಮೈಕ್ರೋಫೈನಾನ್ಸ್ ಸಂಸ್ಥೆಗಳು ಕೇಂದ್ರ ಸರ್ಕಾರದ ಅಧೀನದಲ್ಲಿರುವ ಆರ್‌ಬಿಐ ಮಾರ್ಗಸೂಚಿಗಳ ಅಡಿಯಲ್ಲಿ ಕಾರ್ಯನಿರ್ವಹಿಸುವುದರಿಂದ, ಅವುಗಳನ್ನು ನಿಯಂತ್ರಿಸಲು ಮತ್ತು ಸಾಲಗಾರರಿಗೆ ಕಿರುಕುಳ ನೀಡುವ ಸಂಸ್ಥೆಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲು ರಾಜ್ಯ ಸರ್ಕಾರ ಶೀಘ್ರದಲ್ಲೇ ನಿರ್ದೇಶನ ನೀಡಲಿದೆ ಎಂದು ಸಿದ್ದರಾಮಯ್ಯ ಹೇಳಿದರು.

ಮೈಕ್ರೊಫೈನಾನ್ಸ್ ಸಂಸ್ಥೆಗಳ ಕಿರುಕುಳ ತಪ್ಪಿಸಲು ಹಾಗೂ ಸಾಲಗಾರರ ಹಿತರಕ್ಷಣೆಗಾಗಿ ಸುಗ್ರೀವಾಜ್ಞೆ ಮೂಲಕ ಹೊಸ ಕಾನೂನು ಜಾರಿಗೆ ರಾಜ್ಯ ಸರ್ಕಾರ ಚಿಂತನೆ ನಡೆಸಿದೆ. ನಿಯಮ ಮೀರಿದ ವ್ಯವಹಾರ ಮತ್ತು ಬಲವಂತದ ಸಾಲ ವಸೂಲಿ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸುವ ನಿರ್ಣಯ ಮಾಡಿದೆ.

## ದೇವಾಲಯಗಳ ನಿರ್ಮಾಣದಿಂದ ಧಾರ್ಮಿಕ ಶ್ರದ್ಧೆ, ಭಕ್ತಿ, ಸಂಸ್ಕೃತಿಗಳ ಪುನರುತ್ಥಾನವಾಗುತ್ತದೆ : ಹೆಚ್.ಡಿ. ತಮ್ಮಯ್ಯ



**ಚಿಕ್ಕಮಗಳೂರು**–ದೇವಾಲಯಗಳನ್ನು ನಿರ್ಮಾಣ ಮಾಡುವುದು ಸುಲಬದ ಕಾರ್ಯವಲ್ಲ ನೂತನ ದೇವಾಲಯಗಳ ನಿರ್ಮಾಣದಿಂದ ಧಾರ್ಮಿಕ ಶ್ರದ್ಧೆ, ಭಕ್ತಿ ಮತ್ತು ಸಂಸ್ಕೃತಿಗಳ ಪುನರುತ್ಥಾನವಾಗುತ್ತದೆ ಎಂದು ಚಿಕ್ಕಮಗಳೂರು ವಿಧಾನ ಸಭಾ ಕ್ಷೇತ್ರದ ಶಾಸಕ ಹೆಚ್.ಡಿ ತಮ್ಮಯ್ಯ ಹೇಳಿದರು.

ಚಿಕ್ಕಮಗಳೂರು ತಾಲ್ಲೂಕು, ಲಕ್ಯಾ ಹೋಬಳಿಯ ಕೆ.ಬಿ.ಹಾಳ್ ಗ್ರಾಮದಲ್ಲಿ ಇಂದು ಶ್ರೀ ದುರ್ಗಾಬದೇವಿ ನೂತನ ದೇವಾಲಯ ಲೋಕಾರ್ಪಣೆ, ವಿಗ್ರಹ ಪ್ರತಿಷ್ಠಾಪನೆ ಮತ್ತು ಕಳಸಾರೋಹಣ ಪೂಜಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ನಮ್ಮ ಪೂರ್ವಿಕರು ಆಚರಿಸಿ ಬೆಳಿಸಿಕೊಂಡು ಬಂದಿರುವ ಸಂಸ್ಕಾರಯುತ ಕಾರ್ಯಗಳನ್ನು ನಾವು ನಮ್ಮ ಮುಂದಿನ ಪೀಳಿಗೆಗೆ ಪರಿಚಯಿಸಿಕೊಡಬೇಕು ಎಂದರು.

ಯಾವುದೇ ದೇವಾಲಯಗಳ ನಿರ್ಮಾಣದ ನಂತರ ದೇವಾಲಯಗಳಲ್ಲಿ ಪೂಜೆ ಪುನಸ್ಕಾರಗಳೊಂದಿಗೆ ಅದರ ನಿರ್ವಾಹಣೆಯ ಕಾರ್ಯವು ವ್ಯವಸ್ಥಿತವಾಗಿರಬೇಕು. ದೇವಾಲಯಗಳಿಗೆ ತೆರಳಿ ಹೋರ ಬಂದ ಮಾನಸಿಕವಾಗಿ ಶಾಂತಿಯುತವಾಗಿರಲು ಸಾಧ್ಯವಾಗುತ್ತದೆ ಎಂದ ಅವರು ಪ್ರತಿಯೊಬ್ಬರೂ ದೇವರು, ಗುರು ಹಿರಿಯರನ್ನು ಪೂಜಿಸಿ ಗೌರವಿಸುವುದರೊಂದಿಗೆ ಉತ್ತಮ ಸಮಾಜ ನಿರ್ಮಾಣಕ್ಕೆ ಮುಂದಾಗಿ ಎಂದರು.

ಸಾಹಿತಿಗಳಾದ ಚಟ್ನಳ್ಳಿ ಮಹೇಶ್ ಧಾರ್ಮಿಕ ಉಪನ್ಯಾಸ ನೀಡಿ ಇತ್ತೀಚಿನ ದಿನಗಳಲ್ಲಿ ಸುಳ್ಳು, ಮೋಸ, ಅನ್ಯಾಯದ ಕೃತ್ಯಗಳು ಹೆಚ್ಚುತ್ತಿದೆ. ಆತ್ಮ ಸಾಕ್ಷಿಯ ಮೂಲಕ ಮಾನವನೆ ಮಹಾ ದೇವನಾಗಬೇಕು, **(3ನೇ ಪುಟಕ್ಕೆ)**

## ವಿದ್ಯಾರ್ಥಿಗಳಲ್ಲಿ ಶಿಸ್ತು ಬೆಳೆಸುವ ಅಗತ್ಯವಿದೆ

**ಸಾಗರ:** ವಿದ್ಯಾರ್ಥಿಗಳಲ್ಲಿ ಶಿಸ್ತು, ವ್ಯಕ್ತಿತ್ವ, ಸಮಯ ಪ್ರಜ್ಞೆ ಮತ್ತು ನಾಯಕತ್ವ ಗುಣ ಬೆಳೆಸುವ ಅಗತ್ಯವಿದೆ. ಸ್ಕೌಟ್ಸ್ ಮತ್ತು ಗೈಡ್ಸ್‌ನಲ್ಲಿ ವಿದ್ಯಾರ್ಥಿಗಳು ಸಕ್ರಿಯವಾಗಿ ಪಾಲ್ಗೊಳ್ಳುವುದು ಹೆಚ್ಚು ಸೂಕ್ತ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಪರಶುರಾಮಪ್ಪ ಈ. ತಿಳಿಸಿದರು.

ಇಲ್ಲಿನ ನಿರ್ಮಲ ಬಾಲಿಕಾ ಪ್ರೌಢಶಾಲೆಯಲ್ಲಿ ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ಪುರಸ್ಕಾರ ಪರೀಕ್ಷಾ ಶಿಬಿರ ಉದ್ಘಾಟಿಸಿ ಅವರು ಮಾತನಾಡಿದರು. ಕಲಿಕೆ ಸಂದರ್ಭದಲ್ಲಿ ಮಕ್ಕಳು ವಿಸ್ತಾರವಾಗಿ ಆಲೋಚಿಸಿ, ಸಿಗುವ ಎಲ್ಲ ವಿಷಯಗಳನ್ನು ಮನನ ಮಾಡಿಕೊಂಡು ಅದನ್ನು ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು. ನಾಲ್ಕು ಗೋಡೆ ನಡುವಿನ ಶಿಕ್ಷಣದ ಜೊತೆಗೆ ಬದುಕಿನ ಶಿಕ್ಷಣ ಕಲಿಯುವುದು ಅತ್ಯಗತ್ಯ. ಅಂಕದ ಜೊತೆಗೆ ವ್ಯಕ್ತಿತ್ವ ವಿಕಸನಕ್ಕೂ ಹೆಚ್ಚಿನ ಒತ್ತು ನೀಡಬೇಕು. ಮಕ್ಕಳು ಸ್ಕೌಟ್ಸ್ ಮತ್ತು ಗೈಡ್ಸ್‌ನಲ್ಲಿ ಕ್ರಿಯಾಶೀಲವಾಗಿ ತೊಡಗಿಸಿಕೊಳ್ಳಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಜಿಲ್ಲಾ ಸ್ಕೌಟ್ಸ್ ಮತ್ತು ಗೈಡ್ಸ್ ಆಯುಕ್ತೆ ಸರಸ್ವತಿ ನಾಗರಾಜ್, ತಾಲ್ಲೂಕಿನ ಪ್ರತಿಶಾಲೆಯಲ್ಲೂ ಸ್ಕೌಟ್ಸ್ ಮತ್ತು ಗೈಡ್ಸ್ ಘಟಕ ತೆರೆಯುವ ಅಗತ್ಯವಿದೆ. ಕಲಿಕೆ ಜೊತೆ ಇದನ್ನು ಸಹ ಕಡ್ಡಾಯವಾಗಿ ಮಕ್ಕಳು ಕಲಿತರೆ ಶಿಸ್ತು ರೂಢಿಸಿಕೊಳ್ಳಲು ಸಾಧ್ಯವಿದೆ. ಶಾಲೆಗಳಲ್ಲಿ ಸ್ಕೌಟ್ಸ್ ಮತ್ತು ಗೈಡ್ಸ್ ಘಟಕ ತೆರೆಯಲು ಶಿಕ್ಷಕರು ಮತ್ತು ಪೋಷಕರು, ಶಾಲಾ ಆಡಳಿತ ಮಂಡಳಿ ಮುಂದಾಗಬೇಕು ಎಂದು ಹೇಳಿದರು.



ವೇದಿಕೆಯಲ್ಲಿ ಚಂದ್ರಶೇಖರಯ್ಯ, ಅಂತೋಣಿ ಫರ್ನಾಂಡಿಸ್, ಮಾಲತೇಶಪ್ಪ, ಪಾಲಾಕ್ಷಪ್ಪ ಇನ್ನಿತರರು ಹಾಜರಿದ್ದರು. ನಿಕ್ಸನ್ ಸ್ವಾಗತಿಸಿದರು. ರವಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಮಣಿಕಂಠ ವಂದಿಸಿದರು.

## ಫೆ. 9ರಂದು ರಾಜ್ಯ ಮಟ್ಟದ ಮುಕ್ತ ಚದುರಂಗ ಸ್ಪರ್ಧೆ




**ದಾವಣಗೆರೆ:** ನ್ಯೂ ದಾವಣಗೆರೆ ಡಿಸ್ಟ್ರಿಕ್ಟ್ ಚೆಸ್ ಅಸೋಸಿಯೇಷನ್ ಹಾಗೂ ಲಯನ್ಸ್ ಕ್ಲಬ್ ದಾವಣಗೆರೆ ಸಂಯುಕ್ತಾಶ್ರದಲ್ಲಿ ಫೆ.9 ರ ಭಾನುವಾರ ಬೆಳಿಗ್ಗೆ 9.30 ಗಂಟೆಗೆ ದೇವರಾಜ ಅರಸ್ ಬಡಾವಣೆಯಲ್ಲಿರುವ ದಾವಣಗೆರೆ ಲಯನ್ಸ್ ಭವನದಲ್ಲಿ ರಾಜ್ಯ ಮಟ್ಟದ ಮುಕ್ತ ಚದುರಂಗ(ಚೆಸ್) ಪಂದ್ಯಾವಳಿ–2025 ಹಮ್ಮಿಕೊಳ್ಳಲಾಗಿದೆ ಎಂದು ಅಸೋಸಿಯೇಷನ್ ನ ಕಾರ್ಯದರ್ಶಿ ಕೆ.ಎಸ್. ಸತೀಶ್ಚಂದ್ರ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಸೋಸಿಯೇಷನ್ ವತಿಯಿಂದ ಕಳೆದ 16 ವರ್ಷಗಳಿಂದ ಜಿಲ್ಲಾ ಮಟ್ಟದ ಪಂದ್ಯಾವಳಿಯನ್ನು ನಡೆಸುತ್ತಾ ಬಂದಿದ್ದು, ಇದೇ ಮೊದಲ ಬಾರಿಗೆ ರಾಜ್ಯ ಮಟ್ಟದ ಪಂದ್ಯಾವಳಿಯನ್ನು ಹಮ್ಮಿಕೊಳ್ಳಲಾಗಿದೆ. ಪಂದ್ಯಾವಳಿ ಬೆಳಿಗ್ಗೆ 9.30 ಕ್ಕೆ ಆರಂಭವಾಗಲಿದ್ದು, ಉದ್ಘಾಟನಾ ಕಾರ್ಯಕ್ರಮ ಬೆಳಗ್ಗೆ 11 ಗಂಟೆಗೆ ನೆರವೇರಲಿದೆ ಎಂದರು.

ಪಂದ್ಯಾವಳಿ ಜ್ಯೂನಿಯರ್ ಹಾಗೂ ಸೀನಿಯರ್ ವಿಭಾಗದಲ್ಲಿ ನಡೆಯಲಿದೆ. ಜ್ಯೂನಿಯರ್ ವಿಭಾಗದ ವಿಜೇತರಿಗೆ ಟ್ರೋಫಿ ನೀಡಲಾಗುವುದು. ಸೀನಿಯರ್ ವಿಭಾಗದಲ್ಲಿ ನಗದು ಬಹುಮಾನ ಹಾಗೂ ಪ್ರಶಸ್ತಿ ಪತ್ರ ನೀಡಲಾಗುವುದು ಎಂದು ತಿಳಿಸಿದರು

ಜೂನಿಯರ್ ವಿಭಾಗದಲ್ಲಿ ಪಾಲ್ಗೊಳ್ಳಲು 500 ರೂಪಾಯಿ ಹಾಗೂ ಸೀನಿಯರ್ ವಿಭಾಗದಲ್ಲಿ ಪಾಲ್ಗೊಳ್ಳಲು 600 ರೂಪಾಯಿ ಪ್ರವೇಶ ಶುಲ್ಕ ನಿಗದಿ ಪಡಿಸಲಾಗಿದೆ. ಫೆ. 7 ಹೆಸರು ನೋಂದಾಯಿಸಲು ಕೊನೆಯ ದಿನವಾಗಿದೆ.

ಮುಖ್ಯ ಅತಿಥಿಗಳಾಗಿ ಆಗಮಿಸುವ ಡಾ. ಕೆ.ವಿ. ಶ್ರೀಪಾದ ಆಗಮಿಸಲಿದ್ದಾರೆ. ಅಂದು ಬೆಳಿಗ್ಗೆ 11 ಗಂಟೆಗೆ ದಿನೇಶ್ ಕೆ. ಶೆಟ್ಟಿ, ಎನ್. ರಾಜೇಶ್ವರಿ ಹೆಗಡೆ, ಡಿಡಿಪಿಐ ಕೊಟ್ರೇಶ್ ಪಂದ್ಯಾವಳಿ ಉದ್ಘಾಟನೆ ಮಾಡಲಿದ್ದಾರೆ ಎಂದರು.

ಸುದ್ದಿಗೋಷ್ಠಿಯಲ್ಲಿ ಅಸೋಸಿಯೇಷನ್ ಹಾಗೂ ಲಯನ್ಸ್ ಕ್ಲಬ್ ನ ಅಧ್ಯಕ್ಷ ಎ.ಎಂ. ಹೆಗಡೆ, ಎಸ್.ಜಿ. ಉಳುವಯ್ಯ, ಶ್ರೀಪಾದ ಹೆಗಡೆ, ಚಂದ್ರಪ್ಪ ಉಪಸ್ಥಿತರಿದ್ದರು.

## ಫೆ. 7 ರಂದು ಚನ್ನಗಿರಿಯ ಮಿಲಿಂದ್ ಅಭಿನಯಿಸಿರುವ 'ಅನ್ ಲಾಕ್ ರಾಘವ' ತೆರೆಗೆ




**ದಾವಣಗೆರೆ:** ಮಯೂರ ಮೋಷನ್ ಪಿಕ್ಚರ್ಸ್ ಮತ್ತು ಐಪ್ಲೆಕ್ಸ್ ಸಹಯೋಗದಲ್ಲಿ ನಿರ್ಮಾಣವಾಗಿರುವ 'ಅನ್ ಲಾಕ್ ರಾಘವ' ಚಿತ್ರ ಇದೇ ಫೆ. 7ಕ್ಕೆ ರಾಜ್ಯದಾದ್ಯಂತ 100 ಕ್ಕೂ ಚಿತ್ರಮಂದಿರಗಳಲ್ಲಿ ಬಿಡುಗಡೆ–ಯಾಗುತ್ತಿದೆ ಎಂದು ಐಪ್ಲೆಕ್ಸ್ ನಿರ್ಮಾಣ ಸಂಸ್ಥೆಯ ಪ್ರತಿನಿಧಿ ಅವಿನಾಶ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಚಿತ್ರಕ್ಕೆ ರಾಮಾ ರಾಮಾ ರೇ ಖ್ಯಾತಿಯ ಡಿ. ಸತ್ಯಪ್ರಕಾಶ್ ಕಥೆ, ಚಿತ್ರಕತೆ ಬರೆದಿದ್ದಾರೆ. ರಾಜು ಜೇಮ್ಸ್ ಬಾಂಡ್ ಫೇಮ್ ನ ದೀಪಕ್ ಮಧುವನಹಳ್ಳಿ ನಿರ್ದೇಶನ ಮಾಡಿದ್ದಾರೆ.

ಸಿನಿಮಾದಲ್ಲಿ ಪ್ರಾಮಿಸಿಂಗ್ ಹೀರೋ ಆಗಿ ಮಿಲಿಂದ್ ಗೌತಮ್ ಮತ್ತು ಲವ್ ಮಾಕ್ಟೇಲ್– 2 ಖ್ಯಾತಿಯ ಬೆಡಗಿ ರೇಚಲ್ ಡೇವಿಡ್ ಜೊತೆಯಾಗಿ ಅಭಿನಯಿಸಿದ್ದಾರೆ ಎಂದರು.

'ಅನ್‌ಲಾಕ್ ರಾಘವ' ಚಿತ್ರ ಆರಂಭದಿಂದ ಕೊನೆವರೆಗೂ ಪ್ರೇಕ್ಷಕರಿಗೆ ಪೈಸಾ ವಸೂಲ್ ಅನುಭವ ನೀಡುವುದಂತೂ ಗ್ಯಾರಂಟಿ. ಚಿತ್ರ 100 ಕ್ಕೂ ಹೆಚ್ಚು ಚಿತ್ರಮಂದಿರಗಳಲ್ಲಿ ಫೆ.7 ಬಿಡುಗಡೆಯಾಗಲಿದೆ. ಕೇರಳ ಮತ್ತು ತೆಲುಗಿನಲ್ಲೂ ಸಿನಿಮಾ ರಿಲೀಸ್ ಮಾಡುವಂತೆ ಬೇಡಿಕೆಗಳು ಬಂದಿದೆ ಎಂದು ಸಂತಸ ವ್ಯಕ್ತಪಡಿಸಿದರು.

ಚಿತ್ರದಲ್ಲಿ ಒಂದು ಕ್ಯೂಟ್ ಲವ್ ಸ್ಟೋರಿ ಇದೆ. ಮೈ ನವಿರೇಳಿಸುವ ಸಾಹಸ ದೃಶ್ಯಗಳು, ಇಂಪಾದ ಹಾಡುಗಳು, ವಿಶೇಷ ಪಾತ್ರದೊಂದಿಗೆ ಸಾಧು ಕೋಕಿಲ ಅವರ ಹೊಟ್ಟೆ ಹುಣ್ಣಾಗಿಸುವ ಕಾಮಿಡಿ, ಅದ್ಭುತ ಛಾಯಾಗ್ರಹಣ, ಕಲಾವಿದರ ಮನಮೋಹಕ ಅಭಿನಯ ಹಾಗೂ ಅತ್ಯದ್ಭುತ ನಿರ್ದೇಶನದಿಂದ ಕೂಡಿದ್ದು, ಒಂದು ಕಂಪ್ಲೀಟ್ ಮನರಂಜನಾ ಪ್ಯಾಕೇಜ್ 'ಅನ್‌ಲಾಕ್ ರಾಘವ', ಈಗಾಗಲೇ ಚಿತ್ರದ ಟ್ರೇಲರ್ ಮತ್ತು ಹಾಡುಗಳಿಗೆ ಸಾಕಷ್ಟು ಉತ್ತಮ ರೆಸ್ಪಾನ್ಸ್ ಸಿಕ್ಕಿದೆ. 'ರಾಘವ ರಾಘವ' ಹಾಡು ಇನ್ಸ್ಟಾಗ್ರಾಮ್ ನಲ್ಲಿ ಟ್ರೆಂಡಿಂಗ್‌ನಲ್ಲಿದೆ ಎಂದು ಮಾಹಿತಿ ನೀಡಿ–ದರು.

ತಮ್ಮ ಮೊದಲ ಸಿನಿಮಾ 'ವೀಕೆಂಡ್' ನಲ್ಲೇ ಹಿರಿಯ ನಟ ಅನಂತ್ ನಾಗ್ ಅವರೊಂದಿಗೆ ಪರದೆ ಹಂಚಿಕೊಂಡು ಅದ್ಭುತ ಅಭಿನಯದಿಂದ ಸಿನಿ ಪ್ರೇಕ್ಷಕರ ಮನ ಗೆದ್ದಿರುವ ಚಂದನವನದ ಭರವಸೆಯ ನಾಯಕ ಮಿಲಿಂದ್ ಗೌತಮ್. ಅನ್‌ಲಾಕ್ ರಾಘವ ಚಿತ್ರದಲ್ಲಿ ನಾಯಕನಾಗಿ ಗ್ರಾಂಡ್ ಎಂಟ್ರಿ ಕೊಟ್ಟಿದ್ದಾರೆ.

### ಚನ್ನಗಿರಿಯ ಚಂದದ ಹುಡುಗ ಮಿಲಿಂದ್ ಗೌತಮ್

ಅನ್ ಲಾಕ್ ಚಿತ್ರದ ಮಿಲಿಂದ್ ಗೌತಮ್ ಚನ್ನಗಿರಿಯವರಾಗಿದ್ದು, ಬಿ.ಇ. ಮೆಕ್ಯಾನಿಕಲ್ ಶಿಕ್ಷಣ ಪಡೆದಿದ್ದಾರೆ. 'ವೀಕೆಂಡ್' ಚಿತ್ರದಲ್ಲಿ ಹಿರಿಯ ನಟ ಅನಂತ್ ನಾಗ್ ಅವರೊಂದಿಗೆ ಅಭಿನಯಿಸಿದ್ದು, ಪರಿಪೂರ್ಣ ನಾಯಕನಟನಾಗಿ ಅಭಿನಯಿಸಿದ ಮೊದಲ ಚಿತ್ರ ಇದಾಗಿದೆ. ಚಿತ್ರದ ಪ್ರೊಮೋ ಮತ್ತು ಹಾಡುಗಳು ಮಿಲಿಂದ್ ಒಬ್ಬ ಭರವಸೆಯ ನಟ ಎಂದು ತೋರಿಸುತ್ತದೆ.

# ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ಇಂದು ಕೈಗೊಂಡ ಧರ್ಮಾರ್ಥ ಕಾರ್ಯವು ಮಾನಸಿಕ ಶಾಂತಿ ಮತ್ತು ಆರಾಮ ತರುತ್ತದೆ. ನಿಮ್ಮ ಖರ್ಚುಗಳನ್ನು ನಿಯಂತ್ರಿಸಲು ಮತ್ತು ಕೇವಲ ಅಗತ್ಯವಾದ ವಸ್ತುಗಳ ಮಾತ್ರ ಇಂದು ಖರೀದಿಸಲು ಪ್ರಯತ್ನಿಸಿ. ಯುವಕರು ಶಾಲಾ ಯೋಜನೆಗಳಲ್ಲಿ ಕೆಲವು ಸಲಹೆ ಪಡೆಯಬಹುದು. ದೀರ್ಘಕಾಲದ ನಂತರ ನಿಮ್ಮ ಸ್ನೇಹಿತರಿಗೆ ಸಂಧಿಸುವ ವಿಚಾರ ನಿಮ್ಮ ಮನಸ್ಸಿನೆಲ್ಲೆಡೆ ತುಂಬಿರುತ್ತದೆ. ನಿಮ್ಮ ಮನಸ್ಸನ್ನು ನಿಯಂತ್ರಿಸುವುದನ್ನು ಕಲಿಯಿರಿ ಏಕೆಂದರೆ ಅನೇಕ ಬಾರಿ ನೀವು ಮನಸ್ಸನ್ನು ಕೇಳಿ ನಿಮ್ಮ ಅಮೂಲ್ಯ ಸಮಯವನ್ನು ವ್ಯರ್ಥ ಮಾಡುತ್ತೀರಿ.

### ವೃಷಭ ರಾಶಿ

ತೊಂದರೆಯಲ್ಲಿರುವ ಯಾರಿಗಾದರೂ ಸಹಾಯ ಮಾಡಲು ನಿಮ್ಮ ಚೈತನ್ಯವನ್ನು ಬಳಸಿ. ಲೋಕೋಪಕಾರಕ್ಕಾಗಲ್ಲದಿದ್ದಲ್ಲಿ ಈ ನಶ್ವರ ದೇಹದ ಉಪಯೋಗವಾದರೂ ಏನು. ನಿಮ್ಮ ಖರ್ಚುಗಳನ್ನು ನಿಯಂತ್ರಿಸಲು ಮತ್ತು ಕೇವಲ ಅಗತ್ಯವಾದ ವಸ್ತುಗಳ ಮಾತ್ರ ಇಂದು ಖರೀದಿಸಲು ಪ್ರಯತ್ನಿಸಿ. ಮನೆಯ ಸುಧಾರಣೆಯ ಯೋಜನೆಗಳನ್ನು ಪರಿಗಣಿಸಬೇಕು.

### ಮಿಥುನ ರಾಶಿ

ಕೆಲಸದ ಒತ್ತಡ ಮತ್ತು ಮನೆಯಲ್ಲಿ ಅಪಶ್ರುತಿ ಸ್ವಲ್ಪ ಉದ್ವೇಗ ತರಬಹುದು. ನಿಮಗೆ ಆಕರ್ಷಕವಾಗಿ ತೋರುವ ಯಾವುದೇ ಹೂಡಿಕೆಯ ಯೋಜನೆಯ ಬಗ್ಗೆ ಹೆಚ್ಚು ಕಂಡುಹಿಡಿಯಲು ಮೇಲ್ಮೈಗಿಂತ ಕೆಳಗೆ ಆಳವಾಗಿ ಕೆದಕಿ. ಯಾವುದೇ ಪ್ರಮಾಣ ಮಾಡುವ ಮೊದಲು ತಜ್ಞರನ್ನು ಸಂಪರ್ಕಿಸಿ. ನೀವು ಕುಟುಂಬದ ಸದಸ್ಯರು ಮತ್ತು ಸ್ನೇಹಿತರ ಜೊತೆ ಕಳೆಯಲು ಸಾಕಷ್ಟು ಸಮಯ ಸಿಗುತ್ತದೆ. ಈ ದಿನ ನಿಮ್ಮ ಪ್ರೀತಿ ಜೀವನದ ವಿಚಾರದಲ್ಲಿ ಅಸಾಧಾರಣವಾಗಿದೆ. ಪ್ರೀತಿ ಮಾಡುತ್ತಿರಿ.

### ಕರ್ಕ ರಾಶಿ

ದ್ವೇಷ ಪ್ರೀತಿಗಿಂತ ಹೆಚ್ಚು ಶಕ್ತಿಶಾಲಿಯಾಗಿದ್ದು ನಿಮ್ಮ ದೇಹದ ಮೇಲೆ ಪ್ರಾಣಾಂತಿಕ ಪರಿಣಾಮ ಬೀರುವದರಿಂದ ನಿಮ್ಮ ದ್ವೇಷವನ್ನು ಸಾಯಿಸಲು ಒಂದು ಸಮರಸದ ಸ್ವಭಾವವನ್ನು ರೂಪಿಸಿಕೊಳ್ಳಿ. ದುಷ್ಟತೆಯು ಒಳಿತಿಗಿಂತ ಬೇಗ ವಿಜಯ ಸಾಧಿಸುತ್ತದೆಂದು ನೆನಪಿಡಿ. ನಿಮ್ಮ ಆರ್ಥಿಕ ಸ್ಥಿತಿ ಸುಧಾರಿಸಿದರೂ ಹಣದ ಹೊರಹರಿವು ನಿಮ್ಮ ಯೋಜನೆಗಳನ್ನು ಕಾರ್ಯರೂಪಕ್ಕೆ ತರುವಲ್ಲಿ ತೊಂದರೆಯುಂಟುಮಾಡುತ್ತದೆ.

### ಸಿಂಹ ರಾಶಿ

ಸಂತೋಷದಿಂದ ತುಂಬಿದ ಒಳ್ಳೆಯ ದಿನ. ಸಂಶಯಾಸ್ಪದ ಹಣಕಾಸು ವ್ಯವಹಾರಗಳಲ್ಲಿ ಸಿಲುಕಿಕೊಳ್ಳದಂತೆ ಎಚ್ಚರಿಕೆ ವಹಿಸಿ. ನೀವು ಅಪರೂಪಕ್ಕೆ ಭೇಟಿ ಮಾಡುವ ಜನರನ್ನು ಸಂಪರ್ಕಿಸಲು ಒಳ್ಳೆಯ ದಿನ. ನೀವು ಕೆಲವು ಪ್ರವಾಸೀ ತಾಣಗಳಿಗೆ ಭೇಟಿ ನೀಡುವ ಮೂಲಕ ನಿಮ್ಮ ಪ್ರೇಮ ಜೀವನವನ್ನು ಉಜ್ವಲಗೊಳಿಸಬಹುದು. ನಿಮಗೆ ಅಗತ್ಯವಿಲ್ಲದ ವಿಷಯಗಳ ಮೇಲೆ ಇಂದು ನೀವು ನಿಮ್ಮ ಹೆಚ್ಚಿನ ಸಮಯವನ್ನು ವ್ಯರ್ಥ ಮಾಡಬಹುದು. ಮದುವೆ ಕೇವಲ ಲೈಂಗಿಕತೆಯ ಬಗ್ಗೆ ಮಾತ್ರವಿದೆ ಎಂದು ಹೇಳುವವರು, ಸುಳ್ಳು ಹೇಳುತ್ತಿದ್ದಾರೆ

### ಕನ್ಯಾ ರಾಶಿ

ನೀವು ಇತರರೊಡನೆ ನಿಮ್ಮ ಖುಷಿಯ ಕ್ಷಣಗಳನ್ನು ಹಂಚಿಕೊಳ್ಳುತ್ತಿದ್ದಂತೆ ನಿಮ್ಮ ಆರೋಗ್ಯ ಅರಳುತ್ತದೆ. ಆದರೆ ಇದನ್ನು ನಿರ್ಲಕ್ಷಿಸುವುದು ನಿಮಗೆ ತೊಂದರೆ ತರುತ್ತದೆ. ಹಣ ನಿಮಗೆ ಅಗತ್ಯವಾಗಿದೆ ಆದರೆ ನಿಮ್ಮ ಸಂಬಂಧಗಳನ್ನು ಹಾಳುಮಾಡುವಷ್ಟು ಹಣದ ಬಗ್ಗೆ ಗಂಭೀರವಾಗಬೇಡಿ. ಕುಟುಂಬದ ಸದಸ್ಯರ ಅಗತ್ಯಗಳಿಗೆ ಆದ್ಯತೆ ನೀಡಿ. ನೀವು ಅವರ ಸಲುವಾಗಿ ಕಾಳಜಿ ತೆಗೆದುಕೊಳ್ಳುತ್ತೀರೆಂದು ಅವರಿಗೆ ಅರ್ಥವಾಗುವ ಹಾಗೆ ಅವರ ಸಂತೋಷವನ್ನು ಹಂಚಿಕೊಳ್ಳಿ. ನಾಳೆ ಬಹಳ ತಡವಾಗುವುದರಿಂದ ನೀವು ನಿಮ್ಮ ಪ್ರಿಯತಮೆಗೆ ನಿಮ್ಮ ಸಂದೇಶವನ್ನು ಕೂಡಲೇ ತಿಳಿಸಬೇಕು

### ತುಲಾ ರಾಶಿ

ನಿಮ್ಮ ಶಕ್ತಿಯ ಮಟ್ಟ ಹೆಚ್ಚಿರುತ್ತದೆ. ನಿಮ್ಮ ತಾಯಿ ಅಥವಾ ತಂದೆಯ ಆರೋಗ್ಯಕ್ಕಾಗಿ ನೀವು ಇಂದು ಸಾಕಷ್ಟು ಹಣವನ್ನು ಖರ್ಚು ಮಾಡಬೇಕಾಗಬಹುದು. ಇದು ನಿಮ್ಮ ಹಣಕಾಸಿನ ಸ್ಥಿತಿಯನ್ನು ಹದಗೆಡಿಸುತ್ತದೆ ಆದರೆ ಸಂಬಂಧವನ್ನು ಬಲಪಡಿಸುತ್ತದೆ. ಅಧ್ಯಯನಗಳನ್ನು ತಪ್ಪಿಸಿ ಹೊರಾಂಗಣ ಚಟುವಟಿಕೆಗಳಲ್ಲಿ ತೊಡಗಿಕೊಳ್ಳುವಿಕೆ ನಿಮ್ಮ ಪೋಷಕರಿಗೆ ಕೋಪ ಬರಿಸಬಹುದು. ವೃತ್ತಿ ಯೋಜನೆ ಆಟಗಳಷ್ಟೇ ಮುಖ್ಯ. ನಿಮ್ಮ ಪೋಷಕರನ್ನು ಸಂತೋಷಗೊಳಿಸು ಎರಡನ್ನೂ ಸಂಭಾಳಿಸಬೇಕು. ಒಬ್ಬ ಆಸಕ್ತಿದಾಯಕ ವ್ಯಕ್ತಿಯನ್ನು ಭೇಟಿ ಮಾಡುವ ಸಾಧ್ಯತೆಗಳಿವೆ.

### ವೃಶ್ಚಿಕ ರಾಶಿ

ಸ್ವಲ್ಪ ಮನರಂಜನೆಗಾಗಿ ನಿಮ್ಮ ಕಚೇರಿಯಿಂದ ಬೇಗನೇ ಹೊರಬರಲು ಪ್ರಯತ್ನಿಸಿ. ಆರ್ಥಿಕ ಭಾಗವು ಬಲಗೊಳ್ಳುವ ಪೂರ್ಣ ಸಾಧ್ಯತೆ ಇದೆ.ನೀವು ಯಾವುದೇ ವ್ಯಕ್ತಿಗೆ ಸಾಲ ನೀಡಿದ್ದರೆ, ಇಂದು ನೀವು ಆ ಹಣವನ್ನು ಮರಳಿ ಪಡೆಯುವ ನಿರೀಕ್ಷೆಯಿದೆ ಸಂಗಾತಿಯು ಸಂತೋಷ ನೀಡಲು ಪ್ರಯತ್ನ ಮಾಡಿದಾಗಿನ ಪೂರ್ಣ ಸಂತೋಷದ ಒಂದು ದಿನ.

### ಧನು ರಾಶಿ

ಸ್ನೇಹಿತರಿಂದ ಒಂದು ವಿಶೇಷ ಅಭಿನಂದನೆ ಸಂತೋಷದ ಮೂಲವಾಗುತ್ತದೆ. ಇದೇಕೆಂದರೆ ನೀವು ನಿಮ್ಮ ಜೀವನವನ್ನು ಮರಗಳಂತೆ ಮಾಡಿಕೊಳ್ಳುತ್ತೀರಿ–ಅವುಗಳು ತಾವು ಸೂರ್ಯನಡಿ ನಿಂತು ಶಾಖದ ಬೇಗೆ ತಡೆದುಕೊಂಡು ಇತರರಿಗೆ ನೆರಳು ನೀಡುತ್ತವೆ. ವ್ಯಾಪಾರಿಗಳಿಗೆ ಇಂದು ವ್ಯಾಪಾರದಲ್ಲಿ ಹಾನಿ ಉಂಟಾಗಬಹುದು ಮತ್ತು ತಮ್ಮ ವ್ಯಾಪಾರವನ್ನು ಉತ್ತಮಗೊಳಿಸಲು ನೀವು ಹಣವನ್ನು ಖಾರುಚು ಮಾಡಬೇಕಾಗುತ್ತದೆ.

### ಮಕರ ರಾಶಿ

ದ್ವೇಷ ಪ್ರೀತಿಗಿಂತ ಹೆಚ್ಚು ಶಕ್ತಿಶಾಲಿಯಾಗಿದ್ದು ನಿಮ್ಮ ದೇಹದ ಮೇಲೆ ಪ್ರಾಣಾಂತಿಕ ಪರಿಣಾಮ ಬೀರುವದರಿಂದ ನಿಮ್ಮ ದ್ವೇಷವನ್ನು ಸಾಯಿಸಲು ಒಂದು ಸಮರಸದ ಸ್ವಭಾವವನ್ನು ರೂಪಿಸಿಕೊಳ್ಳಿ. ದುಷ್ಟತೆಯು ಒಳಿತಿಗಿಂತ ಬೇಗ ವಿಜಯ ಸಾಧಿಸುತ್ತದೆಂದು ನೆನಪಿಡಿ. ದೀರ್ಘಕಾಲದವರೆಗೆ ಆರ್ಥಿಕ ಬಿಕ್ಕಟ್ಟಿನಲ್ಲಿ ಸಿಲುಕಿದ್ದವರು, ಅವರು ಇಂದು ಎಲ್ಲಿಂದಲಾದರೂ ಹಣವನ್ನು ಪಡೆಯಬಹುದು, ಇದು ಜೀವನದ ಅನೇಕ ಸಮಸ್ಯೆಗಳನ್ನು ತೆಗೆದುಹಾಕುತ್ತದೆ.

### ಕುಂಭ ರಾಶಿ

ನಿಮ್ಮ ಪ್ರಚಂಡ ಪ್ರಯತ್ನ ಹಾಗೂ ಕುಟುಂಬದ ಸದಸ್ಯರ ಸಕಾಲಿಕ ಬೆಂಬಲ ಬಯಸಿದ ಫಲಿತಾಂಶಗಳು ತರುತ್ತದೆ. ಆದರೆ ಪ್ರಸ್ತುತ ಚೇತನವನ್ನು ಕಾಯ್ದುಕೊಳ್ಳಲು ಶ್ರಮಿಸುತ್ತಿರಿ. ನಿಮ್ಮ ತಂದೆಯ ಯಾವುದೇ ಸಲಹೆ ಇಂದು ಕೆಲಸದ ಸ್ಥಳದಲ್ಲಿ ಇಂದು ನಿಮಗೆ ಹಣದ ಪ್ರಯೋಜನವನ್ನು ನೀಡುತ್ತದೆ. ಕುಟುಂಬದ ಸದಸ್ಯರು ಬೆಂಬಲ ನೀಡಿದರೂ ತುಂಬ ಬೇಡಿಕೆಯಿಡುತ್ತಾರೆ.

### ಮೀನ ರಾಶಿ

ನಿಮ್ಮ ಭರವಸೆ ಒಂದು ಸಮೃದ್ಧ, ಸೂಕ್ಷ್ಮ ಪರಿಮಳಯುಕ್ತ ಮತ್ತು ಬೆರಗುಗೊಳಿಸುವ ಹೂವಿನ ಹಾಗೆ ಅರಳುತ್ತದೆ. ಹಣದ ಚಲನೆ ದಿನವಿಡೀ ಮುಂದುವರಿಯುತ್ತದೆ ಮತ್ತು ದಿನದ ಅಂತ್ಯದ ನಂತರ ನೀವು ಉಳಿಸಲು ಸಾಧ್ಯವಾಗುತ್ತದೆ. ನಿಮ್ಮ ವರ್ತನೆಯಲ್ಲಿ, ವಿಶೇಷವಾಗಿ ನಿಮ್ಮ ಸಂಗಾತಿಯ ಜೊತೆ, ತಾಳ ತಪ್ಪದಿರಲಿ. ಇಲ್ಲವಾದರೆ ಅದು ಮನೆಯಲ್ಲಿನ ಶಾಂತಿಯನ್ನು ಹಾಳಾಗಿಸಬಹುದು.

# ಡಿಆರ್ ಆರ್ ಪಾಲಿಟೆಕ್ನಿಕ್ ನಲ್ಲಿ ಪವಾಡ ರಹಸ್ಯ ಬಯಲು ಕಾರ್ಯಕ್ರಮ



**ದಾವಣಗೆರೆ:** ಬ್ರೇಕ್ಥ್ರೂ ಸೈನ್ಸ್ ಸೊಸೈಟಿ ಹಾಗೂ ಎಐಡಿವೈಓ ಯುವಜನ ಸಂಘಟನೆ ವತಿಯಿಂದ ನಗರದ ಡಿಆರ್ ಆರ್ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಪವಾಡ ರಹಸ್ಯ ಬಯಲು ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.


ವಿಚಾರವಾದಿಗಳು ಹಾಗೂ ವೈಜ್ಞಾನಿಕ ಚಿಂತಕರಾದ ಪ್ರೊ. ನರೇಂದ್ರ ನಾಯಕ್ ಅವರು ಕಾರ್ಯಕ್ರಮದಲ್ಲಿ ಹಲವು ಪ್ರಯೋಗ ಹಾಗೂ ನೈಜ ಘಟನೆಗಳನ್ನು ಪರದೆಯಲ್ಲಿ ತೋರಿಸಿ ಹೇಗೆ ಜನರ ನಂಬಿಕೆಗಳನ್ನು ಬಳಸಿ ಜನರನ್ನು ಮೋಸಗೊಳಿಸುತ್ತಾರೆ ಎಂದು ತೋರಿಸಿಕೊಟ್ಟರು.

ಇವತ್ತಿಗೂ ನಮ್ಮ ದೇಶ ಮೌಢ್ಯದಿಂದ ಮುಕ್ತವಾಗಿಲ್ಲದಿರುವುದು ಬೇಸರದ ಸಂಗತಿ ಎಂದರು.

ನಾವು ವೈಜ್ಞಾನಿಕ ಮನೋಭಾವವನ್ನು, ವೈಜ್ಞಾನಿಕ ಚಿಂತನೆಯನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದ ನೂರಕ್ಕೂ ಅಧಿಕ ವಿದ್ಯಾರ್ಥಿಗಳ ಪ್ರಶ್ನೆಗಳಿಗೆ ಉತ್ತರಿಸುತ್ತ ಹಲವು ದೇಶಗಳ ಪ್ರಗತಿ ಹೇಗೆ ವಿಜ್ಞಾನದ ಅಳವಡಿಕೆಯಿಂದ ಸಾಗಿದೆ ಎಂದು ವಿವರಿಸಿದರು.

ಕಾರ್ಯಕ್ರಮದ ಅತಿಥಿಗಳಾದ ಬ್ರೇಕ್ಥ್ರೂ ಸೈನ್ಸ್ ಸೊಸೈಟಿಯ ಜಿಲ್ಲಾ ಇಂಚಾರ್ಜ್ ಡಾ. ವಸುಧೇಂದ್ರರವರು ಇಂಥ ಕಾರ್ಯಕ್ರಮಗಳು ಹೆಚ್ಚೆಚ್ಚು ಹಳ್ಳಿಗಳಲ್ಲಿ ನಡೆದು ಜನರಲ್ಲಿರು ತಪ್ಪು ಪದ್ಧತಿಗಳು, ಮೌಢ್ಯದ ಆಚರಣೆ ದೂರವಾಗಲು ಸಾಹಾಯಕ ಎಂದರು. ಕಾಲೇಜಿನ ಪ್ರಾಂಶುಪಾಲರು ಹಾಗೂ ಬೋಧಕ ವೃಂದದವರು ಉಪಸ್ಥಿತರಿದ್ದರು. ಅಧ್ಯಕ್ಷತೆ ವಹಿಸಿದ್ದ ಪರಶುರಾಮ್ , ಮಂಜುನಾಥ್ , ಸಂಘಟನೆಯ ಸದಸ್ಯರಾದ ಗುರು, ಅನಿಲ್ ಭಾಗವಹಿಸಿದ್ದರು.

# ಜಿಲ್ಲಾ ಬಿಜೆಪಿ ಅಧ್ಯಕ್ಷರಾಗಿಎಂ.ಆರ್. ದೇವರಾಜ ಶೆಟ್ಟಿ ಮರುಆಯ್ಕೆ



**ಚಿಕ್ಕಮಗಳೂರು:** ಜಿಲ್ಲಾ ಬಿಜೆಪಿ ಅಧ್ಯಕ್ಷರಾಗಿಎಂ. ಆರ್.ದೇವರಾಜ ಶೆಟ್ಟಿ ಮರುಆಯ್ಕೆಯಾಗಿದ್ದು, ನೂತನಜಿಲ್ಲಾ ಪ್ರತಿನಿಧಿಯಾಗಿ ಕೆ.ಪಿ.ವೆಂಕಟೇಶ್ಆಂ ಯ್ಕೆಯಾಗಿದ್ದಾರೆ.

ಬುಧವಾರಜಿಲ್ಲಾ ಬಿಪೆಪಿ ಕಚೇರಿ ಪಾಂಚಜನ್ಯದಲ್ಲಿ ನಡೆದಚುನಾವಣೆಯಲ್ಲಿ ಸಂಸದರು, ಮಾಜಿ ಶಾಸಕರು, ಕೋರ್ಕಮಿಟಿ ಸದಸ್ಯರುಜಿಲ್ಲಾ ಮುಖಂಡರು, ಚುನಾವಣಾಧಿಕಾರಿಗಳ ಸಮ್ಮುಖದಲ್ಲಿ ನಡೆದಚುನಾವಣೆಯಲ್ಲಿಇಬ್ಬರೂಅವಿರೋಧವಾಗಿಆಂ ಯ್ಕೆಯಾದರು.

ಈ ವೇಳೆ ಮಾಜಿ ಸಚಿವಡಿ.ಎನ್.ಜೀವರಾಜ್ ಮಾತನಾಡಿ, ಮುಂದೆದೇವರಾಜ್ ಶೆಟ್ಟಿಅವರ ನೇತೃತ್ವದಲ್ಲೇಜಿಲ್ಲೆಯಎಲ್ಲಾ ಕ್ಷೇತ್ರಗಳನ್ನು ಗೆಲ್ಲುವಂತಾಗಲಿ, ಹಾಗೆಯೇ ಈ ಬಾರಿಯೂಜಿಲ್ಲಾ ಸಹಕಾರಕೇಂದ್ರ ಬ್ಯಾಂಕ್ಚುನಾವಣೆಯಲ್ಲೂ ಬಿಜೆಪಿ ಅಧಿಕಾರ ಹಿಡಿಯುವ ಲಕ್ಷಣಕಂಡುಬಂದಿದೆ.ಎಲ್ಲಾ ತಾಲ್ಲೂಕುಗಳಲ್ಲಿ ಸಹಕಾರ ಸಂಘಗಳ ಗೆಲುವುಗಳನ್ನು ಆಧರಿಸಿ ಹೇಳುವುದಾದರೆ ಡಿಸಿಸಿ ಬ್ಯಾಂಕ್ಅಧಿಕಾರ ಮರಳಿ ನಮ್ಮ ಕೈಗೆ ಬರಲಿದೆಎಂದು ವಿಶ್ವಾಸ ವ್ಯಕ್ತಪಡಿಸಿದರು.

ಮಾಜಿ ಶಾಸಕ ಬೆಳ್ಳಿ ಪ್ರಕಾಶ್ ಮಾತನಾಡಿ, ಕಾರ್ಯಕರ್ತರುಯಾವುದೇ ಊಹಾಪೋಹಗಳಿಗೆ ಕವಿಗೊಡದೆಎಲ್ಲರೂಒಟ್ಟಾಗಿ ಶ್ರಮಿಸಿದರೆ ಮುಂದಿನ ಚುನಾವಣೆಯಲ್ಲಿಜಿಲ್ಲೆಯಐದಕ್ಕೆಐದೂಕ್ಷೇತ್ರದಲ್ಲಿ ಮತ್ತೆ ಬಿಜೆಪಿ ಗೆಲ್ಲಬಹುದು.ಇದುದೇವರಾಜ ಶೆಟ್ಟಿಅವರ ನೇತೃತ್ವದಲ್ಲಿ ಆಗಬೇಕು.ಇದೇ ವೇಳೆ ಜಿ.ಪಂ., ತಾ.ಪಂ. ಗಳಲ್ಲಿ ನಮ್ಮ ಅಭ್ಯರ್ಥಿಗಳು ಆಯ್ಕೆಯಾಗಿಅಧಿಕಾರ ಹಿಡಿಯುವಂತಾಗಲಿ. ಈ ನಿಟ್ಟಿನಲ್ಲಿ ನೂತನಅಧ್ಯಕ್ಷರುಎಲ್ಲರ ವಿಶ್ವಾಸಕ್ಕೆತೆಗೆದುಕೊಂಡು ಸಂಘಟನೆ ಗಟ್ಟಿಗೊಳಿಸಬೇಕು ಎಂದುಕರೆ ನೀಡಿದರು.

ಇನ್ನೋರ್ವ ಮಾಜಿ ಶಾಸಕ, ಡಿಸಿಸಿ ಬ್ಯಾಂಕ್ಅಧ್ಯಕ್ಷರೂಆದತರೀಕರೆಯ ಡಿ.ಎಸ್.ಸುರೇಶ್ ಮಾತನಾಡಿ, ಸಧ್ಯದಲ್ಲೇಜಿ.ಪಂ., ತಾ.ಪಂ. ಚುನಾವಣೆಗಳು ಬರಲಿವೆ. ಇದುಕಾರ್ಯಕರ್ತರಚು ನಾವಣೆಅದರಲ್ಲಿ ನಮ್ಮಕಾರ್ಯಕರ್ತರನ್ನುಗೆಲ್ಲಿಸು ವಜವಾಬ್ದಾರಿ ನೂತನಅಧ್ಯಕ್ಷರ ಮೇಲಿದೆ.ಅದನ್ನು ಯಶಸ್ವಿಯಾಗಿ ನಿಭಾಯಿಸಬೇಕು.ಅದಕ್ಕೆ ನಮ್ಮೆಲ್ಲರ ಸಹಕಾರಇರುತ್ತದೆ.ಮುಂದೆಜಿಲ್ಲೆಯಐದೂ ಶಾಸಕರನ್ನುಗೆಲ್ಲುವಂತಾಗಬೇಕುಎಂದು ಹೇಳಿದರು.

ಜಿಲ್ಲಾಧ್ಯಕ್ಷರಾಗಿ ಮರುಆಯ್ಕೆಯಾದಎಂ. ಆರ್.ದೇವರಾಜ ಶೆಟ್ಟಿ ಮಾತನಾಡಿ, ಪಕ್ಷ ನೀಡಿರುವಜವಾಬ್ದಾರಿಯನ್ನುಎಲ್ಲ ಹಿರಿಯರ ಮಾರ್ಗದರ್ಶನ, ಸಲಹೆ ಪಡೆದು ಪಕ್ಷವನ್ನು ಸದೃಢವಾಗಿಕಟ್ಟಲಾಗುವುದು.ಜಿಲ್ಲಾತಂಡ, ವಿವಿಧ ಮೋರ್ಚಾಗಳ ರಚನೆ, ಪದಾಧಿಕಾರಿಗಳ ಬದಲಾವಣೆಇನ್ನಿತರೆ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಲಾಗುವುದು ಎಂದರು.

ನನ್ನತಂಡದಲ್ಲಿ ಕೆಲಸ ಮಾಡದೇಇರುವರಿಗೆ ಸ್ಥಾನವಿಲ್ಲ. ಕೆಲಸ ಮಾಡದವರುಇದ್ದಲ್ಲಿ ವಿಸಿಟಿಂಗ್ ಕಾರ್ಡ್ಗಾಗಿ, ನಾಯಕರ ಹಿಂದೆಓಡಾಡುವ ಸಲುವಾಗಿ ಸ್ಥಾನ ಬೇಕೆಂದರೆಅದಕ್ಕೆ ಅವಕಾಶ ಇರುವುದಿಲ್ಲ. ಮುಂದೆ ಬರುವಎಲ್ಲಾ ಚುನಾವಣೆಗಳನ್ನು ಗೆಲ್ಲಬೇಕೆಂದರೆ ಬಲಿಷ್ಟ ತಂಡಕಟ್ಟಬೇಕಿದೆ.ಪ್ರತಿ ಮಹಾ ಶಕ್ತಿ ಕೇಂದ್ರವನ್ನು ಪ್ರವಾಸ ಮಾಡಿ ಸಂಘಟನೆ ಗಟ್ಟಿಗೊಳಿಸುವ ಯೋಜನೆಇದೆಎಂದರು.

ಸಮಾರಂಭದಲ್ಲಿಜಿಲ್ಲಾಚುನಾವಣಾಧಿಕಾರಿಚುನಾವಣಾಧಿಕಾರಿ ಹಾಸನದಚೇತನ್ಕುಮಾರ್, ಸಹ ಚುನಾವಣಾಧಿಕಾರಿ ವೀಣಾ ಶೆಟ್ಟಿ, ಸಂಸದಕೋಟಾ ಶ್ರೀನಿವಾಸ ಪೂಜಾರಿ, ಮಾಜಿ ಸಚಿವ ಕೆ.ಮಹೇಶ್, ಕಾಫಿ ಮಂಡಳಿ ಅಧ್ಯಕ್ಷದೇವವೃಂದ ದಿನೇಶ್, ಯುವ ಮೋರ್ಚಾಜಿಲ್ಲಾಧ್ಯಕ್ಷ ಸಂತೋಷ್ಕೋಟ್ಯಾನ್, ಒಬಿಸಿ ಮೋರ್ಚಾರಾಜ್ಯ ಕಾರ್ಯದರ್ಶಿ ಬಿ.ರಾಜಪ್ಪ, ಹಿರಿಯ ಮುಖಂಡಕೋಟೆರಂಗನಾಥ್, ಮಹಿಳಾ ಮೋರ್ಚಾಜಿಲ್ಲಾಧ್ಯಕ್ಷೆ ಜಸಿಂತ ಅನಿಲ್ ಕುಮಾರ್, ಎಸ್ಸಿ ಮೋರ್ಚಾಜಿಲ್ಲಾದ್ಯಕ್ಷ ಕೆ.ಪಿ.ವೆಂಕಟೇಶ್ ಸೇರಿದಂತೆ ವಿವಿಧ ಮೋರ್ಚಾಗಳ ಅಧ್ಯಕ್ಷರು, ಮಂಡಲದಅಧ್ಯಕ್ಷರು, ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಫೆ. 6 ರಿಂದ ಕೂನಬೇವು ಕುಕ್ಕವಾಡೇಶ್ವರಿ ಜಾತ್ರಾ ಮಹೋತ್ಸವ

**ಜಗಳೂರು:** ಜಗಳೂರು ಚಿತ್ರದುರ್ಗ ಗಡಿಗ್ರಾಮದ ಐತಿಹಾಸಿಕ ಕೂನಬೇವು ಗ್ರಾಮದಲ್ಲಿ ಗ್ರಾಮ ದೇವತೆ ಕುಕ್ಕವಾಡೇಶ್ವರಿ ಅಮ್ಮನವರ ಎರಡನೇ ವರ್ಷದ ಜಾತ್ರಾ ಮಹೋತ್ಸವ ಅಂಗವಾಗಿ ಸಾಮೂಹಿಕ ವಿವಾಹ ಸೇರಿದಂತೆ ವಿವಿಧ ಸಾಂಸ್ಕೃತಿಕ ಕ್ರೀಡೆಗಳನ್ನು ಆಯೋಜಿಸಲಾಗಿದೆ ಎಂದು ಉಪನ್ಯಾಸಕ ತಿಮ್ಮಲಾಪುರ ಪ್ರಸನ್ನ ಕುಮಾರ್ ತಿಳಿಸಿದ್ದಾರೆ.

ಪಟ್ಟಣದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಫೆಬ್ರವರಿ 6 ರಿಂದ 8 ವರೆಗೆ ಸತತ ಮೂರು ದಿನಗಳ ಕಾಲ ನಡೆಯುವ ಜಾತ್ರಾ ಮಹೋತ್ಸವದಲ್ಲಿ ಫೆ. 6 ರಂದು ಬೆಳಿಗ್ಗೆ 8:30 ಕ್ಕೆ ರಂಗೋಲಿ ಸ್ಪರ್ಧೆ , ದಿನಾಂಕ 7 ರಂದು ಬೆಳಿಗ್ಗೆ 10.20 ಎತ್ತುಗಳ ಪ್ರದರ್ಶನ ಹಾಗು ಮಧ್ಯಾಹ್ನ 12 ಗಂಟೆಗೆ ಸಾಮೂಹಿಕ ವಿವಾಹ ಕಾರ್ಯಕ್ರಮ, ಸಂಜೆ 5 ಗಂಟೆಗೆ ಹೊನಲು ಬೆಳಕಿನ ವಾಲೀಬಾಲ್ ಪಂದ್ಯಾವಳಿ ನಡೆಯಲಿದೆ. ಫೆ.8 ರ ಬೆಳಿಗ್ಗೆ 6.30 ರಂದು ಬೆಳಿಗ್ಗೆ ಮ್ಯಾರಥಾನ್ ಓಟದ ಸ್ಪರ್ಧೆ 10.30 ಕ್ಕೆ ಗ್ರಾಮೀಣ ಕ್ರೀಡೆಗಳಾದ ಜಂಗಿಕುಸ್ತಿ , ಕಬ್ಬಡ್ಡಿ , ಸೇರಿದಂತೆ ಇತರೆ ದೇಶೀಯ ಕ್ರೀಡೆಗಳು ನಡೆಯಲಿವೆ ರಾತ್ರಿ 8.30 ಕ್ಕೆ ಸಾಮಾಜಿಕ ನಾಟಕ ಪ್ರದರ್ಶನಗೊಳ್ಳಲಿದೆ ಎಂದು ಮಾಹಿತಿ ನೀಡಿದರು.ಕುಕ್ಕವಾಡಮ್ಮ ದೇವಿ ಜಾತ್ರಾ ಮಹೋತ್ಸವ ಅಂಗವಾಗಿ ಈ ಮೇಲ್ಕಂಡ ಕಾರ್ಯಕ್ರಮ ಮತ್ತು ಸ್ಪರ್ದೆಗಳು ನಡೆಯುತ್ತಿದ್ದು ಇದೊಂದು ಸಾಮಾಜಿಕ , ಧಾರ್ಮಿಕ , ಸಾಂಸ್ಕೃತಿಕ ಕ್ಷೇತ್ರವಾಗಿ ಹೊರ ಹೊಮ್ಮುತ್ತಿದೆ. ಈ ಕಾರ್ಯಕ್ರಮಕ್ಕೆ ಜನಪ್ರತಿನಿಧಿಗಳು , ಅಧಿಕಾರಿಗಳು ಸಮಸ್ತ ಭಕ್ತಾದಿಗಳು ಸೇರಲಿದ್ದಾರೆ. ಸಾಮೂಹಿಕ ವಿವಾಹಕ್ಕೆ ಅಗತ್ಯ ದಾಖಲಾತಿಗಳನ್ನು ಕಡ್ಡಾಯವಾಗಿ ತರತಕ್ಕದ್ದು ಮತ್ತು ಹಲವು ಕ್ರೀಡೆಗಳಲ್ಲಿ ಭಾಗವಹಿಸುವ ಆಸಕ್ತರು ಹೆಚ್ಚಿನ ಮಾಹಿತಿಗಾಗಿ ಪ್ರಸನ್ನಕುಮಾರ್ 9902349159 ಈ ದೂರವಾಣಿ ಸಂಖ್ಯೆಗೆ ಸಂಪರ್ಕಿಸಿ ನೋಂದಣಿ ಮಾಡಿಕೊಳ್ಳಬಹುದು ಎಂದು ತಿಳಿಸಿದ್ದಾರೆ.

# ಇಂದು ದಾವಣಗೆರೆ ತಾಲ್ಲೂಕು ಕನ್ನಡ ಸಾಹಿತ್ಯ ಸಮ್ಮೇಳನ




**ದಾವಣಗೆರೆ:** ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತು, ದಾವಣಗೆರೆ ವತಿಯಿಂದ ಫೆ.1 ರಂದು ನಗರದ ಕುವೆಂಪು ಕನ್ನಡ ಭವನದಲ್ಲಿ 11 ನೇ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಾಲ್ಲೂಕು ಕಸಾಪ ಅಧ್ಯಕ್ಷೆ ಸುಮತಿ ಜಯಪ್ಪ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಫೆ.1 ರಂದು ಬೆಳಗ್ಗೆ 8 ಗಂಟೆಗೆ ಮೇಯರ್ ಕೆ. ಚಮನ್ ಸಾಬ್ ರಾಷ್ಟ್ರ ಧ್ವಜಾರೋಹಣ, ಕಸಾಪ ಜಿಲ್ಲಾಧ್ಯಕ್ಷ ಬಿ. ವಾಮದೇವಪ್ಪ ಪರಿಷತ್ತಿನ ಧ್ವಜಾರೋಹಣ ಹಾಗೂ ತಾಲ್ಲೂಕು ಕಸಾಪ ಅಧ್ಯಕ್ಷೆ ಸುಮತಿ ಜಯಪ್ಪ ನಾಡ ಧ್ವಜಾರೋಹಣ ನೆರವೇರಿಸಲಿದ್ದಾರೆ ಎಂದರು.

ಬೆಳಗ್ಗೆ 9 ಗಂಟೆಗೆ ತಾಯಿ ಭುವನೇಶ್ವರಿ ಹಾಗೂ ಸಮ್ಮೇಳನದ ಸರ್ವಾಧ್ಯಕ್ಷ ಶಿವಾನಂದ ಗುರೂಜಿ ಅವರ ಮೆರವಣಿಗೆ ನಡೆಯಲಿದ್ದು, ತಾ.ಪಂ. ಇಒ ರಾಮಭೋವಿ ಚಾಲನೆ ನೀಡಲಿದ್ದಾರೆ. ಮುಖ್ಯ ಅತಿಥಿಗಳಾಗಿ ರವಿಚಂದ್ರ, ಡಾ. ಪುಷ್ಪಲತಾ, ಶೇರ್ ಅಲಿ, ವೈ. ಎಸ್. ಶಿಲ್ಪ, ಶಿವಕುಮಾರ್ ಮಲ್ಲಾಡದ, ಹೆಚ್. ಕೆ. ರೇವಣಸಿದ್ದನ ಗೌಡ, ಆರ್. ತಿಪ್ಪೇಸ್ವಾಮಿ, ಎ. ಮಹಾಲಿಂಗಪ್ಪ ಪಾಲ್ಗೊಳ್ಳಲಿದ್ದಾರೆ.

ಮೆರವಣಿಗೆಯಲ್ಲಿ ಬಸವಕಲಾ ಲೋಕದಿಂದ ನಂದಿಕೋಲು, ದುರ್ಗಮ್ಮದೇವಿ ಕೋಲಾಟ, ನಾಸಿಕ್ ಡೋಲು, ಸಹನಾ ರವಿ ಇಂಟರ್ ನ್ಯಾಷನಲ್ ಶಾಲಾ ಮಕ್ಕಳಿಂದ ವಿವಿಧ ವೇಷಭೂಷಣಗಳ ಪ್ರದರ್ಶನ ಸೇರಿದಂತೆ ವಿವಿಧ ಕಲಾತಂಡಗಳು ಭಾಗವಹಿಸಲಿವೆ ಎಂದರು.

ಅಂದು ಬೆಳಗ್ಗೆ 10 ಗಂಟೆಗೆ ನಡೆಯುವ ಸಮ್ಮೇಳನದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಎಸ್. ಎಸ್. ಮಲ್ಲಿಕಾರ್ಜುನ್ ಅಧ್ಯಕ್ಷತೆ ವಹಿಸಲಿದ್ದಾರೆ. ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಉದ್ಘಾಟನೆ ನೆರವೇರಿಸಲಿದ್ದಾರೆ. ಸಮ್ಮೇಳನದ ಅಧ್ಯಕ್ಷರಾದ ಸಾಹಿತಿ ಹಾಗೂ ಆಧ್ಯಾತ್ಮಿಕ ಚಿಂತಕರಾದ ಶಿವಾನಂದ ಗುರೂಜಿಯವರು ಉಪಸ್ಥಿತರಿರುವರು.

ಡಾ. ಶಾಮನೂರು ಶಿವಶಂಕರಪ್ಪ, ಜಿ.ಎಂ. ಗಂಗಾಧರ್ ಸ್ವಾಮಿ, ಕೆ.ಎಸ್. ಬಸವಂತಪ್ಪ, ಸುರೇಶ್ ಬಿ. ಇಟ್ನಾಳ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ದೂಡಾ ಅಧ್ಯಕ್ಷ ದಿನೇಶ್ ಕೆ. ಶೆಟ್ಟಿ, ಪಾಲಿಕೆ ಸದಸ್ಯೆ ಗೀತಾ ದಿಳ್ಯಪ್ಪ ಇನ್ನಿತರ ಗಣ್ಯರು ಉಪಸ್ಥಿತರಿರುವರು ಎಂದು ತಿಳಿಸಿದರು.

ಮಧ್ಯಾಹ್ನ 1.30 ರ 'ಸಾಹಿತ್ಯ ಚಿಂತನ ಮಂಥನ ಗೋಷ್ಠಿ' ನಡೆಯಲಿದ್ದು 'ದಾವಣಗೆರೆ ತಾಲ್ಲೂಕಿನ ಸಾಹಿತ್ಯ ಕ್ಷೇತ್ರದ ಸಾಧಕರು' ವಿಷಯ ಕುರಿತು ಡಾ. ಎ.ಬಿ. ರಾಮಚಂದ್ರಪ್ಪ ಹಾಗೂ 'ಮಕ್ಕಳು ಮತ್ತು ಯುವಕರು ಹಾಗೂ ಮಹಿಳೆಯರ ಮುಂದಿರುವ ಸವಾಲುಗಳು' ಕುರಿತು ಡಾ. ಪಿ.ಎಂ. ಅನುರಾಧ, 'ಕನ್ನಡ ಕಟ್ಟುವಲ್ಲಿ ತಂತ್ರಜ್ಞಾನದ ಪಾತ್ರ' ವೆಂಕಪ್ಪನವರ ಬಸವರಾಜ ಮಾತನಾಡಲಿದ್ದಾರೆ. ಡಾ. ಶಶಿಕಲಾ ಕೃಷ್ಣಮೂರ್ತಿ ಅಧ್ಯಕ್ಷತೆ ವಹಿಸಲಿದ್ದಾರೆ. ನಂತರ 2.30 ಕ್ಕೆ ನಡೆಯುವ ಕವಿಗೋಷ್ಠಿ ಅಧ್ಯಕ್ಷತೆಯನ್ನು ಮಹಾಂತೇಶ್ ಬಿ. ನಿಟ್ಟೂರು ವಹಿಸಲಿದ್ದಾರೆ.ಮಹಾಂತೇಶ್ ಪಾಟೀಲ್, ಜಿ. ಮುರುಗೆಪ್ಪ ಗೌಡ, ಡಿ.ಎಂ. ಹಾಲಾರಾಧ್ಯ ಉಪಸ್ಥಿತರಿರುವರು ಎಂದರು.

ಸಂಜೆ 4 ಗಂಟೆಗೆ 'ದಾವಣಗೆರೆ ತಾಲ್ಲೂಕಿನಲ್ಲಿ ಕಂಡುಬರುವ ಪ್ರಮುಖ ಶಾಸನಗಳು' ಕುರಿತು ಡಾ.ಬುರಡೆಕಟ್ಟೆ ಮಂಜಪ್ಪ ವಿಷಯ ಮಂಡನೆ ಮಾಡಲಿದ್ದಾರೆ. 4.30 ಕ್ಕೆ ಬಹಿರಂಗ ಅಧಿವೇಶನ ಜರುಗಲಿದ್ದು, ಗೌರವ ಕೋಶಾಧ್ಯಕ್ಷ ಹೆಚ್.ಕೆ. ಪಾಲಾಕ್ಷಪ್ಪ ಗೋಪನಾಳ್ ನಿರ್ಣಯಗಳನ್ನು ಮಂಡಿಸಲಿದ್ದಾರೆ.

ಸಂಜೆ 5 ಗಂಟೆಗೆ ಸಮಾರೋಪ ಸಮಾರಂಭದಲ್ಲಿ ಸಾಧಕರಿಗೆ ಸನ್ಮಾನ ನಡೆಯಲಿದೆ. ಸುಮತಿ ಜಯಪ್ಪ ಅಧ್ಯಕ್ಷತೆ ವಹಿಸಲಿದ್ದಾರೆ. ಸಮ್ಮೇಳನಾಧ್ಯಕ್ಷರ ಸಮೀಕ್ಷಾ ನುಡಿಗಳನ್ನು ಶ್ರೀ ಶಿವಾನಂದ ಗುರೂಜಿ ನುಡಿಯುವರು. ಸಮಾರೋಪ ನುಡಿಗಳನ್ನು ವಿಟಿಯು ಕುಲಸಚಿವ ಡಾ. ಬಿ.ಇ. ರಂಗಸ್ವಾಮಿ ಆಡುವರು. ಮಾಜಿ ಸಚಿವ ಎಸ್.ಎ. ರವೀಂದ್ರನಾಥ್ ಅವರನ್ನು ಸನ್ಮಾನಿಸಿ ಗೌರವಿಸಲಾಗುವುದು. ಮುಖ್ಯ ಅತಿಥಿಗಳಾಗಿ ವಿವಿಧ ಗಣ್ಯರು ಪಾಲ್ಗೊಳ್ಳಲಿದ್ದಾರೆ ಎಂದು ಮಾಹಿತಿ ನೀಡಿದರು. ಹೆಚ್. ಭಾರತಿ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರಿಗೆ ಸನ್ಮಾನಿಸಲಾಗುವುದು ಎಂದರು.

ಅಂದು ಸಂಜೆ 6.30 ಕ್ಕೆ ನಡೆಯುವ ಸಾಂಸ್ಕೃತಿಕ ಸಂಭ್ರಮದ ಉದ್ಘಾಟನೆಯನ್ನು ವೃತ್ತಿ ರಂಗಭೂಮಿ ರಂಗಾಯಣ ನಿರ್ದೇಶಕ ಮಲ್ಲಿಕಾರ್ಜುನ ಕಡಕೋಳ ನೆರವೇರಿಸುವರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ರವಿಚಂದ್ರ ಅಧ್ಯಕ್ಷತೆ ವಹಿಸಲಿದ್ದಾರೆ. ವಿವಿಧ ಶಾಲೆಗಳ ಮಕ್ಕಳು ಸಾಂಸ್ಕೃತಿಕ ಕಾರ್ಯಕ್ರಮ ನಡೆಸಿಕೊಡಲಿದ್ದಾರೆ ಎಂದು ವಿವರಿಸಿದರು.

ಸುದ್ದಿಗೋಷ್ಠಿಯಲ್ಲಿ ಕುರ್ಕಿ ಸಿದ್ದೇಶ್, ಶಿವಶಂಕರ್, ಲಿಂಗರಾಜ್ ಆನೆಕೊಂಡ, ಷಡಾಕ್ಷರಪ್ಪ ಎಂ. ಬೇತೂರು ಉಪಸ್ಥಿತರಿದ್ದರು

# ನಾಳೆ ಕ್ಯಾನ್ಸರ್ ಜಾಗೃತಿ ಕಾಲ್ನಡಿಗೆ ಜಾಥಾ




**ದಾವಣಗೆರೆ:** ವಿಶ್ವಾರಾಧ್ಯ ಕ್ಯಾನ್ಸರ್ ಆಸ್ಪತ್ರೆ ಮತ್ತು ಸಂಶೋಧನಾ ಸಂಸ್ಥೆ ಎಸ್. ಎಸ್. ಕೇರ್ ಟ್ರಸ್ಟ್ ಮತ್ತು ಬಾಪೂಜಿ ಎಜುಕೇಶನಲ್ ಅಸೋಸಿಯೇಷನ್ (ರಿ), ಇವರ ಸಹಯೋಗದೊಂದಿಗೆ ವಿಶ್ವ ಕ್ಯಾನ್ಸರ್ ದಿನಾಚರಣೆ ಅಂಗವಾಗಿ ಕ್ಯಾನ್ಸರ್ ಕಾಯಿಲೆ ಕುರಿತು ಜನಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಫೆ. 2 ಬೆಳಿಗ್ಗೆ 8.30 ಕ್ಕೆ ಗುಂಡಿ ವೃತ್ತದಿಂದ ಕಾಲ್ನಡಿಗೆ ಜಾಥವನ್ನು ಹಮ್ಮಿಕೊಂಡಿದ್ದೇವೆ ಎಂದು ವಿಶ್ವಾರಾಧ್ಯ ಕ್ಯಾನ್ಸರ್ ಆಸ್ಪತ್ರೆಯ ಸರ್ಜಿಕಲ್ ಅಂಕಾಲಜಿಸ್ಟ್ ಡಾ. ಅಜಯ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವಿಶ್ವಾರಾಧ್ಯ ಕ್ಯಾನ್ಸರ್ ಆಸ್ಪತ್ರೆ ಮತ್ತು ಸಂಶೋಧನಾ ಸಂಸ್ಥೆ 2009 ರಲ್ಲಿ ಪ್ರಾರಂಭವಾಗಿದ್ದು ಇಲ್ಲಿ ಕ್ಯಾನ್ಸರ್ ಚಿಕಿತ್ಸೆಯನ್ನು ಸಾರ್ವಜನಿಕರಿಗೆ ನೀಡಲಾಗುತ್ತಿದೆ. ಸ್ತನ ಕ್ಯಾನ್ಸರ್, ಗರ್ಭಕಂಠಕೋಶ ಕ್ಯಾನ್ಸರ್, ಗುದದ್ವಾರ ಕ್ಯಾನ್ಸರ್, ಅನ್ನನಾಳ ಕ್ಯಾನ್ಸರ್, ಬಾಯಿ, ಕುತ್ತಿಗೆ ಮತ್ತು ಗಂಟಲು ಕ್ಯಾನ್ಸರ್, ಸೇರಿದಂತೆ ಸರ್ಜರಿ, ಕಿಮೋಥೆರಪಿ ಸೇರಿದಂತೆ ಅತ್ಯಾಧುನಿಕ ರೆಡಿಯೇಷನ್ ಸೌಲಭ್ಯಗಳನ್ನು ಹೊಂದಿದೆ ಎಂದರು.

ನಮ್ಮ ಆಸ್ಪತ್ರೆಯಲ್ಲಿ ಎಪಿಎಲ್, ಬಿಪಿಎಲ್, ಯಶಸ್ವಿನಿ ಯೋಜನೆ, ಕೆಎಸ್ಆರ್ಟಿಸಿ ಹಾಗೂ ಖಾಸಗಿ ಇನ್ಶುರನ್ಸ್ ಸೌಲಭ್ಯಗಳು ದೊರೆಯುತ್ತವೆ. ಹೆಚ್ಚಿನ ಮಾಹಿತಿಗೆ ಮೊ: 9632377719 ಸಂಪರ್ಕಿಸಲು ತಿಳಿಸಿದರು.

ಎಸ್.ಎಸ್. ಕೇರ್ ಟ್ರಸ್ಟ್ ಕೋರ್ ಕಮಿಟಿ ಸದಸ್ಯರಾದ ಡಾ. ಮೂಗನ ಗೌಡ ಮಾತನಾಡಿ, 2019 ರಿಂದ · ·ಸ್ಪಂದನ ಮೂಲಕ ಸ್ತನ ಕ್ಯಾನ್ಸರ್, ಸರ್ವೈಕಲ್ ಕ್ಯಾನ್ಸರ್ ತಪಾಸಣೆ ನಡೆಸಿಕೊಂಡು ಬರುತ್ತಿದ್ದು, ಬೇತೂರು ರಸ್ತೆಯಲ್ಲಿರುವ ಎಸ್.ಎಸ್. ಆಸ್ಪತ್ರೆಯಲ್ಲಿ ಪ್ರತಿದಿನ ಬೆಳಿಗ್ಗೆ 10 ರಿಂದ 4 ರವರೆಗೆ ಸ್ತನ ಕ್ಯಾನ್ಸರ್ ಅನ್ನು ಗುರ್ತಿಸುವ ಉಚಿತ ಸ್ಕ್ರೀನಿಂಗ್ ಮಾಡಲಾಗುತ್ತದೆ ಎಂದರು.

ಸುದ್ದಿಗೋಷ್ಠಿಯಲ್ಲಿ, ಡಾ. ಧನ್ಯಕುಮಾರ್, ಡಾ. ಮಾಲತೇಶ್ ಉಪಸ್ಥಿತರಿದ್ದರು.

**ನಾಳೆ ಬೆಳಿಗ್ಗೆ 8.30 ಕ್ಕೆ ಹಮ್ಮಿಕೊಡಿರುವ ಕಾಲ್ನಡಿಗೆ ಜಾಥಾವು ಗುಂಡಿ ವೃತ್ತದಿಂದ ಆರಂಭವಾಗಿ, ವಿದ್ಯಾರ್ಥಿ ಭವನ್, ಅಂಬೇಡ್ಕರ್ ಸರ್ಕಲ್, ಜಯದೇವ ವೃತ್ತ, ಗಾಂಧೀ ಸರ್ಕಲ್ ಮೂಲಕ ಹೈಸ್ಕೂಲ್ ಮೈದಾನದಲ್ಲಿ ಕೊನೆಗೊಳ್ಳಲಿದೆ ಎಂದರು.**

# ದೇವಸ್ಥಾನದ ಹುಂಡಿ ಕಳವು ಯತ್ನ: ಮೂವರ ಬಂಧನ

**ಜಗಳೂರು:** ತಾಲ್ಲೂಕಿನ ಅಣಬೂರು ಗ್ರಾಮದ ದೇವಸ್ಥಾನದಲ್ಲಿನ ಹುಂಡಿ ಕಳವು ಮಾಡಲು ಯತ್ನಿಸುತ್ತಿದ್ದ ಮೂವರನ್ನು ಪೊಲೀಸರು ಬಂಧಿಸಿದ್ದು, ನ್ಯಾಯಾಂಗದ ಒಪ್ಪಿಸಿದ್ದಾರೆ. ಸುಪರ್ದಿಗೆ ವಿಜಯನಗರ ಜಿಲ್ಲೆ ಕೂಡ್ಲಿಗಿ ತಾಲ್ಲೂಕಿನ ಶಾಂತನಹಳ್ಳಿಯ ನಾಗರಾಜ್, ಶಿವಪ್ಪ ಎಂ., ನರಸಿಂಹಪ್ಪ ಬಂಧಿತರು. ಈಚೆಗೆ ಅಣಬೂರು ಹೊರವಲಯದ ಆಂಜನೇಯ ದೇವಸ್ಥಾನದಲ್ಲಿ ಮೂವರು, ಹುಂಡಿ ಕಳವು ಮಾಡುವ ಸಮಯದಲ್ಲಿ ಅಣಬೂರು ಗೊಲ್ಲರಹಟ್ಟಿ ಗ್ರಾಮದ ವ್ಯಕ್ತಿಯೊಬ್ಬರು ನೋಡಿ 112ಕ್ಕೆ ಕರೆ ಮಾಡಿದ್ದರು. ಹೊಯ್ಸಳ ಸಿಬ್ಬಂದಿ ಕೆಲವೇ ನಿಮಿಷಗಳಲ್ಲಿ ಸ್ಥಳಕ್ಕೆ ತೆರಳಿ ಆರೋಪಿಗಳನ್ನು ಬಂಧಿಸಿದ್ದರು. ಆರೋಪಿಗಳಿಂದ ಮೋಟರ್ ಬೈಕ್ ಮತ್ತು ಕಬ್ಬಿಣದ ರಾಡ್ ವಶಪಡಿಸಿಕೊಳ್ಳಲಾ–ಗಿದೆ. ಸಿಪಿಐ ರಾಷ್ಟ್ರಪತಿ ಮಾರ್ಗದರ್ಶನದಲ್ಲಿ ಎಸ್.ಐ. ಮಂಜುನಾಥ್, ಸಿಬ್ಬಂದಿ ಹಾಲೇಶ್ ಕಾರ್ಯಾಚರಣೆ ನಡೆಸಿದ್ದರು.

## ವಂಚನೆ: ಅಂಚೆಪಾಲಕನಿಗೆ ಜೈಲು

**ದಾವಣಗೆರೆ:** ಗ್ರಾಹಕರು ಪಾವತಿಸಿದ ಸುಕನ್ಯಾ ಸಮೃದ್ಧಿ ಯೋಜನೆಯ ಹಣವನ್ನು ಅಂಚೆ ಇಲಾಖೆಗೆ ಜಮಾ ಮಾಡದೇ ವಂಚಿಸಿದ್ದ ಅಂಚೆಪಾಲಕನಿಗೆ ಚನ್ನಗಿರಿಯ ಪ್ರಧಾನ ಸಿಜೆ ನ್ಯಾಯಾಲಯ ಒಂದು ವರ್ಷ ಆರು ತಿಂಗಳು ಕಠಿಣ ಜೈಲು ಹಾಗೂ 10 ಸಾವಿರ ದಂಡ ವಿಧಿಸಿ ಆದೇಶಿಸಿದೆ. ಚನ್ನಗಿರಿ ತಾಲ್ಲೂಕಿನ ಚಿರಡೋಣಿಯ ಅಂಚೆ ಪಾಲಕ ಕೆ.ಆರ್. ಶ್ರೀಕಾಂತ್ ಶಿಕ್ಷೆಗೆ ಗುರಿಯಾದ ಅಪರಾಧಿ. ಪ್ರಕರಣದ ವಿಚಾರಣೆ ನಡೆಸಿದ ನ್ಯಾಯಾಧೀಶ ಸಿದ್ದಲಿಂಗಯ್ಯ ಬಿ. ಗಂಗಾಧರಮಠ ಆದೇಶ ಪ್ರಕಟಿಸಿದ್ದಾರೆ. ಚಿರಡೋಣಿ ಅಂಚೆ ಕಚೇರಿ ವ್ಯಾಪ್ತಿಯ ನಾಲ್ವರು ಗ್ರಾಹಕರು ಸುಕನ್ಯಾ ಸಮೃದ್ಧಿ ಯೋಜನೆಯ ಹಣ ಪಾವತಿಸಿದ್ದರು. ಹಣ ಪಡೆದ ಅಂಚೆಪಾಲಕ ಖಾತೆದಾರರ ಪುಸ್ತಕದಲ್ಲಿ ಹಣ ಪಾವತಿಸಿದ ರಸ್ತೆ ಹಾಕಿ ಮರಳಿಸಿದ್ದರು. ಈ ಹಣವನ್ನು ಅಂಚೆ ಇಲಾಖೆಗೆ ಜಮಾ ಮಾಡದೇ ಸ್ವಂತಕ್ಕೆ ಬಳಸಿಕೊಂಡಿದ್ದರು. 1.08 ಲಕ್ಷ ವಂಚನೆ ಮಾಡಿರುವ ಕುರಿತು ಅಂಚೆ ಇಲಾಖೆ ಶಿವಮೊಗ್ಗ ಪೂರ್ವ ವಿಭಾಗದ ಸಹಾಯಕ ಅಂಚೆ ಅಧೀಕ್ಷಕ ಡಿ. ಗಣೇಶ್ ಬಸವಾಪಟ್ಟಣ ಠಾಣೆಗೆ ದೂರು ನೀಡಿದ್ದರು. ಪ್ರಕರಣದ ತನಿಖೆ ನಡೆಸಿದ ಪೊಲೀಸರು ನ್ಯಾಯಾಲಯಕ್ಕೆ ದೋಷಾರೋಪಪಟ್ಟಿ ಸಲ್ಲಿಸಿದ್ದರು. ಸಹಾಯಕ ಸರ್ಕಾರಿ ವಕೀಲೆ ಮಂಜವ್ವ ದಾಸರ್ ಸರ್ಕಾರದ ಪರ ವಾದ ಮಂಡಿಸಿದ್ದರು.

## ಸಂಘಕ್ಕೆ ಆಯ್ಕೆ

**ಹರಿಹರ:** ತಾಲ್ಲೂಕಿನ ಬೆಳ್ಳೂಡಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಅಧ್ಯಕ್ಷ ಸಪ್ಪಾಳಿ ಸಿದ್ದೇಶಪ್ಪ ಆಯ್ಕೆ–ಯಾಗಿದ್ದಾರೆ ಎಂದು ಸಂಘದ ಪ್ರಕಟಣೆ ತಿಳಿಸಿದೆ.

## ಮೆಸ್ಕಾಂ ಜನ ಸಂಪರ್ಕ ಸಭೆ

**ಶಿವಮೊಗ್ಗ :** ಭದ್ರಾವತಿ ಮೆಸ್ಕಾಂ ನಗರ ಉಪವಿಭಾಗ ಕಛೇರಿಯಲ್ಲಿ ಫೆ 03 ರಂದು ಬೆಳಿಗ್ಗೆ 11.00 ರಿಂದ 01.00 ಗಂಟೆಯವರೆಗೆ ಜನಸಂಪರ್ಕ ಸಭೆ ನಡೆಯಲ್ಲಿದೆ, ಮೆಸ್ಕಾಂನ ಈ ಸಭೆಯಲ್ಲಿ ಅಧಿಕಾರಿಗಳು ಭಾಗವಹಿಸಲ್ಲಿದ್ದು, ಸಂಬಂಧಪಟ್ಟ ಪ್ರದೇಶದ ಗ್ರಾಹಕರ ಅಹವಾಲುಗಳನ್ನು ಸ್ವೀಕರಿಸುವುದರಿಂದ ಈ ಅವಕಾಶವನ್ನು ಗ್ರಾಹಕರು ಸದುಪಯೋಗಪಡಿಸಿಕೊಳ್ಳುವಂತೆ ಮೆಸ್ಕಾಂ ಪ್ರಕಟಣೆ ತಿಳಿಸಿದೆ.

# ನಿಧನ ಸುದ್ದಿಗಳು

### ಮಹೇಶ್ವರಪ್ಪ ನಿಧನ

**ನ್ಯಾಮತಿ:**ಪಟ್ಟಣದ ಟ್ಯಾಗೋರ್ ರಸ್ತೆ (ಕೊವೇರಬೀದಿ) ನಿವಾಸಿ ಹವಳದ ಮಹೇಶ್ವರಪ್ಪ ಹೆಚ್. ಎಂ.(73)ಬುಧವಾರ ಸಂಜೆ ಮಣಿಪಾಲ್ ಆಸ್ಪತ್ರೆಯಲ್ಲಿ ನಿಧನರಾದರು. ಮೃತರಿಗೆ ಪತ್ನಿ, ಒಂದು ಹೆಣ್ಣು, ಒಂದು ಗಂಡು ಮಕ್ಕಳು ಹಾಗೂ ಬಂಧು ಬಳಗ ಇದ್ದಾರೆ. ಮೃತರ ಅಂತ್ಯಕ್ರಿಯೆ ನ್ಯಾಮತಿ ಹಿಂದೂ ರುದ್ರಭೂಮಿಯಲ್ಲಿ ಗುರುವಾರ ಮಧ್ಯಾಹ್ನ ನೆರವೇರಿತು.

# ವೇತನ ಬಾಕಿ ಬಿಡುಗಡೆಗೆ ಆಗ್ರಹ: ಫೆಬ್ರವರಿ 1ರಿಂದ ಕೆಎಂಎಫ್ ನೌಕರರ ಮುಷ್ಕರದ ಬೆದರಿಕೆ

**ಬೆಂಗಳೂರು:** ಬಾಕಿ ವೇತನ ಬಿಡುಗಡೆಯೂ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಕರ್ನಾಟಕ ಹಾಲು ಮಹಾಮಂಡಳ (ಕೆಎಂಎಫ್) ನೌಕರರು ಆಗ್ರಹಿಸಿದ್ದಾರೆ. ಬೇಡಿಕೆಗಳನ್ನು ಈಡೇರಿಸದಿದ್ದರೆ ಫೆಬ್ರವರಿಯಿಂದ ಮುಷ್ಕರ ನಡೆಸುವುದಾಗಿ ಅವರು ಸರ್ಕಾರಕ್ಕೆ ಎಚ್ಚರಿಕೆ ನೀಡಿದ್ದಾರೆ.ನೌಕರರ ಸಂಘವು ಈಗಾಗಲೇ ಆಡಳಿತ ಮಂಡಳಿಗೆ ಮನವಿ ಪತ್ರ ಸಲ್ಲಿಸಿದ್ದು, ತಮ್ಮ ಬೇಡಿಕೆಗಳನ್ನು ಈಡೇರಿಸಲು ಒಂದು ವಾರ ಕಾಲಾವಕಾಶ ನೀಡಿದೆ. ಇದು ಜನವರಿ 31ಕ್ಕೆ ಕೊನೆಗೊಳ್ಳಲಿದೆ. ಅಷ್ಟರೊಳಗೆ ಬೇಡಿಕೆಗಳು ಈಡೇರದಿದ್ದರೆ ಮುಷ್ಕರ ನಡೆಸಲಾಗುವುದು ಎಂದು ನೌಕರರ ಸಂಘ ಎಚ್ಚರಿಕೆ ನೀಡಿದೆ.7ನೇ ವೇತನ ಆಯೋಗದ ಶಿಫಾರಸಿನಂತೆ ಬಾಕಿ ಉಳಿದಿರುವ ವೇತನ ಶೀಘ್ರವೇ ಮಂಜೂರು ಮಾಡಬೇಕೆಂದು ಕೆಎಂಎಫ್ ನೌಕರರ ಸಂಘದ ಅಧ್ಯಕ್ಷ ಗೋವಿಂದಗೌಡ ಆಗ್ರಹಿಸಿದ್ದಾರೆ. 7ನೇ ವೇತನ ಆಯೋಗದ ಶಿಫಾರಸಿನ ಪ್ರಕಾರನ ಶೇ 25 ರ ವೇತನ ಹೆಚ್ಚಳಕ್ಕೆ ಸರ್ಕಾರ ಒಪ್ಪಿಗೆ ನೀಡಿತ್ತು. ಆದರೆ ಈ ಪೈಕಿ ಶೇ 17 ರಷ್ಟು ಮಾತ್ರ ಹೆಚ್ಚಳ ಮಾಡಿದೆ. ಶೇ 8 ರಷ್ಟು ವೇತನ ಹೆಚ್ಚಳ ಹಾಗೂ ಬಿಡುಗಡೆ ಬಾಕಿ ಇದೆ. ಅವುಗಳನ್ನು ಈಡೇರಿಸಬೇಕು ಎಂದು ಗೋವಿಂದಗೌಡ ಹೇಳಿದ್ದಾರೆ. ಕೆಎಂಎಫ್ ರಾಜ್ಯಾದ್ಯಂತ ಸುಮಾರು 7,000 ಉದ್ಯೋಗಿಗಳನ್ನು ಒಳಗೊಂಡಿದೆ, ಅವರಲ್ಲಿ 1,400 ಉನ್ನತ ದರ್ಜೆಯ ಸಿಬ್ಬಂದಿ ಇದ್ದಾರೆ. ಇದರ ಆಧಾರದಲ್ಲಿ ಲೆಕ್ಕಹಾಕಿದರೆ, ವೇತನ ಹೆಚ್ಚಳ ಜಾರಿಗೆ ಬಂದರೆ ಅದಕ್ಕಾಗಿ ಸರ್ಕಾರ ತಿಂಗಳಿಗೆ 3 ಕೋಟಿ ರೂ. ವ್ಯಯಿಸಬೇಕಾಗುತ್ತದೆ. ಸದ್ಯದ ಮಟ್ಟಿಗೆ, ವೇತನ ಬಾಕಿಯ ಮೊತ್ತದ ಬಿಡುಗಡೆ ಮಾಡಲು ಸರ್ಕಾರವು ಇನ್ನೂ ಅನುಮತಿ ನೀಡಿಲ್ಲ ಎಂದು ಆಡಳಿತ ಮಂಡಳಿ ಭಾವಿಸಿದೆ ಎಂದು ಕೆಎಂಎಫ್ ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಕೆಎಂಎಫ್ ದಿನಕ್ಕೆ ಸುಮಾರು 1 ಲಕ್ಷ ಲೀಟರ್ ಹಾಲನ್ನು ಗ್ರಾಹಕರಿಗೆ ಪೂರೈಸುತ್ತಿದ್ದು, 15 ಒಕ್ಕೂಟಗಳ ಮೂಲಕ ಹಾಲು ಸಂಗ್ರಹಿಸುತ್ತಿದೆ.

# ಮಹಿಳೆಗೆ ವಂಚನೆ– ಆರೋಪಿ ಬಂಧನ

**ಚಿಕ್ಕಮಗಳೂರು:** ಮೈಕ್ರೋ ಫೈನಾನ್ಸ್‌ಗಳ ಕಿರುಕುಳದಿಂದ ರಾಜ್ಯದಲ್ಲಿ ಸರಣಿ ಆತ್ಮಹತ್ಯೆಗಳು ಮುಂದುವರಿದಿರುವ ಬೆನ್ನಲ್ಲೇ ಖಾಸಗಿ ಬ್ಯಾಂಕ್ ಮ್ಯಾನೇಜರ್ ಎಂದು ಹೇಳಿಕೊಂಡು ಮಹಿಳೆಯೊಬ್ಬರಿಗೆ ವಂಚಿಸಿದ ವ್ಯಕ್ತಿಯೊಬ್ಬನನ್ನು ನಗರಠಾಣೆ ಪೊಲೀಸರು ಬಂಧಿಸಿದ್ದಾರೆ.ಆಲ್ದೂರು ಮೂಲದ ಸಂತೋಷ್ ಎಂಬಾತ ಬಂಧಿತ ಆರೋಪಿಯಾಗಿದ್ದು, ಆತನೊಂದಿಗೆ ಆತನ ಪತ್ನಿ ಆಶಾರಾಣಿ ಮತ್ತೋರ್ವ ಜಿನ್ನು ಎಂಬಾತನ ವಿರುದ್ಧ ವಂಚನೆ ಪ್ರಕರಣ ದಾಖಲಾಗಿದೆ. ಈ ಮೂರು ಮಂದಿ ಮಂಜುಳಾ ಎಂಬ ಮಹಿಳೆಗೆ ನಾಲ್ಕು ಲಕ್ಷ ರೂ. ವಂಚನೆ ಮಾಡಿದ್ದಾರೆ. ಮಹಿಳೆ ಖಾಸಗಿ ಬ್ಯಾಂಕ್‌ನಲ್ಲಿ ಸಾಲ ಪಡೆದ ಬಗ್ಗೆ ಮಾಹಿತಿ ತಿಳಿದುಕೊಂಡ ಸಂತೋಷ್ ತಾನು ಅದೇ ಸಂಸ್ಥೆಯ ಮ್ಯಾನೇಜರ್ ಎಂದು ಹೇಳಿಕೊಂಡು ಹಳೆಯ ಸಾಲ ಪಾವತಿ ಮಾಡಿದರೆ 10 ಲಕ್ಷ ರೂ. ಸಾಲ ನೀಡುವುದಾಗಿ ಮಂಜುಳಾಗೆ ಭರವಸೆ ನೀಡಿದ್ದ. ಆತನ ಮಾತು ನಂಬಿ ಮಹಿಳೆ ಖಾಸಗಿ ಬ್ಯಾಂಕಿನಲ್ಲಿ ಸಾಲ ಮಾಡಿ ನಾಲ್ಕು ಲಕ್ಷ ರೂ. ಹಣ ಹೊಂದಿಸಿ ಸಂತೋಷ್‌ಗೆ ನೀಡಿದ್ದರು. ಆದರೆ ಸಾಲ ತೀರುವಳಿ ಆಗದಿರುವುದು ಗಮನಕ್ಕೆ ಬಂದು ವಿಚಾರಿಸಿದಾಗ ತಾನು ವಂಚನೆಗೊಳಗಾಗಿರುವುದು ಮಹಿಳೆಗೆ ಗೊತ್ತಾಗಿದೆ. ಇತ್ತ ಸಾಲ ನೀಡಿದ್ದ ಮೈಕ್ರೋ ಫೈನಾನ್ಸ್ ಮತ್ತು ಖಾಸಗಿ ಬ್ಯಾಂಕ್ ಸಿಬ್ಬಂದಿಯಿಂದ ಕಿರುಕುಳ ಹೆಚ್ಚಾಗಿದೆ ಈ ಕಾರಣಕ್ಕೆ ಬಡ ಕುಟುಂಬ ಮನೆ ತೊರೆದಿತ್ತು.ಮಂಗಳವಾರ ಚಿಕ್ಕಮಗಳೂರು ನಗರದ ಮಲ್ಲೇಗೌಡ ಸರ್ಕಾರಿ ಆಸ್ಪತ್ರೆಗೆ ಮಂಜುಳಾ ಚಿಕಿತ್ಸೆಗೆಂದು ಬಂದಿದ್ದರು. ಈ ವೇಳೆ ಆಸ್ಪತ್ರೆ ಬಳಿಯೇ ಬಂದಿದ್ದ ಸಂತೋಷ್ ಮಾಧ್ಯಮದವರನ್ನು ಕಂಡು ಜಾಗ ಖಾಲಿ ಮಾಡಿದ್ದಾನೆ. ಈ ಬಗ್ಗೆ ಪ್ರಕರಣ ದಾಖಲಿಸಿಕೊಂಡಿರುವ ನಗರಠಾಣೆ ಪೊಲೀಸರು ಸಂತೋಷ್‌ನನ್ನು ವಶಕ್ಕೆ ಪಡೆದಿದ್ದಾರೆ.

# ಅಗ್ನಿ ಅವಘಡ: ಅಣಕು ಪ್ರದರ್ಶನ

**ಶಿವಮೊಗ್ಗ:** ಇಲ್ಲಿನ ಬಿಹೆಚ್ ರಸ್ತೆಯ ಸರ್ಕಾರಿ ಬಾಲಿಕಾ ಪದವಿ ಪೂರ್ವ ಕಾಲೇಜಿನಲ್ಲಿ ಅಗ್ನಿ ಅವಘಡ ಪ್ರಾತ್ಯಕ್ಷಿಕೆಯ ಅಣಕು ಪ್ರದರ್ಶನ ನಡೆಯಿತು. ಈ ಸಂದರ್ಭದಲ್ಲಿ ಕಾಲೇಜಿನ ವಿದ್ಯಾರ್ಥಿಗಳಿಗೆ ಅಗ್ನಿಶಾಮಕ ದಳದ ಠಾಣಾಧಿಕಾರಿ ನರೇಂದ್ರ ಅವರು ಅಗ್ನಿ ಅವಘಡ, ಅವುಗಳನ್ನು ನಿಯಂತ್ರಿಸುವ ಕುರಿತು ಮಾಹಿತಿ ನೀಡಿದರು.ಪ್ರಮುಖವಾಗಿ ಮನೆಗಳಲ್ಲಿ ಅಡುಗೆ ಅನಿಲ ಸೋರಿಕೆಯಾದಾಗ ಯಾವ ರೀತಿಯ ಕ್ರಮ ಕೈಗೊಳ್ಳಬೇಕು. ಅಡುಗೆ ಅನಿಲದ ಒಲೆ ಮತ್ತು ಸಿಲಿಂಡರ್‌ಗೆ ಕನಿಷ್ಟ 5 ಅಡಿ ಅಂತರವಿರಬೇಕು ಮತ್ತು ಸಿಲಿಂಡರ್ ಕಾಲಾವಧಿ ಅದರ ತುದಿಯಲ್ಲಿ ಎ.ಬಿ.ಸಿ. ಡಿ ಎಂದು ಹಾಕಿ ಇಸವಿ ನಮೂದಿಸಿರುತ್ತಾರೆ. ಅದನ್ನು ತಿಳಿದುಕೊಳ್ಳಬೇಕು. ಆ ಇಸವಿಯ ಒಳಗೆ ಮಾತ್ರ ಅದನ್ನು ಬಳಸಬೇಕು. ಒಂದು ವೇಳೆ ಸರಬರಾಜುದಾರರು ಅವಧಿ ಮುಗಿದ ಸಿಲಿಂಡರ್‌ಗಳನ್ನು ನೀಡಿದ್ದಲ್ಲಿ ನಿಮಗೆ ಅದರ ಅರಿವಿರಬೇಕು. ಕೂಡಲೇ ಅದನ್ನು ಹಿಂತಿರುಗಿಸಬೇಕು ಎಂದು ಮಾಹಿತಿ ನೀಡಿದರು.ಪ್ರಮುಖವಾಗಿ ಶಾಲಾ ಕಾಲೇಜುಗಳು ಸಿನಿಮಾ ಮಂದಿರಗಳು, ಹಾಸ್ಟೆಲ್‌ಗಳು ಇನ್ನಿತರ ಸಾರ್ವಜನಿಕ ಸ್ಥಳಗಳಲ್ಲಿ ಅಗ್ನಿ ಅವಘಡ ಸಂಭವಿಸಿದಾಗ ಯಾವ ರೀತಿ ವರ್ತಿಸಬೇಕು ಎಂಬುದನ್ನು ತಿಳಿಸಿದ ಅವರು ಕೂಡಲೇ 112 ಸಂಖ್ಯೆಗೆ ಕರೆ ಮಾಡಿದರೆ ಅಗ್ನಿಶಾಮಕ ದಳಕ್ಕೆ ಅವಘಡ ಸಂಭವಿಸಿದ ಸ್ಥಳದ ಲೋಕೇಷನ್ ಸಹಿತ ಮಾಹಿತಿ ಸಿಗುತ್ತದೆ ಎಂದರು.ಅಗ್ನಿಶಾಮಕ ದಳದಲ್ಲಿ ಅತ್ಯಾಧುನಿಕ ಸಲಕರಣೆಗಳು ಮತ್ತು ನುರಿತ ಸಿಬ್ಬಂದಿಗಳಿದ್ದಾರೆ. ನೀರು ಮತ್ತು ಅಗ್ನಿ ಅಪಘಾತಗಳು ಸೇರಿದಂತೆ ಯಾವುದೇ ತುರ್ತು ಸಂದರ್ಭದಲ್ಲಿ ಕಾರ್ಯಾಚರಿಸಲು ಅಗ್ನಿಶಾಮಕ ದಳದಲ್ಲಿ ಎಲ್ಲಾ ರೀತಿಯ ಸೌಲಭ್ಯಗಳಿವೆ. ಇದರ ಅರಿವು ಪ್ರತಿಯೊಬ್ಬರಿಗೆ ಇರಬೇಕು. ಅವಘಡ ತಪ್ಪಿಸಲು ಸಹಕಾರಿಯಾಗುತ್ತದೆ ಎಂದರು. ಈ ಸಂದರ್ಭದಲ್ಲಿ ಕಾಲೇಜಿನ ಪ್ರಾಂಶುಪಾಲ ಹೆಚ್. ಜಯಂತ್ ಹಾಗೂ ಕಾಲೇಜು ಅಭಿವೃದ್ಧಿ ಸಮಿತಿಯ ಚನ್ನವೀರಪ್ಪ ಗಾಮನಗಟ್ಟಿ ಹಾಗೂ ಕಾಲೇಜಿನ ಅಧ್ಯಾಪಕರು, ವಿದ್ಯಾರ್ಥಿಗಳು ಇದ್ದರು.



# ಹೊಸಪೇಟೆ: ವಿಜಯ ವಿಠಲ ಗೋಪುರದ ಬಿರುಕು ಅಧ್ಯಯನಕ್ಕೆ ಎಎಸ್‌ಐನಿಂದ 3ಡಿ ಸಮೀಕ್ಷೆ

**ಹೊಸಪೇಟೆ:** ಹಂಪಿಯಲ್ಲಿರುವ ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆ (ಂಖಖ)ಯು ವಿಜಯ ವಿಠಲ ದೇವಾಲಯದ 3ಆ ಸಮೀಕ್ಷೆಯನ್ನು ಪ್ರಾರಂಭಿಸಿದೆ.ಖಾಸಗಿ ಸಂಸ್ಥೆಯ ಸಹಯೋಗದೊಂದಿಗೆ ಸ್ಮಾರಕದ ಸಂರಕ್ಷಣೆಗಾಗಿ ಈ ಕಾರ್ಯವನ್ನು ಕೈಗೊಳ್ಳಲಾಗುತ್ತಿದೆ. ಮುಂದಿನ ಕೆಲವು ದಿನಗಳಲ್ಲಿ, ಅಧಿಕಾರಿಗಳು ಸ್ಮಾರಕದ ಸಂಪೂರ್ಣ ಡಿಜಿಟಲ್ ಮಾಹಿತಿಯನ್ನು ಪಡೆಯಲಿದ್ದಾರೆ. ಸಮೀಕ್ಷೆ ನಡೆಸುವಾಗ ಪ್ರವಾಸಿಗರು ಪ್ರದೇಶಗಳಿಗೆ ಪ್ರವೇಶಿಸುವುದನ್ನು ನಿಷೇಧಿಸಲಾಗಿದೆ.ಸ್ಮಾರಕಕ್ಕೆ ಯಾವುದೇ ಹಾನಿಯಾಗಿದೆಯೇ ಎಂದು ತಿಳಿಯಲು ಡ್ರೋನ್ಗಳು ಮತ್ತು ಇತರ ಸುಧಾರಿತ ತಂತ್ರಜ್ಞಾನವನ್ನು ಬಳಸುತ್ತಿದ್ದಾರೆ. ಸ್ಮಾರಕದ ಆರೋಗ್ಯವನ್ನು ನಿರ್ಣಯಿಸಲು ಇಂತಹ ಸುಧಾರಿತ ತಂತ್ರಜ್ಞಾನವನ್ನು ಬಳಸುತ್ತಿರುವುದು ಇದೇ ಮೊದಲು. 13 ಮತ್ತು 16 ನೇ ಶತಮಾನದ ನಡುವೆ ವಿಜಯನಗರ ಸಾಮ್ರಾಜ್ಯವು ನಿರ್ಮಿಸಿದ ದೇವಾಲಯವನ್ನು ಸಂರಕ್ಷಿಸಲು ಈ ಕೆಲಸ ಮುಖ್ಯವಾಗಿದೆ. ಕಳೆದ ವರ್ಷ 3ಆ ಸಮೀಕ್ಷೆಯ ಪ್ರಯೋಗವನ್ನು ನಡೆಸಲಾಯಿತು.3ಆ ಮಾದರಿಯನ್ನು ರಚಿಸಲು ಡಿಫರೆನ್ಷಿಯಲ್ ಗ್ಲೋಬಲ್ ಪೊಸಿಷನಿಂಗ್ ಸಿಸ್ಟಮ್ (ಆಉಖಖ) ಮತ್ತು ಲೈಟ್ ಡಿಟೆಕ್ಷನ್ ಮತ್ತು ರೇಂಜಿಂಗ್ (ಲಿಡಾರ್) ಸಮೀಕ್ಷೆಯನ್ನು ವಿಜಯ ವಿಠಲ ದೇವಾಲಯ ಗೋಪುರದಲ್ಲಿ ಮಾಡಲಾಗುತ್ತಿದೆ ಎಂದು ಹಿರಿಯ ಂಖಖ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.ಇದು ಒಂದು ಸೆಂಟಿಮೀಟರ್ ವರೆಗೆ ನಿಖರವಾಗಿರುತ್ತದೆ. ಇದು ಮಾನವ ಶ್ರಮವನ್ನು ಕಡಿಮೆ ಮಾಡುವುದಲ್ಲದೆ, ರಚನೆಯ ವಿವರವಾದ ಚಿತ್ರಣವನ್ನು ನೀಡುತ್ತದೆ. ದುರಸ್ತಿ ಕಾರ್ಯವನ್ನು ಯೋಜಿಸಲು ಈ ಸಮೀಕ್ಷೆಯು ಗೋಪುರದ ನಿಖರವಾದ ಸ್ಥಿತಿಯ ಬಗ್ಗೆ ಮಾಹಿತಿ ಸಹ ಒದಗಿಸುತ್ತದೆ. ನಾವು ಬೆಂಗಳೂರಿನ ಏಜೆನ್ಸಿಯ ಸಹಾಯದಿಂದ ಇದನ್ನು ಮಾಡುತ್ತಿದ್ದೇವೆ ಎಂದು ತಿಳಿಸಿದ್ದಾರೆ.ಹಂಪಿಯಲ್ಲಿರುವ ಂಖಖ ಈ ತಂತ್ರಜ್ಞಾನವನ್ನು ಬಳಸುತ್ತಿರುವುದು ಇದೇ ಮೊದಲು. ಹಂಪಿಯ ವಿಜಯ ವಿಠಲ ದೇವಸ್ಥಾನದ ಮುಂಭಾಗದ ಗೋಪುರದಲ್ಲಿ ಕಾಣಿಸಿರುವ ಬಿರುಕಿನ ಅಧ್ಯಯನಕ್ಕೆ ಡ್ರೋನ್ ಕ್ಯಾಮೆರಾ ಮೂಲಕ ಮೂರು ಆಯಾಮದ ಸಮೀಕ್ಷೆ ಕಾರ್ಯ ನಡೆಯಿತು. ಅದಕ್ಕಾಗಿ ಗೋಪುರದ ಸುತ್ತಮುತ್ತ ತೆರಳದಂತೆ ಪ್ರವಾಸಿಗರಿಗೆ ನಿರ್ಬಂಧ ಹೇರಲಾಯಿತು.

# ಕಾನೂನು ನಾವು ಪಾಲಿಸಿದರೆ ದೇಶ ಗೌರವಿಸಿದಂತೆ



**ಶಿವಮೊಗ್ಗ:** ಕಾನೂನುಗಳನ್ನು ನಾವು ಪಾಲಿಸಿದರೆ ಮಾತ್ರ ದೇಶವನ್ನು ಗೌರವಿಸಿದಂತಾಗುತ್ತದೆ ಎಂದು ಎಪಿಎಂಸಿ ಮಾಜಿ ಅಧ್ಯಕ್ಷ ಎಸ್.ಎಸ್. ಜ್ಯೋತಿಪ್ರಕಾಶ್ ಹೇಳಿದರು. ನಗರದ ರಾಯಲ್ ಇಂಗ್ಲೀಷ್ ಮೀಡಿಯಂ ಶಾಲೆಯಲ್ಲಿ ನಡೆದ ಗಣರಾಜ್ಯೋತ್ಸವದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ನಮ್ಮ ದೇಶದಲ್ಲಿ ಸಾಕಷ್ಟು ಕಾನೂನುಗಳಿವೆ. ಆದರೆ ಸರಿಯಾದ ರೀತಿಯಲ್ಲಿ ಪಾಲನೆಯಾಗುತ್ತಿಲ್ಲ. ಯಾವ ದೇಶದಲ್ಲಿ ಕಾನೂನಿಗೆ ಗೌರವಿಸಿ ಕಾನೂನನ್ನು ಪಾಲಿಸುವರೋ ಆ ದೇಶ ಖಂಡಿತ ಅಭಿವೃದ್ಧಿಯಾಗುವುದರಲ್ಲಿ ಸಂದೇಹವಿಲ್ಲ ಎಂದರು.

ಅತಿಥಿಯಾಗಿ ಆಗಮಿಸಿದ್ದ ಮಹಾನಗರ ಪಾಲಿಕೆ ಆರೋಗ್ಯ ನಿರೀಕ್ಷಕ ಕೃಷ್ಣಮೂರ್ತಿ ಮಾತನಾಡಿ, ಪರಿಸರದ ಬಗ್ಗೆ ಜಾಗೃತಿ ಅತ್ಯಂತ ಅವಶ್ಯಕವಾಗಿದೆ. ಮಕ್ಕಳು, ಪೋಷಕರು, ನಾವೆಲ್ಲ ನಮ್ಮ ನಮ್ಮ ಮನೆಯಲ್ಲಿ ಕಸವನ್ನು ವಿಂಗಡಿಸುವುದರ ಮೂಲಕ ಪರಿಸರ ಸಂರಕ್ಷಣೆಯನ್ನು ಮಾಡಬಹುದು. ಪ್ಲಾಸ್ಟಿಕ್‌ನಿಂದ ಆಗುತ್ತಿರುವ ಸಮಸ್ಯೆಗಳಿಗೆ ನಮ್ಮಲ್ಲಿಯೇ ಪರಿಹಾರವಿದೆ. ನಾವು ಪ್ಲಾಸ್ಟಿಕ್ ಬಳಕೆಯನ್ನು ಸಂಪೂರ್ಣವಾಗಿ ನಿಲ್ಲಿಸಿ, ಅದರಿಂದ ಆಗುವ ದುಷ್ಪರಿಣಾಮಗಳನ್ನು ತಡೆಯಬಹುದಾಗಿದೆ ಎಂದರು.

ಶಾಲೆಯ ಸಲಹಾ ಸಮಿತಿ ಸದಸ್ಯರಾದ ಡಾ. ನಾಗರಾಜ ಪರಿಸರ ಮಾತನಾಡಿ, ಅಂಬೇಡ್ಕರ್ ಅವರ ಆಶಯದಂತೆ ಸಂವಿಧಾನಕ್ಕೆ ಪ್ರತಿಯೊಬ್ಬರು ಗೌರವಿಸಿ ಎಲ್ಲರನ್ನೂ ಪ್ರೀತಿಯಿಂದ ಕಾಣುವಂತಾಗಬೇಕು. ನಾವು ಬೇರೆಯವರಿಗೆ ಗೌರವವನ್ನು ನೀಡಿದರೆ ನಮಗೂ ಸಹ ಗೌರವ ಖಂಡಿತ ಮರಳಿ ಬರುತ್ತದೆ ಎಂಬುದನ್ನು ನಾವು ಎಲ್ಲರೂ ತಿಳಿದುಕೊಳ್ಳಬೇಕು. ಪ್ರತಿಯೊಬ್ಬರೂ ದೇಶಕ್ಕಾಗಿ ಬದುಕಬೇಕು ಎಂದರು.

ಕಾರ್ಯಕ್ರಮದಲ್ಲಿ ಕಾರ್ಯದರ್ಶಿ ಪೂಜಾ ನಾಗರಾಜ್ ಪರಿಸರ, ಸುಧಾ ಜ್ಯೋತಿಪ್ರಕಾಶ್, ವರ್ಷಿಣಿ, ತೇಜಸ್ವಿ, ಮುಖ್ಯ ಶಿಕ್ಷಕರಾದ ವಿನಯ್ ಹಾಗೂ ಶಿಕ್ಷಕರು, ಪೋಷಕರು ಭಾಗವಹಿಸಿದ್ದರು.

# ಮಹಾರಾಣಿ ಕಾಲೇಜು ಕಟ್ಟಡದ ಮೇಲ್ಛಾವಣಿ ಕುಸಿತ: ಅವಶೇಷಗಳಡಿ ಸಿಲುಕಿ ಓರ್ವ ಕಾರ್ಮಿಕ ಸಾವು

**ಮೈಸೂರು:** ಮೈಸೂರಿನ ಮಹಾರಾಣಿ ಕಾಲೇಜಿನ ಕಟ್ಟಡದ ಮೇಲ್ಛಾವಣಿ ಕುಸಿತಗೊಂಡ ಪ್ರಕರಣಕ್ಕೆ ಸಂಬಂಧಿಸಿದಂತೆ ಅವಶೇಷಗಳಡಿ ಸಿಲುಕಿದ್ದ ಓರ್ವ ಕಾರ್ಮಿಕ ಸಾವನ್ನಪ್ಪಿದ್ದಾನೆಂದು ತಿಳಿದುಬಂದಿದೆ.ಮೃತ ಕಾರ್ಮಿಕನನ್ನು ಮೈಸೂರಿನ ಗೌಸಿಯಾ ನಗರದ ನಿವಾಸಿ ಮೊಹಮ್ಮದ್ ಸದ್ದಾಂ (32) ಎಂದು ಗುರ್ತಿಸಲಾಗಿದೆ. ಮಹಾರಾಣಿ ಕಾಲೇಜು ಕಟ್ಟಡ 80 ವರ್ಷಗಳ ಹಳೆಯದಾಗಿದ್ದು, ಕಳೆದ ತಿಂಗಳು ದುರಸ್ಥಿ ಕಾರ್ಯ ಆರಂಭವಾಗಿತ್ತು. ಮಂಗಳವಾರ ಸಂಜೆ ಕಟ್ಟಡದ ಮೇಲ್ಛಾವಣಿ ಕುಸಿದಿದ್ದು, ಕಾರ್ಮಿಕರೊಬ್ಬರು ಅವಶೇಷಗಳಡಿ ಸಿಲುಕಿಕೊಂಡಿದ್ದರು.ಸುದ್ದಿ ತಿಳಿಯುತ್ತಿದ್ದಂತೆಯೇ ಸ್ಥಳಕ್ಕಮಾಗಿಸಿದ ಅಗ್ನಿಶಾಮಕ ಸಿಬ್ಬಂದಿ ಹಾಗೂ ಪೊಲೀಸರು ರಕ್ಷಣಾ ಕಾರ್ಯಾಚರಣೆ ಆರಂಭಿಸಿದ್ದರು. ಇದೀಗ ಕಾರ್ಮಿಕನ ಮೃತದೇಹ ಪತ್ತೆಯಾಗಿದೆ ಎಂದು ತಿಳಿದುಬಂದಿದೆ. ಕಟ್ಟಡದಲ್ಲಿ 15 ಮಂದಿ ಕಾರ್ಮಿಕರು ಕೆಲಸ ಮಾಡುತ್ತಿದ್ದೆವು. ಸಂಜೆ 5 ಗಂಟೆಯ ಸುಮಾರಿಗೆ ಕೆಲಸ ಮುಗಿಸಿ, ಚಹಾ ಕುಡಿಯುತ್ತಿದ್ದೆವು. ಸದ್ದಾಂ ಬಟ್ಟೆಗಳನ್ನು ತೆಗೆದುಕೊಳ್ಳಲು ಮೊದಲ ಮಹಡಿಗೆ ಹೋಗಿದ್ದರು. ಈ ವೇಳೆ ಕಟ್ಟಡದ ಮೇಲ್ಚಾವಣಿ ಹಠಾತ್ತನೆ ಕುಸಿದುಬಿದ್ದಿದೆ. ಕೂಡಲೇ ನಾವೆಲ್ಲರೂ ಮೊದಲ ಮಹಡಿಗೆ ಹೋಗಿದ್ದೆವು. ಆದರೆ, ಸದ್ದಾಂ ಪತ್ತೆಯಾಗಲಿಲ್ಲ. ಕೂಗಿದರೂ ಅವರಿಂದ ಯಾವುದೇ ಪ್ರತಿಕ್ರಿಯೆ ಬರಲಿಲ್ಲ ಎಂದು ಸದ್ದಾಂ ಜೊತೆ ಕೆಲಸ ಮಾಡುತ್ತಿದ್ದ ಮೊಹಮ್ಮದ್ ಆರಿಫ್ ಎಂಬುವವರು ಹೇಳಿದ್ದಾರೆ.ಘಟನೆ ಬಳಿಕ ಶಾಸಕ ಕೆ.ಹರೀಶ್ ಗೌಡ, ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತ ರೆಡ್ಡಿ ಅವರು ಸ್ಥಳಕ್ಕೆ ಧಾವಿಸಿ ರಕ್ಷಣಾ ಕಾರ್ಯಾಚರಣೆಯ ಮೇಲ್ವಿಚಾರಣೆ ನಡೆಸಿದರು.ಹರೀಶ್ ಗೌಡ ಮಾತನಾಡಿ, ಶಿಥಿಲಾವಸ್ಥೆಯಲ್ಲಿರುವ ಪಾರಂಪರಿಕ ಕಟ್ಟಡವನ್ನು ಕೆಡವಿ ಹೊಸ ಕಟ್ಟಡ ನಿರ್ಮಿಸುವ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗಿದೆ. 'ಕಳೆದ ನಾಲ್ಕು ದಿನಗಳಿಂದ ಕಾಮಗಾರಿ ನಡೆಯುತ್ತಿದ್ದು, ಕಾರ್ಮಿಕರು ವಿಜ್ಞಾನ ಪ್ರಯೋಗಾಲಯದ ಉಪಕರಣಗಳನ್ನು ಬೇರೆ ಕಟ್ಟಡಕ್ಕೆ ಸ್ಥಳಾಂತರಿಸಿ ಕೆಡವುವ ಸಿದ್ಧತೆಯಲ್ಲಿ ನಿರತರಾಗಿದ್ದಾಗ ಘಟನೆ ಸಂಭವಿಸಿದೆ ಎಂದು ಹೇಳಿದ್ದಾರೆ.

# ಶೈಕ್ಷಣಿಕ ವ್ಯವಸ್ಥೆಯಲ್ಲಿ ಮಹತ್ತರ ಬದಲಾವಣೆ

**ಶಿವಮೊಗ್ಗ:** ಒಂದು ದೇಶ, ಒಂದು ವೈದ್ಯಕೀಯ ಪದವಿಯ ದೃಷ್ಟಿಕೋನ ಇಟ್ಟುಕೊಂಡು ರಾಷ್ಟ್ರೀಯ ವೈದ್ಯಕೀಯ ಆಯೋಗ ( ಓಒಅ ) ಟೀಚಿಂಗ್ ಎಲಿಜಿಬಿಲಿಟಿ ಕ್ವಾಲಿಫಿಕೇಷನ್ ಅಲ್ಲಿ ಮಹತ್ತರವಾದ ಬದಲಾವಣೆ ತಂದಿರುವುದು, ವೈದ್ಯಕೀಯ ಶಿಕ್ಷಣದಲ್ಲಿ ಪಿಜಿ ಡಿಪ್ಲೊಮಾ ಪದವೀಧರರನ್ನು ವೈದ್ಯಕೀಯ ಕಾಲೇಜುಗಳಲ್ಲಿ ಸಹಾಯಕ ಅಧ್ಯಾಪಕರಾಗಿ ಬಡ್ತಿ ನೀಡಲು ನಿರ್ಧರಿಸಿರುವುದು ಹಾಗೂ ನಿಯಮಾವಳಿ ಸಡಿಲಿಸಿರುವುದಕ್ಕೆ ವಿಧಾನ ಪರಿಷತ್ ಶಾಸಕರಾದ ಡಾ. ಧನಂಜಯ ಸರ್ಜಿ ಶ್ಲಾಘಿಸಿದ್ದಾರೆ.

ಈ ಮಹತ್ತರ ಬದಲಾವಣೆ ಶೈಕ್ಷಣಿಕ ವ್ಯವಸ್ಥೆಯಲ್ಲಿ ಸಮಾನತೆ ಹಾಗೂ ವೈದ್ಯಕೀಯ ಸಂಸ್ಥೆಗಳಲ್ಲಿ ಕೊರತೆ ಇರುವ ಅರ್ಹ ಬೋಧನಾ ಸಿಬ್ಬಂದಿಯನ್ನು ಒದಗಿಸುವಲ್ಲಿ ಪ್ರಮುಖ ಪಾತ್ರವನ್ನು ವಹಿಸುತ್ತದೆ, ಇಷ್ಟು ದಿನ ಕ್ಲಿನಿಕಲ್ ಅನುಭವ ಹೊಂದಿರುವವರು ಸೀನಿಯರ್ ರೆಸಿಡೆಂಟ್ ಆಗಿ ಕಾರ್ಯ ನಿರ್ವಹಿಸುತ್ತಿದ್ದರು, ಈಗ ಇದರ ಜೊತೆಗೆ ಸಹಾಯಕ ಪ್ರಾಧ್ಯಾಪಕರಾಗಿಯೂ ಕರ್ತವ್ಯ ನಿರ್ವಹಿಸಲು ಅವಕಾಶ ಕಲ್ಪಿಸಿರುವುದು ಸ್ವಾಗತಾರ್ಹ ಎಂದು ಪಡೆದ ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಇದರಿಂದ ಸಾವಿರಾರು ಸ್ನಾತ್ತಕೋತ್ತರ ಪದವಿ ಮತ್ತು ಡಿಪ್ಲೋಮ ವೈದ್ಯರು ಯಾವುದೇ ಬಡ್ತಿ ಇಲ್ಲದೆ ಸತತವಾಗಿ 10 ರಿಂದ 15 ವರ್ಷಗಳ ಕಾಲ ವೈದ್ಯಕೀಯ ಸಂಸ್ಥೆಗಳಲ್ಲಿ ಭೋದನೆ ಮಾಡುತ್ತಿದ್ದು, ಈ ನಿಯಮದಿಂದ 2017ರ ಪೂರ್ವದಲ್ಲಿ ಸೇರಿರುವ ಎಲ್ಲ ಪಿಜಿ ಡಿಪ್ಲೊಮಾ ಪದವೀಧರ ವೈದ್ಯರಿಗೆ ಇದರಿಂದ ಅನುಕೂಲವಾಗಿದೆ. ಅಧ್ಯಾಪಕರ ಕೊರತೆಯನ್ನು ಸರಿದೂಗಿಸಲು ಸಹಕಾರಿಯಾಗುತ್ತದೆ.

ರಾಷ್ಟ್ರೀಯ ವೈದ್ಯಕೀಯ ಆಯೋಗದ ಈ ಕಲ್ಪನೆಯಿಂದ ವೈದ್ಯಕೀಯ ಪದವೀಧರರನ್ನು ಸ್ನಾತಕೋತ್ತರ ಡಿಪ್ಲೊಮಾ ಕೋರ್ಸ್‌ಗಳನ್ನು ಮಾಡಲು ಹೆಚ್ಚು ಪ್ರೇರಿಪಿಸಿದಂತಾಗುತ್ತದೆ.ಇದರಿಂದ ವೈದ್ಯಕೀಯ ಶಿಕ್ಷಣ ಕ್ಷೇತ್ರದಲ್ಲಿ ಮಾನವ ಸಂಪತ್ತನ್ನು ಸಮರ್ಥವಾಗಿ ಹಾಗೂ ಪರಿಣಾಮಕಾರಿಯಾಗಿ ಬಳಸಲು ಸಹಕಾರಿಯಾಗುತ್ತದೆ.

ವೈದ್ಯಕೀಯ ಶಿಕ್ಷಣದ ಗುಣಮಟ್ಟವನ್ನು ಹೆಚ್ಚಿಸುವುದರ ಜೊತೆಗೆ ಕ್ಲಿನಿಕಲ್ ಅನುಭವ ಹೊಂದಿರುವುದರಿಂದ ಯುವ ತಜ್ಞ ವೈದ್ಯರ ಹೊಸ ಪೀಳಿಗೆ ರೂಪಿಸಲು ಹಾಗೂ ಗ್ರಾಮೀಣ ಮತ್ತು ಸೇವೆ ಲಭ್ಯವಿಲ್ಲದ ಪ್ರದೇಶಗಳಲ್ಲಿ ವೈದ್ಯಕೀಯ ಅಧ್ಯಾಪಕರ ತುರ್ತು ಕೊರತೆಯನ್ನು ಪರಿಹರಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ವೈದ್ಯಕೀಯ ಶಿಕ್ಷಣದಲ್ಲಿ ಪಿಜಿ ಡಿಪ್ಲೊಮಾ ಹೊಂದಿರುವ ಪದವೀಧರರನ್ನು ವೈದ್ಯಕೀಯ ಕಾಲೇಜುಗಳಲ್ಲಿ ಬೋಧನೆ ಮಾಡುವಂತೆ ಹೇಳಿರುವ ಎನ್.ಎಂ.ಸಿ ಯ ಈ ನಿರ್ಧಾರದಿಂದ ವೈದ್ಯಕೀಯ ಶಿಕ್ಷಣದ ಒಟ್ಟಾರೆ ಗುಣಮಟ್ಟ ಸುಧಾರಿಸುವುದರ ಜೊತೆಗೆ ಭಾರತೀಯ ವೈದ್ಯಕೀಯ ಶಿಕ್ಷಣ ಮತ್ತು ಆರೋಗ್ಯ ಕ್ಷೇತ್ರವನ್ನು ಬಲಪಡಿಸುತ್ತದೆ.

ಮತ್ತೊಂದು ಪರಿವರ್ತನಾತ್ಮಕ ಆರಂಭಿಕ ಪ್ರಯತ್ನವೆಂದರೆ "ಒಂದು ದೇಶ, ಒಂದು ವೈದ್ಯಕೀಯ ಪದವಿ" ಕಲ್ಪನೆ, ಇದು ಭಾರತಾದ್ಯಾಂತ ವೈದ್ಯಕೀಯ ಶಿಕ್ಷಣ ಗುಣಮಟ್ಟ ಮತ್ತು ಅರ್ಹತೆಯ ಮಾನಕೀಕರಣವನ್ನು ಗಮನದಲ್ಲಿಟ್ಟುಕೊಂಡು ಈ ಯೋಜನೆಯನ್ನು ತರಲಾಗಿದೆ. ಇದರಿಂದ ವೈದ್ಯಕೀಯ ವೃತ್ತಿಪರರಲ್ಲಿ ಪಠ್ಯಕ್ರಮ, ತರಬೇತಿ ಪರವಾನಗಿಯನ್ನು ಸಮಾನವಾಗಿಡುವತ್ತ ಗಮನ ಹರಿಸುತ್ತದೆ ಎಂದು ಶಾಸಕ ಡಾ.ಧನಂಜಯ ಸರ್ಜಿ ಹೇಳಿದ್ದಾರೆ.

# ದೇವಾಲಯಗಳ ನಿರ್ಮಾಣದಿಂದ ಧಾರ್ಮಿಕ ಶ್ರದ್ಧೆ, ಭಕ್ತಿ, ಸಂಸ್ಕೃತಿಗಳ ಪುನರುತ್ಥಾನವಾಗುತ್ತದೆ

(1ನೇ ಪುಟದಿಂದ)

ನರ ಹರನಾಗಬೇಕು ಪ್ರತಿ ಮನೆಯು ಮಹಾ ಮನೆಯಾಗಬೇಕು ಎಂಬ ಸಂಕಲ್ಪದಿಂದ ನಮ್ಮ ಹಿರಿಯರು ದೇವಾಲಯಗಳ ನಿರ್ಮಾಣ ಮಾಡಿದ್ದಾರೆ. ಪ್ರತಿಯೊಬ್ಬರಲ್ಲಿರುವ ನಾನು ಎಂಬ ಅಸೂಹೆ, ಅಹಂಕಾರವನ್ನು ದೇವಾಲಯಗಳು ನಿರ್ನಾಮ ಮಾಡುತ್ತವೆ ಎಂದ ಅವರು ದೇವಾಲಯಗಳ ನಿರ್ಮಾಣ ಕೇವಲ ಪ್ರದರ್ಶನವಲ್ಲ ಅದು ಆತ್ಮದ ಬೆಳಕು ಎಂದು ತಿಳಿಸಿದರು.

ಮಾಜಿ ಜಿಲ್ಲಾ ಪಂಚಾಯಿತಿ ಅಧ್ಯಕ್ಷೆ ರೇಖಾ ಹುಲಿಯಪ್ಪ ಗೌಡ ಮಾತನಾಡಿ ದೇವಾಲಯಗಳಲ್ಲಿ ಧನಾತ್ಮಕವಾದ ಶಕ್ತಿ ಅಡಗಿದೆ ಆದ್ದರಿಂದ ಪ್ರತಿಯೊಬ್ಬರು ಕಷ್ಟದ ಸಮಯದಲ್ಲಿ ದೇವರ ಮೊರೆ ಹೋಗುತ್ತಾರೆ. ನಂಬಿಕೆಗೆ ಶಕ್ತಿಯಿದೆ. ಶ್ರದ್ಧೆ, ಭಕ್ತಿಯಿಂದ ನಿರ್ವಹಿಸಿದ ಪ್ರತಿ ಕಾರ್ಯವು ದೇವರಿಗೆ ಸಲ್ಲುತ್ತದೆ ಎಂದರು.

ಮಾಜಿ ಜಿಲ್ಲಾ ಪಂಚಾಯಿತಿ ಸದಸ್ಯ ರವೀಂದ್ರ ಬೆಳವಾಡಿ ಮಾತನಾಡಿ ಭೂಮಿ ಮೇಲೆ ಆಚಾರ, ವಿಚಾರ ಧಾರ್ಮಿಕ ಕಾರ್ಯಗಳು ಇನ್ನೂ ಜೀವಂತವಾಗಿರಲು ದೇವಾಲಯಗಳ ಕೊಡುಗೆ ಬಹಳಷ್ಟಿದೆ. ದೇವಾಲಯಗಳು ಮಾನವನಲ್ಲಿ ಒಗ್ಗಟ್ಟನ್ನು ನಿರ್ಮಾಣ ಮಾಡುತ್ತವೆ. ಪ್ರತಿಯೊಬ್ಬರು ಒಂದುಗೂಡಿ ಉತ್ತಮ ಕಾರ್ಯಕ್ಕೆ ಶ್ರಮಿಸಿದರೆ ಉತ್ತಮ ಸಮಾಜ ನಿರ್ಮಾಣವಾಗುತ್ತದೆ ಎಂದರು.

ಬಿಜೆಪಿ ಮುಖಂಡರಾದ ಪಲ್ಲವಿ ಸಿ.ಟಿ.ರವಿ, ತಾಲ್ಲೂಕು ಪಂಚಾಯಿತಿ ಮಾಜಿ ಅಧ್ಯಕ್ಷೆ ಶುಭ ಸತ್ಯಮೂರ್ತಿ, ಗ್ರಾಮ ಪಂಚಾಯಿತಿ ಅಧ್ಯಕ್ಷೆ ಛಾಯಾದಯಾನಂದ್ ಸಭೆಯನ್ನು ಉದ್ದೇಶಿಸಿ ಮಾತನಾಡಿದರು, ಈ ಸಂದರ್ಭದಲ್ಲಿ ಶ್ರೀ ದುರ್ಗಾಂಬ ದೇವಿ ಕ್ಷೇಮಾಭಿವೃದ್ಧಿ ಸಂಘಡ ಅಧ್ಯಕ್ಷರಾದ ಕೆ.ಟಿ.ರಂಗಶೆಟ್ಟಿ, ಗೌರಚಾಕ್ಯಕ್ಷ ಕೆ.ಡಿ.ಪುಟ್ಟೇಗೌಡ, ಉಪಾಧ್ಯಕ್ಷರಾದ ಕೆ.ಎಸ್ ಸಿದ್ದೇಗೌಡ, ಖಜಾಂಚಿಗಳಾದ ಕೆ.ಆರ್ ಗುರುಮೂರ್ತಿ, ಕಾರ್ಯದರ್ಶಿಗಳಾದ ಕೆ.ಸಿ ರಾಮೇಗೌಡ, ಶಿಲ್ಪಿ ಮೋಹನ್, ನಿವೃತ್ತ ಡಿ.ಓ.ಎಸ್ಪಿ ಪುರುಷೋತ್ತಮ್, ಸಮಾಜ ಸೇವಕರಾದ ರಾಮಕೃಷ್ಣೇಗೌಡ, ಗ್ರಾಮ ಪಂಚಾಯಿತಿ, ಉಪಾಧ್ಯಕ್ಷ ಕೆ.ಜಿ ಪ್ರವೀಣ್, ಉಪಸ್ಥಿತರಿದ್ದರು. ಕಾರ್ಯಕ್ರಮದ ನಿರೂಪಣೆಯನ್ನು ಶಿವಶಂಕರ್ ಶೆಟ್ಟಿ ನೆರವೇರಿಸಿದರು.

# ಕ್ರೈಸ್ತರ ಅಭಿವೃದ್ಧಿ ಸಂಘದಿಂದ ಸಾಮಾಜಿಕ ಸೇವಾ ಕಾರ್ಯ




**ಚಿಕ್ಕಮಗಳೂರು:** ಕ್ರೈಸ್ತ ಸಮುದಾಯದ ಸಾಮಾಜಿಕ, ಶೈಕ್ಷಣಿಕ ಹಾಗೂ ಸರ್ಕಾರದ ಸೌಲಭ್ಯಗಳ ಬಗ್ಗೆ ಅರಿವು ಮೂಡಿಸುವುದು ಇಂತಹ ಹಲವಾರು ಸಾಮಾಜಿಕ ಸೇವಾ ಕಾರ್ಯಗಳನ್ನು ಮಲೆನಾಡು ಕ್ರೈಸ್ತರ ಅಭಿವೃದ್ಧಿ ಸಂಘ ಕಳೆದ 22 ವರ್ಷಗಳಿಂದ ಸೇವೆ ಮಾಡುತ್ತಾ ಬರುತ್ತಿದೆ ಎಂದು ಸಂಘದ ಅಧ್ಯಕ್ಷ ಪಿ. ಜೆ.ಪ್ರಾನ್ಸಿಸ್ ಹೇಳಿದರು.ಅವರು ನಗರದ ಜೂಬಿಲಿ ಹಾಲ್‌ನಲ್ಲಿ ನಡೆದ ಸರ್ವ ಸದಸ್ಯರ ಸಭೆಯಲ್ಲಿ ಮಾತನಾಡಿ, ನಮ್ಮ ಸಂಘವು ಶವ ಸಂಸ್ಕಾರದ ವಾಹನ ಹಾಗೂ ಫ್ರೀಜರ್ ಬಾಕ್ಸ್ ಸಾರ್ವಜನಿಕ ಸೇವೆಗೆ ಸಲ್ಲಿಸುತ್ತಿರುವುದಲ್ಲದೆ ಹೊಸದಾಗಿ ಫ್ರೀಜರ್ ಬಾಕ್ಸನ್ನು ಖರೀದಿಸಲಾಗಿದ್ದು, ಸಾರ್ವಜನಿಕರ ಉಪಯೋಗಕ್ಕೆ ಫೆಬ್ರವರಿಯಿಂದ ನೀಡಲಾಗುವುದು ಎಂದರು. ಮಲೆನಾಡು ಕ್ರೈಸ್ತರ ಅಭಿವೃದ್ಧಿ ಸಂಘದ ಉಪಾಧ್ಯಕ್ಷ ಡೆನ್ನಿಸ್ ಫರ್ನಾಂಡಿಸ್, ನೂತನ ಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾದ ಸಿಲ್ವಸ್ಟರ್ ಮಸ್ಕರೇನಾಸ್ ಇವರು ಮಾತನಾಡಿದರು. ಸಂಘದ ವಾರ್ಷಿಕ ವರದಿಯನ್ನು ಜೇಮ್ಸ್ ಡಿಸೋಜಾ ಮಂಡಿಸಿದರು. ಜಮಾ ಖರ್ಚುಗಳ ವರದಿಯನ್ನು ದೀಪಕ್ ಸಲ್ಡಾನ ಮಂಡಿಸಿ, ಸರ್ವ ಸದಸ್ಯರ ಸಭೆಯಲ್ಲಿ ಸರ್ವಾನುಮತದ ಒಪ್ಪಿಗೆ ನೀಡಲಾಯಿತು.

ನಿರೂಪಣೆ ರೂಬೆನ್ ಮೊಸಸ್, ಸರ್ವ ಸದಸ್ಯರ ಆಹ್ವಾನ ಪತ್ರವನ್ನು ಸುರೇಂದ್ರ ಓದಿದರು. ಸ್ವಾಗತವನ್ನು ಸಿಲ್ವಸ್ಟರ್, ವಂದನಾರ್ಪಣೆ ಸುರೇಖಾ ಸಂಪತ್ ರಾಜ್, ಪ್ರಾರ್ಥನೆ ಅನ್ನನ್ ಮಾಡಿದರು. ಇದೇ ಸಂದರ್ಭದಲ್ಲಿ ಅವಿರೋಧವಾಗಿ ಆಯ್ಕೆಯಾದ ನೂತನ ಆಡಳಿತ ಮಂಡಳಿಯ ಪದಾಧಿಕಾರಿಗಳ ಪಟ್ಟಿಯನ್ನು ಸಭೆಯಲ್ಲಿ ಬಿಡುಗಡೆಗೊಳಿಸಲಾಯಿತು.

ಅಧ್ಯಕ್ಷರಾಗಿ ಸಿಲ್ವಸ್ಟರ್ ಮಸ್ಕರೇನಾಸ್, ಉಪಾಧ್ಯಕ್ಷರಾಗಿ ಜೇಮ್ಸ್ ಡಿಸೋಜಾ, ಡೆನ್ನಿಸ್ ಫರ್ನಾಂಡಿಸ್, ಸತ್ಯರಾಜ್, ಕಾರ್ಯದರ್ಶಿಯಾಗಿ ಕ್ರಿಸ್ಟೋಫರ್ ಜಾರ್ಜ್ (ಸಂಜು), ಖಜಾಂಚಿಯಾಗಿ ಬರ್ನಾಡ್ ಹೆನ್ರಿ, ಸಹಕಾರ್ಯದರ್ಶಿಗಳಾಗಿ ಜಾರ್ಜ್ ಸಿಕ್ವೇರ್, ಡಿ.ಜೇಕಬ್, ವಾಹನ ಮತ್ತು ಫ್ರೀಜರ್ ಬಾಕ್ಸ್ ಉಸ್ತುವಾರಿಯಾಗಿ ರೊನಾಲ್ಡ್ ಸೇರಾವೊ, ಉಪ ಉಸ್ತುವಾರಿಗಳಾಗಿ ಆನಂದ ಸುನೀಲ್ ಲೋಬೋ, ಮಾಕ್ಸಿಮ್ ಡೇಸಾ, ಕಾಣಿಕರಾಜ್, ನಿರ್ದೇಶಕರುಗಳಾಗಿ ಪಿ.ಜೆ.ಪ್ರಾನ್ಸಿಸ್, ರೂಬನ್ ಮೋಸಸ್, ದೀಪಕ್ ಸಲ್ಡಾನ, ನವೀನ್ ಪಿರೇರಾ, ಕ್ಸೇವಿಯರ್ ಪ್ರಾನ್ಸಿಸ್, ಜೋಸೆಫ್ ಕಿರಣ ಡಿಸೋಜಾ, ಕ್ಯಾಂಡಿ ಲೋಬೋ ಇವರುಗಳು ಆಡಳಿತ ಮಂಡಳಿಗೆ ಆಯ್ಕೆಯಾಗಿರುತ್ತಾ–ರೆ.

# ಬೆಂಗಳೂರು: ವ್ಯಾಪಾರ ಪರವಾನಗಿ ನವೀಕರಣಕ್ಕೆ ಫೆ.28 ಕೊನೆಯ ದಿನ..!

**ಬೆಂಗಳೂರು:** ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿಬಿಎಂಪಿ) ವ್ಯಾಪ್ತಿಯಲ್ಲಿ ವ್ಯಾಪಾರ ಪರವಾನಗಿ (ಟ್ರೇಡ್ ಲೈಸೆನ್ಸ್) ನವೀಕರಣಕ್ಕೆ ಫೆಬ್ರವರಿ 28 ಕೊನೆಯ ದಿನವಾಗಿದೆ.2025-26ನೇ ಹಣಕಾಸು ವರ್ಷದ ವ್ಯಾಪಾರ ಪರವಾನಗಿಗಳ ನವೀಕರಣಕ್ಕೆ ಸಂಬಂಧಿಸಿದಂತೆ ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಸೋಮವಾರ ಸುತ್ತೋಲೆ ಹೊರಡಿಸಿದ್ದಾರೆ.ಸುತ್ತೋಲೆಯ ಪ್ರಕಾರ, ವ್ಯಾಪಾರ ಪರವಾನಗಿ ನವೀಕರಣ ಪಾವತಿಯನ್ನು ಆನ್ಲೈನ್ ಅಥವಾ ಕೆನರಾ ಬ್ಯಾಂಕ್ನಲ್ಲಿ ಬ್ಯಾಂಕ್ ಚಲನ್ ಮೂಲಕ ಪಾವತಿಸಬೇಕು. ನವೀಕರಣ ಮೊತ್ತವನ್ನು ಪಾವತಿಸಲು ಫೆಬ್ರವರಿ 28 ಕೊನೆಯ ದಿನಾಂಕವಾಗಿದೆ. ಮಾರ್ಚ್ 1 ಮತ್ತು ಮಾರ್ಚ್ 31 ರ ನಡುವೆ ಮಾಡಿದ ಪಾವತಿಗಳಿಗೆ ಶೇ.25ರಷ್ಟು ದಂಡ ಅನ್ವಯಿಸುತ್ತದೆ ಮತ್ತು ಏಪ್ರಿಲ್ನಿಂದ ಶೇ,100 ರಷ್ಟು ದಂಡವನ್ನು ವಿಧಿಸಲಾಗುತ್ತದೆ. ನವೀಕರಣ ಪ್ರಕ್ರಿಯೆಯನ್ನು ಸಂಪೂರ್ಣವಾಗಿ ಆನ್ಲೈನ್ನಲ್ಲಿ ಪೂರ್ಣಗೊಳಿಸಬೇಕು ಎಂದು ತಿಳಿಸಲಾಗಿದೆ.ವಸತಿ ಪ್ರದೇಶದಲ್ಲಿ 40 ಅಡಿಗಿಂತ ಕಡಿಮೆ ಅಗಲದ ರಸ್ತೆಗಳಲ್ಲಿ 2015ರ ನಂತರ ಪ್ರಾರಂಭವಾಗಿರುವ ಉದ್ದಿಮೆ ಪರವಾನಗಿಯನ್ನು ತಡೆಹಿಡಿಯಬೇಕು. 40 ಅಡಿಗಳಿಗಿಂತ ಹೆಚ್ಚು ಅಗಲದ ರಸ್ತೆಗಳಲ್ಲಿ 2015ರ ನಂತರ ಪ್ರಾರಂಭವಾಗಿರುವ ಉದ್ದಿಮೆಗಳಿಗೆ ಮಾತ್ರ ಪರವಾನಗಿ ನವೀಕರಣ ಮಾಡಬೇಕು ಎಂದು ಸೂಚನೆ ನೀಡಲಾಗಿದೆ.ನಕ್ಷೆ ಉಲ್ಲಂಘನೆಯಾಗಿರುವ ಕಟ್ಟಡಗಳಲ್ಲಿ ಪೂರ್ತಿ ಅಥವಾ ಭಾಗಶಃವಾಗಿ ಉದ್ದಿಮೆಗಳಿದ್ದರೆ, ವಾಹನ ನಿಲುಗಡೆ ಪ್ರದೇಶದಲ್ಲಿ, ಚಾವಣಿ ಪ್ರದೇಶವನ್ನೂ ಬಳಸುತ್ತಿದ್ದರೆ, ಪರವಾನಗಿ ನವೀಕರಣ ಮಾಡುವಂತಿಲ್ಲ. ಉದ್ದಿಮೆಗಳು, ಕಲ್ಯಾಣ ಮಂಟಪಗಳು ಹೋಟೆಲ್, ರೆಸ್ಟೋರೆಂಟ್ ತ್ಯಾಜ್ಯ ವಿಲೇವಾರಿ, ಪ್ಲಾಸ್ಟಿಕ್ ನಿಷೇಧ ಪಾಲನೆ ಸೇರಿದಂತೆ ಘನತ್ಯಾಜ್ಯ ವಿಲೇವಾರಿ ನಿಯಮಗಳನ್ನು ಪಾಲಿಸುತ್ತಿರುವ ದಾಖಲೆಗಳನ್ನು ಪರಿಶೀಲಿಸಬೇಕು. ವಲಯ ಆರೋಗ್ಯಾಧಿಕಾರಿ, ಉಪ ಆರೋಗ್ಯಾಧಿಕಾರಿ, ಆರೋಗ್ಯ ವೈದ್ಯಾಧಿಕಾರಿಗಳು ಯಾವುದೇ ಗೊಂದಲಕ್ಕೆ ಆಸ್ಪದವಿಲ್ಲದಂತೆ ಎಲ್ಲ ಅಂಶಗಳನ್ನು ಪರಿಗಣಿಸಿ, 2025-26ನೇ ಸಾಲಿನ ಪರವಾನಗಿ ನವೀಕರಣ ನೀಡಬೇಕು ಎಂದು ಸೂಚಿಸಿದ್ದಾರೆ.

# ಕೋಲಾರ: ಪೊಲೀಸರಿಂದ 394 ಕೆ.ಜಿ ಗಾಂಜಾ ನಾಶ; ಶಾಲೆ-ಕಾಲೇಜುಗಳಲ್ಲಿ ಮಾದಕ ವಸ್ತು ವಿರೋಧಿ ಜಾಗೃತಿ

**ಕೋಲಾರ:** ನ್ಯಾಯಾಲಯದ ಅನುಮತಿ ಮೇರೆಗೆ ಕೇಂದ್ರ ವಲಯ ವ್ಯಾಪ್ತಿಯ 6 ವಲಯಗಳಲ್ಲಿ ವಶಪಡಿಸಿಕೊಂಡ 394 ಕೆಜಿ ಗಾಂಜಾವನ್ನು ನಾಶಪಡಿಸಲಾಗಿದೆ ಎಂದು ಕೇಂದ್ರ ವಲಯ ಐಜಿಪಿ ಲಾಭುರಾಮ್ ಅವರು ಸೋಮವಾರ ಮಾಹಿತಿ ನೀಡಿದರು.ಕೋಲಾರ ಜಿಲ್ಲೆಯಲ್ಲಿ 97.624 ಕೆಜಿ, ಕೆಜಿಎಫ್ನಲ್ಲಿ 83.45 ಕೆಜಿ ಗಾಂಜಾ ವಶಪಡಿಸಿಕೊಳ್ಳಲಾಗಿದ್ದು, ತುಮಕೂರು ಜಿಲ್ಲಾ ಪೊಲೀಸರು 51.7 ಕೆಜಿ ಗಾಂಜಾ ಮತ್ತು 47 ಗ್ರಾಂ ಎಂಡಿಎಂಎ, ರಾಮನಗರ ಜಿಲ್ಲಾ ಪೊಲೀಸರು 27.8 ಕೆಜಿ ಮತ್ತು ಚಿಕ್ಕಬಳ್ಳಾಪುರ ಜಿಲ್ಲಾ ಪೊಲೀಸರು 24.760 ಕೆಜಿ ಗಾಂಜಾ ವಶಪಡಿಸಿಕೊಂಡಿದ್ದರು. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ 112.67 ಕೆಜಿ ಗಾಂಜಾ ಮತ್ತು 5 ಲೀಟರ್ ಗಾಂಜಾ ಸಾಂದ್ರೀಕರಣ ವಶಪಡಿಸಿಕೊಳ್ಳಲಾಗಿತ್ತು. ಈ ಗಾಂಜಾವನ್ನು ನಾಶಪಡಿಸಲಾಗಿದೆ ಎಂದು ಹೇಳಿದ್ದಾರೆ.6 ಜಿಲ್ಲೆಗಳನ್ನು ಒಳಗೊಂಡಿರುವ ಕೇಂದ್ರ ವಲಯವು ವಿದ್ಯಾರ್ಥಿ ಸಮುದಾಯದ ಹಿತದೃಷ್ಟಿಯಿಂದ ಮತ್ತು ಸಮಾಜವನ್ನು ರಕ್ಷಿಸುವ ಸಲುವಾಗಿ ಮಾದಕವಸ್ತುಗಳ ದುರುಪಯೋಗ, ಸೈಬರ್ ಅಪರಾಧ ಹಾಗೂ ಐಎಂವಿ(ಮೋಟಾರು ವಾಹನ ಕಾಯ್ದೆ ಉಲ್ಲಂಘನೆ) ಉಲ್ಲಂಘನೆಯ ಬಗ್ಗೆ ಶಾಲೆ, ಕಾಲೇಜುಗಳಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.ಶಾಲೆ, ಕಾಲೇಜು ವಿದ್ಯಾರ್ಥಿಗಳು ಮಾದಕ ದ್ರವ್ಯ ಸೇವನೆಯಲ್ಲಿ ಹೆಚ್ಚಾಗಿ ತೊಡಗಿಸಿಕೊಳ್ಳುತ್ತಿರುವುದಾಗಿ ವರದಿ ಬಂದಿರುವುದನ್ನು ಪರಿಗಣಿಸಿ ಅವರ ಭವಿಷ್ಯವನ್ನು ರಕ್ಷಿಸಲು ಜಾಗೃತಿ ಕಾರ್ಯಕ್ರಮಗಳನ್ನು ಪ್ರಾರಂಭಿಸಲಾಗುತ್ತಿದೆ.ಇದೇ ವೇಳೆ, ಪೋಷಕರು ತಮ್ಮ ಮಕ್ಕಳನ್ನು ನಿಕಟವಾಗಿ ಮೇಲ್ವಿಚಾರಣೆ ಮಾಡುವ ಮೂಲಕ ಮತ್ತು ಅವರ ಚಟುವಟಿಕೆಗಳ ಮೇಲೆ ನಿಗಾ ವಹಿಸುವ ಮೂಲಕ ಹೆಚ್ಚಿನ ಜವಾಬ್ದಾರಿಯನ್ನು ತೆಗೆದುಕೊಳ್ಳಬೇಕು ಎಂದು ತಿಳಿಸಿದರು.6 ಜಿಲ್ಲೆಗಳಲ್ಲಿಯೂ ಆದ್ಯತೆಯ ಆಧಾರದ ಮೇಲೆ ಜಾಗೃತಿ ತರಗತಿಗಳನ್ನು ತೆಗೆದುಕೊಳ್ಳಲಾಗುತ್ತಿದೆ. ಸಬ್ ಇನ್ಸ್ಪೆಕ್ಟರ್ನಿಂದ ಹಿಡಿದು ಉಪ ಪೊಲೀಸ್ ವರಿಷ್ಠಾಧಿಕಾರಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಮತ್ತು ಪೊಲೀಸ್ ಅಧೀಕ್ಷಕರವರೆಗಿನ ಎಲ್ಲ ಪೊಲೀಸ್ ಅಧಿಕಾರಿಗಳು ಈ ಜಾಗೃತಿ ಅಭಿಯಾನಗಳನ್ನುದ್ದೇಶಿಸಿ ಮಾತನಾಡುತ್ತಿದ್ದಾರೆ" ಎಂದರು.ಮಾದಕ ವಸ್ತುಗಳ ಅಪಾಯಗಳು, ಸೈಬರ್ ಅಪರಾಧ ಮತ್ತು ಮೋಟಾರು ವಾಹನ ಕಾಯ್ದೆಯ ಉಲ್ಲಂಘನೆಗಳು ಅವರ ಜೀವಕ್ಕೆ ಅಪಾಯವನ್ನುಂಟು ಮಾಡುವುದಲ್ಲದೆ ಇತರರನ್ನೂ ಅಪಾಯಕ್ಕೆ ತಳ್ಳುತ್ತದೆ. ಹಾಗಾಗಿ ಈ ಬಗ್ಗೆ ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸುವುದು ಇದರ ಉದ್ದೇಶವಾಗಿದೆ. ಅಪ್ರಾಪ್ತರು ವಾಹನ ಚಾಲನೆ, ತ್ರಿವಳಿ ಸವಾರಿ ಮತ್ತು ಸ್ಟಂಟ್ ರೈಡಿಂಗ್ ಬಗ್ಗೆಯೂ ವಿದ್ಯಾರ್ಥಿಗಳಿಗೆ ಅರಿವು ಮೂಡಿಸಲಾಗುವುದು ಎಂದು ಹೇಳಿದರು.

# ಕೃಷಿ ಆಧಾರಿತ ಮಲೆನಾಡಿನಲ್ಲಿ ಕಣ್ಮರೆಯಾಗುತ್ತಿರುವ ದೇಸಿ ತಳಿಗಳು



**ಶಿವಮೊಗ್ಗ:** ಶಿವಮೊಗ್ಗ ಜಿಲ್ಲೆ ಕೃಷಿಗೆ ಹೆಸರುವಾಸಿ. ಮಲೆನಾಡಿನ ಹೆಬ್ಬಾಗಿಲು, ಹಚ್ಚ ಹಸಿರಿನ ತಾಣ ಎಂದೆಲ್ಲಾ ಕರೆಸಿಕೊಳ್ಳುವ ಶಿವಮೊಗ್ಗದ ಆರ್ಥಿಕತೆ ನಿಂತಿರುವುದೇ ಕೃಷಿ ಮತ್ತು ತೋಟಗಾರಿಕೆ ಮೇಲೆ. ರಾಜ್ಯದ ಆರ್ಥಿಕತೆಗೂ ಜಿಲ್ಲೆ ಸಾಕಷ್ಟು ಶಕ್ತಿ ನೀಡುತ್ತಿದೆ.

ಜಿಲ್ಲೆಯಲ್ಲಿ ಒಟ್ಟು 2.86 ಲಕ್ಷ ರೈತರು ಒಕ್ಕಲುತನದಲ್ಲಿ ತೊಡಗಿದ್ದಾರೆ. ಪಾರಂಪರಿಕವಾಗಿ ಕೃಷಿಯನ್ನೇ ವೃತ್ತಿಯನ್ನಾಗಿ ಅನುಸರಿಸುತ್ತಿರುವ ಇಲ್ಲಿನ ರೈತರು ವೈವಿಧ್ಯಮಯ ಬೆಳೆಗಳನ್ನು ಬೆಳೆಯುವಲ್ಲಿ ಯಶಸ್ವಿಯಾಗಿದ್ದಾರೆ.

ತೋಟಗಾರಿಕೆ, ಪುಷ್ಪೋದ್ಯಮ, ಹಣ್ಣು, ತರಕಾರಿ, ಕೋಕೋ ಹೀಗೆ ಜಿಲ್ಲೆಯಲ್ಲಿ ವೈವಿಧ್ಯಮಯ ಬೆಳೆಗಳನ್ನು ಬೆಳೆಯಲಾಗುತ್ತಿದೆ. ಅತಿ ಹೆಚ್ಚು ಮಳೆ ಬೀಳುವ ತೀರ್ಥಹಳ್ಳಿ, ಸಾಗರ, ಹೊಸನಗರ, ಅರೆ ಮಲೆನಾಡು ಪ್ರದೇಶಗಳಾದ ಶಿಕಾರಿಪುರ, ಸೊರಬ, ಭದ್ರಾವತಿ ತಾಲೂಕುಗಳು ಕೃಷಿಗೆ ಹೆಚ್ಚಿನ ಕೊಡುಗೆ ನೀಡಿವೆ.

ಆದರೆ ಇತ್ತೀಚಿನ ವರ್ಷಗಳಲ್ಲಿ ಜಿಲ್ಲೆಯ ರೈತರು ಪಾರಂಪರಿಕವಾಗಿ ಅನೇಕ ಭತ್ತದ ತಳಿಗಳನ್ನು ಬೆಳೆಯುವುದನ್ನು ಬಿಟ್ಟಿದ್ದಾರೆ. ವಾಳ್ಯ, ಸಣ್ಣವಾಳ್ಯ, ಮಲ್ಲಿಗೆ ಕರಿಮುಂಡುಗ ಸೇರಿದಂತೆ ವಿವಿಧ ತಳಿಗಳ ಭತ್ತವನ್ನು ಬೆಳೆಯುತ್ತಿದ್ದ ಜಿಲ್ಲೆಯಲ್ಲಿ ಈಗ ಭತ್ತ ಬೆಳೆಯುವ ಪ್ರದೇಶವೂ ಕಡಿಮೆಯಾಗುತ್ತಿರುವುದು ಆತಂಕದ ಸಂಗತಿ. ಒಂದು ಕಾಲದಲ್ಲಿ ಭತ್ತದ ಕಣಜ ಎಂದು ಕರೆಸಿಕೊಂಡಿದ್ದ, ರಾಜ್ಯದಲ್ಲೇ ಅತಿ ಹೆಚ್ಚು ಭತ್ತ ಬೆಳೆಯುವ ಕೀರ್ತಿ ಹೊಂದಿದ್ದ ಶಿವಮೊಗ್ಗ ಜಿಲ್ಲೆಯಲ್ಲಿ ಇಂದು ಭತ್ತ ಬೆಳೆಯುವವರ ಸಂಖ್ಯೆ ಕಡಿಮೆಯಾಗಿದೆ. ಕಣ್ಣು ಹಾಯಿಸುವವರೆಗೆ ಭತ್ತದ ಗದ್ದೆಗಳೆ ಕಾಣುತ್ತಿದ್ದ ಕಾಲ ಈಗ ಇಲ್ಲ. ರೈತರು ವರ್ಷಪೂರ್ತಿ ತಮಗೆ ಊಟಕ್ಕೆ ಬೇಕಾದಷ್ಟು ಭತ್ತವನ್ನು ಸಂಗ್ರಹಿಸಿ ಉಳಿದದ್ದನ್ನು ಮಾರಾಟ ಮಾಡುತ್ತಿದ್ದರು. ಮಲೆನಾಡಿನಲ್ಲಿ ಪೇಟೆ ಜನರು ಮಾತ್ರ ಅಕ್ಕಿ ಖರೀದಿಸುತ್ತಿದ್ದರೇ ವಿನಃ ಹಳ್ಳಿಗಳಲ್ಲಿ ಕೂಲಿ ಕಾರ್ಮಿಕರೂ ವರ್ಷಕ್ಕಾಗುವಷ್ಟು ಭತ್ತವನ್ನು ಮನೆ ಕಣದಲ್ಲಿ ತುಂಬಿಡುತ್ತಿದ್ದರು.


ದಶಕಗಳ ಹಿಂದೆ ದೇಸಿ ತಳಿಗಳನ್ನು ಜಿಲ್ಲೆಯ ರೈತರು ಅವಲಂಬಿಸಿದ್ದರು. ಅವು ಇಲ್ಲಿನ ವಾತಾವರಣ, ಮಣ್ಣಿನ ಗುಣಲಕ್ಷಣಕ್ಕೆ ಹೊಂದಿಕೊಳ್ಳುತ್ತಿದ್ದವು. ಸಾಗರ ಭಾಗದಲ್ಲಿ ಬೆಳೆಯುತ್ತಿದ್ದ ನೆರೆಗುಳಿ ಜಡ್ಡು ಎಂಬ ತಳಿಯಲ್ಲಿ ಔಷಧೀಯ ಗುಣವು ಇತ್ತು, ಕೀಟ ರೋಗ ಬಾಧೆಯು ಕಡಿಮೆ. ಬದಲಾದ ಕಾಲಘಟ್ಟದಲ್ಲಿ ದೇಸಿ ತಳಿಗಳು ದೊರೆತರೂ ಅವು ತುಂಬ ಲಾಭದಾಯಕವಲ್ಲ ಎಂಬ ಕಾರಣಕ್ಕೆ ಭತ್ತದ ಬೆಳೆಗಾರರು ಆಸಕ್ತಿ ತೋರುತ್ತಿಲ್ಲ. ಇಂತಹ ವಿಶೇಷತೆಗಳುಳ್ಳ ಅನೇಕ ದೇಸಿ ತಳಿಗಳು ಇಂದು ಕಣ್ಮರೆಯಾಗುತ್ತಿವೆ.

## ಕಂಬೈನ್ಸ್ ಹಾರ್ವೆಸ್ಟರ್ ಮಲೆನಾಡಿನಲ್ಲಿ ಫಲ ನೀಡುವುದೇ...?

**ಶೃಂಗೇರಿ:** ಮಲೆನಾಡಿನ ಗುಡ್ಡಗಾಡು ಪ್ರದೇಶದ ಭತ್ತದ ಗದ್ದೆಗೂ ಬಯಲು ಸೀಮೆಗೆ ಸಿದ್ದಪಡಿಸಿರುವ ಕಂಬೈನ್ಸ್ ಹಾರ್ವೆಸ್ಟರ್ ಬರುತ್ತಿದ್ದು, ಇದು ಮಲೆನಾಡಿಗೆ ಸೂಕ್ತವಾಗದೇ ಭತ್ತದ ಹುಲ್ಲು, ಭತ್ತ ನಷ್ಟವಾಗುತ್ತಿದೆ. ಭತ್ತ ಬೆಳೆಯು ಇತ್ತೀಚಿನ ವರ್ಷದವರಿಗೂ ಬಹುತೇಕ ಕಾರ್ಮಿಕರನ್ನು ಅವಲಂಬಿಸಿದ್ದು, ಈಗ ಯಾಂತ್ರಿಕೃತವಾಗುತ್ತಿರುವುದು ರೈತರಿಗೆ ವರದಾನವಾಗಿದೆ. ಕಾರ್ಮಿಕರ ಅವಲಂಬನೆ ಕಡಿಮೆಯಾಗಿದ್ದು, ಉಳುಮೆ, ನಾಟಿ, ಔಷಧಿ ಸಿಂಪಡಣೆ, ಕಳೆ ನಿಯಂತ್ರಣ, ಕಟಾವಿಗೆ ಯಂತ್ರೋಪಕರಣ ಬಂದಿದ್ದು, ಕಟಾವಿನ ಯಂತ್ರ ಮಾತ್ರ ಮಲೆನಾಡಿಗೆ ಸೂಕ್ತವಾಗುತ್ತಿಲ್ಲ. ಮಲೆನಾಡಿನ ಭತ್ತದ ಗದ್ದೆ ವಿಸ್ತಾರವಾಗಿರುವ ಗದ್ದೆ ಕಡಿಮೆಯಾಗಿದ್ದು, ಗುಡ್ಡಗಾಡಿನ ಇಳಿಜಾರು ಪ್ರದೇಶದಿಂದ ಕೂಡಿದೆ. ಅಗಲ ಮಟ್ಟವಾದ ಗದ್ದೆ ಇಲ್ಲದೇ ಚಿಕ್ಕ ಚಿಕ್ಕ ಗದ್ದೆ ಕಟಾವಿಗೆ ಹೆಚ್ಚು ಅಡ್ಡಿಯಾಗಿದೆ. ದೊಡ್ಡ ಕಂಬೈನ್ಸ್ ಹಾರ್ವೆಸ್ಟರ್ ಲಾರಿಯಷ್ಟು ದೊಡ್ಡದಾಗಿದ್ದು, ಒಂದು ತುದಿಯಿಂದ ಮತ್ತೊಂದು ತುದಿಗೆ ಹೋಗಿ ತಿರುಗುವಾಗ ಹೆಚ್ಚು ಜಾಗದ ಅಗತ್ಯವಿದೆ. ಕಿರಿದಾದ ಗದ್ದೆಗೆ ದೊಡ್ಡ ಯಂತ್ರ ಹೋಗಲಾಗದೆ, ಕಾರ್ಮಿಕರು ಕೊಯಿಲು ಮಾಡಿ ಯಂತ್ರಕ್ಕೆ ನೀಡಬೇಕು. ಯಂತ್ರ ಸುತ್ತಾಡಿದಲ್ಲಿಯೇ ಮತ್ತೆ ಮತ್ತೆ ಸಂಚರಿಸಿದಾಗ ಮೊದಲು ಕೊಯಿಲು ಆದ ಹುಲ್ಲು ಮಣ್ಣಿನಲ್ಲಿ ಹುಗಿದು ಹಾಳಾಗುತ್ತದೆ.ಅಕಾಲಿಕ ಮಳೆಯಿಂದ ಭತ್ತದ ಗದ್ದೆಯಲ್ಲಿ ಮಣ್ಣಿನಲ್ಲಿ ತೇವಾಂಶ ಹೆಚ್ಚಿದ್ದು, ಕಟಾವಿಗೆ ಬಂದ ಯಂತ್ರ ಎಲ್ಲೆಡೆ ಸಂಚರಿಸುವುದು ಸಾಧ್ಯವಿಲ್ಲ. ಕೆಲ ಗದ್ದೆ ವರ್ಷ ವಿಡಿ ಚೌಗು ಗದ್ದೆಯಾಗಿದ್ದು, ನೀರು ಆರುವುದೇ ಇಲ್ಲ. ಕೆಸರು ಗದ್ದೆಗೆ ಯಂತ್ರ ಇಳಿಯುವುದೇ ಇಲ್ಲ.ಮಳೆಯಾಶ್ರಿತ ಗದ್ದೆಯೂ ಆಕಾಲಿಕ ಮಳೆಯಿಂದ ಮಣ್ಣು ಥಂಡಿಯಾಗಿರುತ್ತದೆ. ಅಗತ್ಯವಾಗಿದೆ ಸಣ್ಣ ಕಟಾವು ಯಂತ್ರ ವಿಯಟ್ನಾಂ ದೇಶದಲ್ಲಿ ಗುಡ್ಡಗಾಡು ಪ್ರದೇಶದಲ್ಲಿ ಅತ್ಯಂತ ಕಿರಿದಾದ ಭತ್ತದ ಗದ್ದೆ ಹಾಗೂ ಸ್ವಲ್ಪ ಜಾಗವನ್ನು ಹಾಳು ಮಾಡದೇ ಪ್ರತಿ ವರ್ಷ ನಾಟಿ ಮಾಡುತ್ತಾರೆ. ಸರಕಾರ ರೈತರಿಗೆ ಬೆಂಬಲವಾಗಿ ನಿಂತಿದ್ದು, ಸಣ್ಣ ಸಣ್ಣ ಯಂತ್ರೋಪಕರಣ, ಸಹಾಯಧನ, ಪ್ರಕೃತಿ ವಿಕೋಪ ಸಂದರ್ಭದಲ್ಲಿ ವಿಮೆ ನೀಡುವುದರಿಂದ ರೈತರ ಆತ್ಮ ವಿಶ್ವಾಸ ಹೆಚ್ಚಿದೆ.ಮಲೆನಾಡಿಗೆ ಸೂಕ್ತವಾದ ಸಣ್ಣ ಯಂತ್ರ ಅಗತ್ಯ: ಇಲ್ಲಿಗೆ ಸರಿಹೊಂದುವ ಕಂಬೈನ್ಸ್ ಹಾರ್ವೆಸ್ಟರ್ ಅಗತ್ಯವಾಗಿದ್ದು, ಕಿರಿದಾದ ಗದ್ದೆ, ಚೌಗು ಗದ್ದೆಗೂ ಇಳಿಯುವಂತಹ ಹಾರ್ವೆಸ್ಟರ್ ಬರಬೇಕು ಎಂಬುದು ರೈತರ ಆಗ್ರಹವಾಗಿದೆ. ಅನೇಕ ಗದ್ದೆಗೆ ಸಮರ್ಪಕ ರಸ್ತೆಯೂ ಇಲ್ಲದೇ ಯಂತ್ರ ಹೋಗಲು ಸಾಧ್ಯವಾಗುವುದಿಲ್ಲ. ಸಣ್ಣ ಮತ್ತು ಸಣ್ಣ ರೈತರಿಗೂ ಉಪಯುಕ್ತವಾಗುವ ಕಂಬೈನ್ಸ್ ಹಾರ್ವೆಸ್ಟರ್ ಅಗತ್ಯವಿದೆ.



# ವಿವಿಧ ಬೇಡಿಕೆ ಈಡೇರಿಸುವಂತೆ ಒತ್ತಾಯಿಸಿ ಪ್ರತಿಭಟನೆ



**ಜಗಳೂರು:** ವಿವಿಧ ಬೇಡಿಕೆ ಈಡೇರಿಸುವಂತೆ ಒತ್ತಾಯಿಸಿ ಪಟ್ಟಣದ ತಾಲೂಕು ಸಾರ್ವ ಜನಿಕ ಆಸ್ಪತ್ರೆ ಮುಂಭಾಗದಲ್ಲಿ ಯುವ ಕರ್ನಾಟಕ ವೇದಿಕೆ ತಾಲೂಕು ಘಟಕದ ವತಿಯಿಂದ ಪ್ರತಿಭಟನೆಯನ್ನು ಮಾಡಲಾಯಿತು.

ಸಂಘಟನೆಯ ತಾಲೂಕು ಅಧ್ಯಕ್ಷ ಮಲ್ಲಿಕಾರ್ಜುನ್ ಮಾತನಾಡಿ, ತಾಲೂಕಿನಲ್ಲಿ ಬಡಜನರು. ಕೂಲಿಕಾರ್ಮಿಕರು, ಹಳ್ಳಿಗಳಿಂದ ಜನರು ಸರ್ಕಾರಿ ಆಸ್ಪತ್ರೆಯನ್ನೇ ಅವಲಂಬಿಸಿದ್ದಾರೆ. ಇಸಿಜಿ, ಲ್ಯಾಬೋರೇಟರಿ ಸೇರಿದಂತೆ ಮೂಲಭೂತ ಸೌಕರ್ಯ ಮರೀಚಿಕೆಯಾಗಿದೆ. ಖಾಸಗಿ ಆಸ್ಪತ್ರೆಗಳಲ್ಲಿ ಹಣ ಭರಿಸಿ ಚಿಕಿತ್ಸೆಯನ್ನು ಪಡೆಯಲಾಗದೆ ಬಡವರು ಸಾವು-ನೋವಿಗೆ ತುತ್ತಾಗುತ್ತಿದ್ದಾರೆ. ಕೂಡಲೇ ಮೂಲ ಸೌಲಭ್ಯ ಕಲ್ಪಿಸಬೇಕೆಂದು ಒತ್ತಾಯಿಸಿದರು.ಡಿಎಸ್ಎಸ್ ತಾಲೂಕು ಅಧ್ಯಕ್ಷ ಮಲೆಮಾಚಿಕೆರೆ ಸತೀಶ್ ಮಾತನಾಡಿ, ಹಲವಾರು ಬಾರಿ ಬಡ ರೋಗಿಗಳಿಗೆ ಅನುಕೂಲವಾಗುವಂತೆ ಆಸ್ಪತ್ರೆಯಲ್ಲಿ ಚಿಕಿತ್ಸೆಯನ್ನು ನೀಡುತ್ತಿಲ್ಲ. ಪ್ರತ್ಯೇಕವಾಗಿ ಪುರುಷ ಮಹಿಳೆಯರಿಗೆ ಚುಚ್ಚುಮದ್ದು ಕೇಂದ್ರವಿಲ್ಲ. ಸರ್ಕಾರಿ ಆಸ್ಪತ್ರೆಯಲ್ಲಿ ಇಸಿಜಿಯಲ್ಲಿ ಬರುತ್ತಿರುವ ವ್ಯತ್ಯಾಸಗಳು ಹೃದಯ ಸಂಬಂಧಿ ಕಾಯಿಲೆಗಳು. ರಕ್ತಪಕ್ಷೆಯನ್ನು ಖಾಸಗಿ ಲ್ಯಾಬ್ ಗೆ ಕಳಿಸಲಾಗುತ್ತಿದೆ. ಒಟ್ಟಾರೆ ಹೇಳಬೇಕಾದರೆ ಸರ್ಕಾರ ಆಸ್ಪತ್ರೆ ಚಿಕಿತ್ಸೆಯನ್ನು ಪಡೆದು ಗುಣಮುಖರಾಗಿ ಹೋಗಬೇಕು. ಆದರೆ ಇಲ್ಲಿ ಇನ್ನೂ ಹೆಚ್ಚಾಗಿ ರೋಗವನ್ನು ತೆಗೆದುಕೊಂಡು ಹೋಗುವಂತಹ ಪರಿಸ್ಥಿತಿ ಹೆದರಾಗಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಮುಖಂಡರಾದ ಬರ್ಕತ್ ಅಲಿ, ಮರೇನಹಳ್ಳಿ ನಾಗರಾಜ್, ಹುಚ್ಚಂಗಿಪುರ ಯುಸಿ ರವಿ,ಪ್ರವೀಣ್, ನರಸಿಂಹ, ಮಹಾಂತೇಶ್, ಶ್ರೀಕಾಂತ್, ಚಿಕ್ಕಮ್ಮನಹಟ್ಟಿ ನಜೀರ್ ಅಹಮ್ಮದ್, ಬಾಬು, ಪ್ರಹ್ಲಾದ್ ಸೇರಿದಂತೆ ಮತ್ತಿತರರು ಇದ್ದರು.

# ವಿಶ್ವ ಶಾಂತಿ, ಭ್ರಾತೃತ್ವ ಧರ್ಮಸಂದೇಶ ಸಾರಿದ ಶ್ರೀ ಆದಿನಾಥ ತೀರ್ಥಂಕರರು ಪ್ರಾತಃಸ್ಮರಣೀಯರು

**ರಿಪ್ಪನ್‌ಪೇಟೆ(ಹೊಂಬುಜ):** ಜೈನ ಧರ್ಮದ ಪ್ರಥಮ ತೀರ್ಥಂಕರ ಶ್ರೀ 1008 ಆದಿನಾಥ ತೀರ್ಥಂಕರರವರು ಜೈನ ಧರ್ಮದ ಮೂಲ ಸಿದ್ಧಾಂತಗಳನ್ನು, ವಿಶ್ವದಲ್ಲೆಲ್ಲ ಶಾಂತಿ, ಭ್ರಾತೃತ್ವದ ಧರ್ಮ ಸಂದೇಶವನ್ನು ಸಾರಿದವರು" ಎಂದು ಹೊಂಬುಜ ಅತಿಶಯ ಶ್ರೀಕ್ಷೇತ್ರದ ಜಗದ್ಗುರು ಸ್ವಸ್ತಿಶ್ರೀ ಡಾ. ದೇವೇಂದ್ರಕೀರ್ತಿ ಭಟ್ಟಾರಕ ಪಟ್ಟಾಚಾರ್ಯವರ್ಯ ಮಹಾಸ್ವಾಮೀಜಿಯವರು ಶ್ರೀ ಆದಿನಾಥ ಸ್ವಾಮಿಯವರು ಮೋಕ್ಷಕಲ್ಯಾಣ ಮಹೋತ್ಸವದ ಧಾರ್ಮಿಕ ವಿಧಿ-ವಿಧಾನಗಳ ಬಳಿಕ ಪ್ರವಚನದಲ್ಲಿ ತಿಳಿಯಬಯಸಿದರು.

ಸಮೀಪದ ಹೊಂಬುಜ ಜೈನಮಠದಲ್ಲಿ ಶ್ರೀಕ್ಷೇತ್ರ ನಗರ ಜಿನಾಲಯದಲ್ಲಿ ಭಕ್ತವೃಂದ, ಕುಂದಕುಂದ ವಿದ್ಯಾಪೀಠದ ವಿದ್ಯಾರ್ಥಿಗಳು ಶ್ರೀ ಆದಿನಾಥ ಸ್ವಾಮಿಯ ಪೂಜೆ ಆಯೋಜಿಸಲಾದ ಕಾರ್ಯಕ್ರಮದ ದಿವ್ಯಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿ "ಅಸಿ, ಮಸಿ, ಕೃಷಿ, ಆದಿ ವಿದ್ಯೆಗಳನ್ನು ಮನುಕುಲಕ್ಕೆ ಹೇಳಿ ಕೊಟ್ಟ ಆದಿನಾಥರು ಬ್ರಾಹ್ಮಿ ಸುಂದರಿಯರಿಗೆ ವಿದ್ಯೆ ಹೇಳಿಕೊಡುವ ಮೂಲಕ ಹೆಣ್ಣುಮಕ್ಕಳ ಶಿಕ್ಷಣಕ್ಕೆ ಒತ್ತು ಕೊಟ್ಟವರು. ಅಂತಿಮವಾಗಿ ಕೈಲಾಸ ಪರ್ವತದಲ್ಲಿ ಆತ್ಮ ಸಾಕ್ಷಾತ್ಕಾರ ಮಾಡಿಕೊಂಡು ಮೋಕ್ಷಕ್ಕೆ" ಹೋದರು."ಅಹಿಂಸಾ ಧರ್ಮ ಪಥದಲ್ಲಿ ಪ್ರಾಣಿ ಪಕ್ಷಿಗಳ, ಸಸ್ಯ ಜೀವಿಗಳ ಸಂರಕ್ಷಣೆ ಮಾಡಬೇಕು. ಮಾನವ ಸಮಾಜದಲ್ಲಿ ಸಹಬಾಳ್ವೆ, ಸಾಮರಸ್ಯದ ಮನೋಭಾವವು ಸರ್ವತ್ರ ಪಸರಿಸಲು ಶ್ರೀ ಆದಿನಾಥ ತೀರ್ಥಂಕರ ಪ್ರಣೀತ ಜೈನ ಧರ್ಮ ಸಾರದ ಸತ್‌ಪರಿಣಾಮದಿಂದ ಅಕ್ಷಯ ಸುಖ ಪ್ರಾಪ್ತಿಯಾಗುತ್ತದೆ" ಎಂದು ತಿಳಿಸಿ ಪ್ರಾತಃಸ್ಮರಣೀಯರಾಗಿರುವರು ಎಂಬ ಶುಭ ಭಾವನೆಯನ್ನು ಸ್ವಸ್ತಿಶ್ರೀಗಳವರು ಹೇಳಿದರು. ಭಕ್ತರನ್ನು ಹರಸಿ, ಆಶೀರ್ವದಿಸಿದರು.

ಹೊಂಬುಜ ಶ್ರೀಕ್ಷೇತ್ರ ನಗರ ಜಿನಾಲಯದಲ್ಲಿ ಭಕ್ತವೃಂದ, ಕುಂದಕುಂದ ವಿದ್ಯಾಪೀಠದ ವಿದ್ಯಾರ್ಥಿಗಳು ಶ್ರೀ ಆದಿನಾಥ ಸ್ವಾಮಿಯ ಪೂಜೆ ನೆರವೇರಿಸಿದರು. ಶ್ರೀ 1008 ಪಾರ್ಶ್ವನಾಥ ಸ್ವಾಮಿ, ಶ್ರೀ ನೇಮಿನಾಥ ಸ್ವಾಮಿ, ಶ್ರೀ ಮಹಾವೀರ ಸ್ವಾಮಿ, ಶ್ರೀ ಸರಸ್ವತಿ ದೇವಿ, ಶ್ರೀ ಕೂಷ್ಮಾಂಡಿನಿ ದೇವಿ ಜಿನಾಲಯಗಳಲ್ಲಿ ವಿಶೇಷ ಪೂಜೆಗಳು ಜರುಗಿದವು. ಜಗನ್ಮಾತೆ ಯಕ್ಷಿ ಶ್ರೀ ಪದ್ಮಾವತಿ ದೇವಿ ಸನ್ನಿಧಿಯಲ್ಲಿ ಸ್ತೋತ್ರಗಳನ್ನು ಪಠಿಸಿ, ಪೂಜೆ ಸಮರ್ಪಿಸಲಾಯಿತು..



# ಕುಂಭಮೇಳ ಕಾಲ್ತುಳಿತದಲ್ಲಿ ಬಲಿಯಾದ ಕನ್ನಡಿಗರಿಗೆ ಕರ್ನಾಟಕ ಸರ್ಕಾರದಿಂದಲೂ ನಗದು ಪರಿಹಾರ

**ಬೆಂಗಳೂರು:** ಪ್ರಯಾಗ್‌ರಾಜ್ ಕುಂಭಮೇಳದಲ್ಲಿ ಕಾಲ್ತುಳಿತಕ್ಕೆ ಬಲಿಯಾದ ಕರ್ನಾಟಕದ ನಾಲ್ಕು ಜನರ ಮೃತದೇಹವನ್ನು ವಿಮಾನಗಳ ಮೂಲಕ ಗುರುವಾರ ಸಂಜೆ ಬೆಳಗಾವಿಗೆ ರವಾನಿಸಲಾಗುವುದು. ನಂತರ ಕುಟುಂಬಸ್ಥರಿಗೆ ನೀಡಲಾಗುವುದು ಎಂದು ಸಚಿವ ಕೃಷ್ಣ ಬೈರೇಗೌಡ ಅವರು ತಿಳಿಸಿದರು. ಅಲ್ಲದೆ, ಮೃತರ ಕುಟುಂಬಗಳಿಗೆ ಪರಿಹಾರ ನೀಡಲು ಚಿಂತನೆ ಇದೆ ಎಂದು ಇದೇ ವೇಳೆ ಮಾಹಿತಿ ನೀಡಿದರು.

ವಿಧಾನಸೌಧದಲ್ಲಿ ಸಚಿವ ಸಂಪುಟ ಸಭೆಯ ನಂತರ ಪತ್ರಕರ್ತರ ಜೊತೆ ಮಾತನಾಡಿದ ಅವರು, "ಕುಂಭಮೇಳ



ದುರಂತದಲ್ಲಿ ಬೆಳಗಾವಿ ತಾಲೂಕು ಯಲ್ಲೂರು ರಸ್ತೆ ವಡಗಾಂವ್ ಭಾಗದ ಮೇಘಾ ದೀಪಕ್ ಹತ್ತರವರ್ (24), ಜ್ಯೋತಿ ದೀಪಕ್ ಹತ್ತರವರ್ (44) ಹಾಗೂ ಬೆಳಗಾವಿ ತಾಲೂಕಿನ ಶೆಟ್ಟಿಗಲ್ಲಿ ಭಾಗದ ಅರುಣಾ ಖೋರ್ಪಡೆ (61), ಮಹಾದೇವಿ ಹಣಮಂತ ಬಾವಣೂರ (48) ಮೃತಪಟ್ಟಿದ್ದಾರೆ. ಮೃತರು ಬೆಳಗಾವಿ ಜಿಲ್ಲೆಯವರಾಗಿದ್ದು, ದೆಹಲಿಯಿಂದ ಬೆಳಗಾವಿಗೆ ವಿಮಾನದ ಮೂಲಕ ಮೃತದೇಹಗಳನ್ನು ಇಂದು ಸಂಜೆ ರವಾನಿಸಲಾಗುವುದು" ಎಂದು ಮಾಹಿತಿ ನೀಡಿದರು.

ಮುಂದುವರೆದು, "ಮೃತರ ಶರೀರಗಳನ್ನು ನಮ್ಮ ಅಧಿಕಾರಿಗಳು ಆಂಬ್ಯುಲೆನ್ಸ್ ಮೂಲಕ ಉತ್ತರಪ್ರದೇಶದಿಂದ ದೆಹಲಿಗೆ ತಂದಿದ್ದಾರೆ. ಮೃತರ ದೇಹಗಳನ್ನು ಏರ್ ಟ್ರಾನ್ಸ್‌ಪೋರ್ಟ್ ಮಾಡುವ ಮೊದಲು ದೆಹಲಿಯಲ್ಲಿ ಎಂಬಾಲ್ಮಿಂಗ್ ಮಾಡಬೇಕು.

# ಮುಂದಿನ ದಿನಗಳಲ್ಲಿ ಎಲ್ಲಾ ಸಂಸ್ಥೆಗಳಲ್ಲೂ ಕನ್ನಡ ಬಾವುಟ ಹಾರಾಟ ಕಡ್ಡಾಯ ಮಾಡುತ್ತೇವೆ : ಡಿ.ಕೆ. ಶಿವಕುಮಾರ್

**ಬೆಂಗಳೂರು:** ಮುಂದಿನ ದಿನಗಳಲ್ಲಿ ಕರ್ನಾಟಕ ರಾಜ್ಯೋತ್ಸವ ಹಿನ್ನೆಲೆಯಲ್ಲಿ ಬೆಂಗಳೂರಿನ ಎಲ್ಲಾ ಸಂಘ ಸಂಸ್ಥೆ (ಸರ್ಕಾರಿ ಹಾಗೂ ಖಾಸಗಿ) ಗಳಲ್ಲಿ ಕನ್ನಡ ಧ್ವಜಾರೋಹಣ ಮಾಡುವುದನ್ನು ಕಡ್ಡಾಯ ಮಾಡಿ ಆದೇಶ ಹೊರಡಿಸಲಾಗುವುದು ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.ವಿಧಾನಸೌಧದ ಆವರಣದಲ್ಲಿ ನೂತನವಾಗಿ ಪ್ರತಿಷ್ಠಾಪಿಸಿರುವ ಭುವನೇಶ್ವರಿಯ ಪ್ರತಿಮೆ ಅನಾವರಣ ಕಾರ್ಯಕ್ರಮದಲ್ಲಿ ಡಿ.ಕೆ. ಶಿವಕುಮಾರ್ ಅವರು ಸೋಮವಾರ ಮಾತನಾಡಿದರು. ನಮ್ಮ ಮಾತೃಭಾಷೆ, ಈ ನೆಲ, ಜಲ ಕಾಪಾಡಲು ಕಾಂಗ್ರೆಸ್ ಸರ್ಕಾರ ಬದ್ಧವಾಗಿದೆ. ಬೆಂಗಳೂರಿನಲ್ಲಿ 107 ಭಾಷೆ ಮಾತನಾಡುವ ಜನರಿದ್ದಾರೆ. ಕಳೆದ ವರ್ಷ ಎಲ್ಲಾ ಸಂಘ ಸಂಸ್ಥೆಗಳಲ್ಲೂ ನವೆಂಬರ್ 1 ರಂದು ಸರ್ಕಾರ ಹಾಗೂ ಖಾಸಗಿ ಸಂಸ್ಥೆಗಳಲ್ಲಿ ಕನ್ನಡದ ಧ್ವಜ ಹಾರಿಸುವಂತೆ ಮಾಡುವ ಪ್ರಯತ್ನಕ್ಕೆ ಮುಂದಾಗಿದ್ದೆ. ನಾನು ಸಂಪೂರ್ಣವಾಗಿ ಯಶಸ್ವಿಯಾಗಿಲ್ಲ, ಆದರೆ ಮುಂದಿನ ದಿನಗಳಲ್ಲಿ ಇದನ್ನು ಕಡ್ಡಾಯ ಮಾಡುವ ಆದೇಶವನ್ನು ಹೊರಡಿಸಲಾಗುವುದು. ಕನ್ನಡ ಸಂಸ್ಕೃತಿ ಇಲಾಖೆ ವತಿಯಿಂದ ಅಥವಾ ಪಾಲಿಕೆ ವತಿಯಿಂದ ಎಲ್ಲಾ ಸಂಸ್ಥೆಗಳಿಗೂ ಕನ್ನಡ ಬಾವುಟ ಪೂರೈಸುವ ಕೆಲಸ ಮಾಡುತ್ತೇವೆ. ಸರ್ಕಾರಿ ಹಾಗೂ ಖಾಸಗಿ ಶಾಲೆಗಳಲ್ಲಿ ಕನ್ನಡರಾಜ್ಯೋತ್ಸವದ ದಿನದಂದು ಸಾಂಸ್ಕೃತಿಕ ಕಾರ್ಯಕ್ರಮ ನಡೆಸುವಂತೆ ಸೂಚಿಸಲಾಗುವುದು. ಆ ಮೂಲಕ ಸಣ್ಣ ವಯಸ್ಸಿನಿಂದಲೇ ಮಕ್ಕಳಲ್ಲಿ ಕನ್ನಡದ ವೈಭವವನ್ನು ಬಿತ್ತುವ ಕೆಲಸ ಮಾಡಲಾಗುವುದು" ಎಂದು ತಿಳಿಸಿದರು.ಮಕ್ಕಳಿಗೆ ಶಾಲೆಗಳಲ್ಲಿ ಕನ್ನಡವನ್ನು ದ್ವಿತೀಯ ಭಾಷೆಯಾಗಿಯಾದರೂ ವ್ಯಾಸಂಗ ಮಾಡಬೇಕು. ಇಲ್ಲದಿದ್ದರೆ ಮಕ್ಕಳು ಕನ್ನಡ ಕಲಿಯಲು ಕಷ್ಟಪಡುತ್ತಾರೆ. ಈ ನಿಟ್ಟಿನಲ್ಲಿ ನಾವು ಒಟ್ಟಾಗಿ ಕನ್ನಡವನ್ನು ಉಳಿಸಿ ಬೆಳೆಸಿಕೊಂಡು ಹೋಗಬೇಕು. ನಾವು ಯಾವುದಕ್ಕೂ ಜಗ್ಗದೆ ನೆಲ, ಜಲ, ಭಾಷೆ ಉಳಿಸಿಕೊಳ್ಳುವ ಕೆಲಸ ಮಾಡುತ್ತೇವೆ. ಈ ಕಾರ್ಯವನ್ನು ಕೇವಲ ಸರ್ಕಾರ ಮಾತ್ರ ಮಾಡುತ್ತಿದೆ ಎಂದು ಹೇಳುವುದಿಲ್ಲ. ಕನ್ನಡ ಸಂಘ ಸಂಸ್ಥೆಗಳು ಈ ಭಾಷೆ ಉಳಿಯಲು ಹೋರಾಟ ಮಾಡುತ್ತಿದ್ದೀರಿ. ನಾವು ಅಧಿಕಾರದ ಆಸೆಗೆ ಹೋರಾಟ ಮಾಡಿದರೆ, ನೀವುಗಳು ಯಾವುದನ್ನು ನಿರೀಕ್ಷೆ ಮಾಡದೇ ಭಾಷೆ ಉಳಿವಿಗೆ ಶ್ರಮಿಸುತ್ತಿದ್ದೀರಿ.ಇಡೀ ಭೂಮಿಯನ್ನು ಕಾಪಾಡುವ ತಾಯಿ ಭುವನೇಶ್ವರಿ, ಕನ್ನಡದ ಕುಲದೇವತೆ ಭುವನೇಶ್ವರಿ. ದೇಶದ ವಿವಿಧ ರಾಜ್ಯಗಳಲ್ಲಿ ಕರ್ನಾಟಕದ ಮಾತೃಭಾಷೆ, ಕನ್ನಡ ಧ್ವಜ ಹಾಗೂ ನಾಡಗೀತೆಯ ಬಗ್ಗೆ ಸಾಕಷ್ಟು ಬಾರಿ ಚರ್ಚೆ ನಡೆದಿದೆ. ದೇಶದ ಬೇರೆ ರಾಜ್ಯಗಳಲ್ಲಿ ನಾಡಗೀತೆ, ನಾಡಧ್ವಜವಿಲ್ಲ. ಇದು ಕರ್ನಾಟಕದಲ್ಲಿ ಮಾತ್ರ ಇದೆ. 7 ಕೋಟಿ ಕನ್ನಡಿಗರನ್ನು ಕಾಪಾಡುತ್ತಿರುವ ಭುವನೇಶ್ವರಿಗೆ ನಮನ ಸಲ್ಲಿಸಲು ನಮ್ಮ ಸರ್ಕಾರ ಈ ಕಾರ್ಯಕ್ರಮ ಮಾಡಿದೆ. ಸಚಿವರಾದ ಶಿವರಾಜ ತಂಗಡಗಿ ಅವರು ತಮಗೆ ಸಿಕ್ಕ ಈ ಅವಕಾಶವನ್ನು ಸ್ಮರಿಸುತ್ತಿದ್ದರು. ನಿಮ್ಮ ಪ್ರತಿ ಮತಕ್ಕೆ ಎಷ್ಟು ಶಕ್ತಿ ಇದೆ ಎಂಬುದು ಸಾಬೀತಾಗಿದೆ. ನಿಮ್ಮ ಮತಕ್ಕೆ 5 ಗ್ಯಾರಂಟಿ ಅನುಷ್ಠಾನವಾಗಿದೆ, ನಾಮಫಲಕಗಳು ಕನ್ನಡಮಯವಾಗಿವೆ. ಕಾರ್ಯಾಂಗ, ನ್ಯಾಯಾಂಗ, ಶಾಸಕಾಂಗದ ಮಧ್ಯೆ ತಾಯಿ ಭುವವನೇಶ್ವರಿ ತಾಯಿ ಪ್ರತಿಮೆ ಅನಾವರಣವಾಗಿದೆ ಎಂದು ತಿಳಿಸಿದರು."ಇತ್ತೀಚೆಗೆ ಬೆಳಗಾವಿಯ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವ ಕಾರ್ಯಕ್ರಮ ಮಾಡಲಾಯಿತು. ಈ ಅಧಿವೇಶನ ಕನ್ನಡ ಭಾಷಾವಾರು ಪ್ರಾಂತ್ಯಕ್ಕೆ ಮುನ್ನುಡಿ ಬರೆದ ಐತಿಹಾಸಿಕ ಸಮಾವೇಶವಾಗಿತ್ತು. ಆ ಸಮಾವೇಶದಲ್ಲಿ 16 ವರ್ಷದ ಗಂಗೂಬಾಯಿ ಹಾನಗಲ್ ಅವರು ಉದಯವಾಗಲಿ ನಮ್ಮ ಚೆಲುವ ಕನ್ನಡ ನಾಡು ಗೀತೆಯನ್ನು ಹಾಡಿದ್ದರು" ಎಂದು ತಿಳಿಸಿದರು. "ಕನ್ನಡವೇ ನಮ್ಮ ತಾಯಿ, ಕನ್ನಡೇ ನಮ್ಮ ದೇವ ಭಾಷೆ, ತುಂಗಾ, ಭದ್ರ, ಕೃಷ್ಣ, ಕಾವೇರಿ ಎಲ್ಲಾ ನದಿಗಳು ನಮ್ಮ ಪಾಲಿನ ಪುಣ್ಯ ತೀರ್ಥಗಳು. ಮನುಷ್ಯನ ಹುಟ್ಟು ಆಕಸ್ಮಿಕ ಸಾವು ಅನಿವಾರ್ಯ, ಜನನ ಉಚಿತ ಮರಣ ಖಚಿತ, ಈ ಹುಟ್ಟು ಸಾವಿನ ಮಧ್ಯೆ ನಾವು ಏನು ಸಾಧನೆ ಮಾಡುತ್ತೇವೆ ಅದು ಜೀವಂತವಾಗಿ ಉಳಿಯುತ್ತದೆ. ನಮ್ಮ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ರಾಮಕೃಷ್ಣ ಹೆಗಡೆ ಅವರ ಕಾಲದಲ್ಲಿ ಕನ್ನಡ ಕಾವಲು ಸಮಿತಿಯ ಅಧ್ಯಕ್ಷರಾಗಿದ್ದರು. ಅವತ್ತಿನಿಂದ ಕನ್ನಡದ ಬಗ್ಗೆ ಅಪಾರವಾದ ಕಾಳಜಿ ಹೊಂದಿದ್ದಾರೆ. ಸಚಿವ ಸಂಪುಟದಲ್ಲಿ ಯಾವುದೇ ವಿಚಾರ ಪ್ರಸ್ತಾಪ ಮಾಡಬೇಕಾದರೂ ಕನ್ನಡದ ಕಡತಗಳಲ್ಲೇ ಮಂಡಿಸಬೇಕು ಎಂದು ಆದೇಶ ಹೊರಡಿಸಿದ್ದಾರೆ" ಎಂದರು.

# ಬೀದರ್: ಕಾರು-ಗೂಡ್ಸ್ ವಾಹನದ ನಡುವೆ ಢಿಕ್ಕಿ, ಇಬ್ಬರು ಸಾವು

**ಬೀದರ್:** ಕಾರು ಮತ್ತು ಗೂಡ್ಸ್ ವಾಹನದ ನಡುವೆ ಢಿಕ್ಕಿ ಸಂಭವಿಸಿ ಇಬ್ಬರು ಮೃತಪಟ್ಟಿರುವ ಘಟನೆ ಜಿಲ್ಲೆಯ ಹುಮನಾಬಾದ್ ತಾಲ್ಲೂಕಿನ ಹಳ್ಳಿಖೇಡ್ ಬಿ ಗ್ರಾಮದ ಬಳಿ ಮಂಗಳವಾರ ನಡೆದಿದೆ. ಮೃತರನ್ನು ಕಲಬುರಗಿ ಜಿಲ್ಲೆ ಕಮಲಾಪುರ ತಾಲೂಕಿನ ನಾಗೂರು ಗ್ರಾಮದ ನಿವಾಸಿ ಜಗನ್ನಾಥ (35) ಹಾಗೂ ಬೀದರ್ ನ ಎಂಡಿ ಇಸ್ಮಾಯಿಲ್ (45) ಎಂದು ಗುರುತಿಸಲಾಗಿದೆ. ಹಳ್ಳಿಖೇಡ್ ನ ಬಿಎಸ್ಎಸ್ ಕೆ ಸಕ್ಕರೆ ಕಾರ್ಖಾನೆ ಹತ್ತಿರುವ ಇರುವ ಸೇತುವೆ ಮೇಲೆ ವಾಹನಗಳು ಪರಸ್ಪರ ಢಿಕ್ಕಿ ಹೊಡೆದು ಈ ದುರಂತ ಸಂಭವಿಸಿದೆ. ಘಟನೆಯಲ್ಲಿ ಇಬ್ಬರು ಸ್ಥಳದಲ್ಲಿಯೇ ಮೃತಪಟ್ಟಿದ್ದು, ಹಲವರು ಗಾಯಗೊಂಡಿದ್ದಾರೆ. ಗಾಯಾಳುಗಳನ್ನು ಸಮೀಪದ ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ತಿಳಿದುಬಂದಿದೆ.

# ಮೈಕ್ರೋಫೈನಾನ್ಸ್ ಕಿರುಕುಳಕ್ಕೆ ಮತ್ತೆ 2 ಬಲಿ!

**ಬೆಂಗಳೂರು:** ಮೈಕ್ರೋ ಫೈನಾನ್ಸ್ ಕಂಪನಿಗಳಿಂದ ಸಾಲ ಪಡೆಯುವವರ ಹಿತಾಸಕ್ತಿಗಳನ್ನು ರಕ್ಷಿಸಲು ಕರಡು ಸುಗ್ರೀವಾಜ್ಞೆ ತರಲು ಇಂದು ಸಭೆ ನಡೆಸಿ ಅಂತಿಮ ತೀರ್ಮಾನ ಕೈಗೊಳ್ಳಲಾಗುವುದು ಎಂದು ಗೃಹ ಸಚಿವ ಡಾ ಜಿ ಪರಮೇಶ್ವರ್ ತಿಳಿಸಿದ್ದಾರೆ. ಕರಡನ್ನು ಅಂತಿಮಗೊಳಿಸಿದ ನಂತರ ನಾಳೆ ನಡೆಯಲಿರುವ ಸಚಿವ ಸಂಪುಟ ಸಭೆಯಲ್ಲಿ ಮಂಡಿಸಲಾಗುವುದು. ನಂತರ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರಿಗೆ ಕಳುಹಿಸಲಾಗುವುದು ಎಂದು ಹೇಳಿದರು. ಈಮಧ್ಯೆ, ಮೈಕ್ರೋ ಫೈನಾನ್ಸ್ ಕಿರುಕುಳಕ್ಕೆ ರಾಜ್ಯದಲ್ಲಿ ಮತ್ತಿಬ್ಬರು ಬಲಿಯಾಗಿದ್ದಾರೆ. ಪ್ರೇಮಾ ಮತ್ತು ಹೇಮಂತ್ ಮೃತಪಟ್ಟಿದ್ದು, ಮಳವಳ್ಳಿ ತಾಲೂಕಿನ ಕೊನ್ನಾಪುರ ಗ್ರಾಮದ ಪ್ರೇಮಾ ಎಂಬುವರು ಚನ್ನಪಟ್ಟಣದ ಉಜ್ಜೀವನ್ ಬ್ಯಾಂಕ್‌ನಲ್ಲಿ 6 ಲಕ್ಷ ರೂ. ಸಾಲ ಪಡೆದಿದ್ದರು. ಮೂರು ತಿಂಗಳ ಕಂತು ಕಟ್ಟದ ಹಿನ್ನೆಲೆ ವಾರದ ಹಿಂದೆಯಷ್ಟೇ ಪ್ರೇಮಾ ಮನೆ ಸೀಜ್ ಮಾಡಲಾಗಿತ್ತು. ಇದರಿಂದ ಮನನೊಂದು ಪ್ರೇಮಾ ಅವರು ಮಾತ್ರೆ ಸೇವಿಸಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಮತ್ತೊಂದೆಡೆ ಹಾಸನ ಜಿಲ್ಲೆ ಆಲೂರು ತಾಲೂಕಿನ ಬಂಡಿತಿಮ್ಮನಹಳ್ಳಿಯಲ್ಲಿ ಮೈಕ್ರೋ ಫೈನಾನ್ಸ್ ಸಿಬ್ಬಂದಿ ಕಿರುಕುಳ ಆರೋಪ ಹಿನ್ನಲ್ಲೆ ರೈತ 52 ವರ್ಷದ ಹೇಮಂತ್ ಎಂಬುವರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

# ಕುಂಭಮೇಳಕ್ಕೆ ತೆರಳಿ ವಾಪಸಾಗುತ್ತಿದ್ದಾಗ ರಸ್ತೆ ಅಪಘಾತ; ಕರ್ನಾಟಕದ ಇಬ್ಬರು ಯುವಕರು ಸಾವು


**ಬೆಂಗಳೂರು:** ಪ್ರಯಾಗ್ರಾಜ್ ಮಹಾಕುಂಭಮೇಳ ಯಾತ್ರೆ ಮುಗಿಸಿ ವಾಪಸ್ ಬರುತ್ತಿದ್ದಾಗ ಸಂಭವಿಸಿದ ಕಾರು ಅಪಘಾತದಲ್ಲಿ ರಾಜ್ಯದ ಇಬ್ಬರು ಯುವಕರು ಮೃತಪಟ್ಟಿರುವ ಘಟನೆ ಉತ್ತರ ಪ್ರದೇಶದ ಮಿರ್ಜಾಪುರ ಬಳಿ ನಡೆದಿದೆ. ಮೈಸೂರು ತಾಲೂಕಿನ ಮಂಟೇಕ್ಯಾತನಹಳ್ಳಿ ನಿವಾಸಿ ರಾಮಕೃಷ್ಣ ಶರ್ಮಾ, ಮಂಡ್ಯ ಜಿಲ್ಲೆ ಶ್ರೀರಂಗಪಟ್ಟ ತಾಲೂಕಿನ ಕೆಆರ್‌ಎಸ್ ನಿವಾಸಿ ಅರುಣ್ ಶಾಸ್ತ್ರಿ ಎರಡು ಕಾರುಗಳಲ್ಲಿ ಪ್ರಯಾಗ್ರಾಜ್ ಯಾತ್ರೆಗೆ ಹೋಗಿದ್ದರು. ಪ್ರಯಾಗ್ರಾಜ್ ಯಾತ್ರೆ ಮುಗಿಸಿ ಕಾಶಿಗೆ ಬರುತ್ತಿದ್ದಾಗ ಮಿರ್ಜಾಪುರದ ಬಳಿ ಲಾರಿ ಮತ್ತು ಕಾರಿನ ನಡುವೆ ಅಪಘಾತ ಸಂಭವಿಸಿದೆ. ಈ ವೇಳೆ ತಲೆಗೆ ತೀವ್ರ ಪೆಟ್ಟು ಬಿದ್ದು ಇಬ್ಬರು ಆಸ್ಪತ್ರೆಗೆ ದಾಖಲಾಗಿದ್ದರು. ಆದರೆ, ಚಿಕಿತ್ಸೆ ಫಲಿಸದೆ ಮೃತಪಟ್ಟಿದ್ದಾರೆ.


## ಕ್ರಯಪತ್ರ ಕಳೆದಿದೆ

ಶೇಖರಪ್ಪ ಬಿನ್ ನಿಂಗಪ್ಪ, ಜಿರಾಯ್ತಿ ಕಸುಬಿನ, 80 ವರ್ಷ ವಯಸ್ಸಿನ, ಉಬ್ರಾಣಿ ಹೋಬಳಿ, ಪಾಂಡೋಮಟ್ಟಿ ವಾಸಿ ಆದ ನಾನು ಪ್ರಮಾಣಪೂರ್ವಕವಾಗಿ ತಿಳಿಸುವುದೇನೆಂದರೆ, ದಿನಾಂಕ : 25-12-2024 ರಂದು ಚನ್ನಗಿರಿಯಲ್ಲಿ ನನ್ನ ಜಮೀನಿನ ನೊಂದಣಿ ಹಾಗೂ ಮುದ್ರಾಂಕ ಇಲಾಖೆಯಿಂದ ಐ.ಎಚ್. ನಂ. 11-2005-06ರ ಮೂಲಕ ಬಂದಿರುವ 63/1ಬಿ ಸರ್ವೆ ನಂ. ಕೃಷಿ ಜಮೀನಿನಲ್ಲಿ 23 ಗುಂಟೆಯನ್ನು ಖರೀದಿ ಮಾಡಿದ್ದು, ಸದರಿ ನೊಂದಣಿ ಕ್ರಯಪತ್ರ ಕಳೆದು ಹೋಗಿರುತ್ತದೆ. ಯಾರಿಗಾದರೂ ಸಿಕ್ಕಲ್ಲಿ ದಯಮಾಡಿ ನನ್ನ ವಿಳಾಸಕ್ಕೆ ತಲುಪಿಸಬೇಕೆಂದು ತಮ್ಮಲ್ಲಿ ಕೇಳಿಕೊಳ್ಳುತ್ತೇನೆ.

ಸ್ಥಳ : ಚನ್ನಗಿರಿ. ಶೇಖರಪ್ಪ


# ಕಳೂರು: ಹಂದಿ ದಾಳಿಗೆ 300 ಅಡಿಕೆ ಸಸಿ ನಾಶ



**ತುಮರಿ:** ತಾಲ್ಲೂಕಿನ ಕರೂರು ಹೋಬಳಿಯ ಕಳೂರು ಗ್ರಾಮದಲ್ಲಿ ಕಾಡು ಹಂದಿಗಳ ಹಾವಳಿ ಹೆಚ್ಚಿದ್ದು, ಅಡಿಕೆ ಸಸಿ ಮತ್ತು ಬಾಳೆ ಗಿಡ ನಾಶವಾಗಿವೆ. ಕಳೆದೆರಡು ವಾರದಲ್ಲಿ ಕಾಡು ಹಂದಿ ದಾಳಿಯಿಂದ ಗ್ರಾಮದಲ್ಲಿ 300ಕ್ಕೂ ಹೆಚ್ಚು ಅಡಿಕೆ ಸಸಿಗಳು ಕಾಡುಹಂದಿಗಳಿಗೆ ಬಲಿಯಾಗಿವೆ.
ಗ್ರಾಮದ ಸರ್ವೆ ನಂ.51ರ ಅಡಿಕೆ ತೋಟಕ್ಕೆ ಶನಿವಾರ ರಾತ್ರಿ ಕಾಡುಹಂದಿಗಳು ದಾಳಿಮಾಡಿ 80 ಅಡಿಕೆ ಸಸಿಗಳನ್ನು ನಾಶಪಡಿಸಿವೆ. ವಾರದ ಹಿಂದೆ ಇದೇ ಗ್ರಾಮದ ರಾಜಪ್ಪ ಹಸಿರುಮನೆ, ಗಣಪತಿ, ಸ್ವಾಮಿ ನಾಯ್ಕ, ಮರಿಯಪ್ಪ ಎಂಬವರ 250 ಅಡಿಕೆ ಸಸಿಗಳನ್ನು ಹಾಳುಮಾಡಿದ್ದವು.
ರಾತ್ರಿ ಸಮಯದಲ್ಲಿ ತೋಟಕ್ಕೆ ಕಾಲಿಡುವ ಕಾಡುಹಂದಿಗಳು, ಬೆಳೆದು ನಿಂತ ಅಡಿಕೆ ಹಾಗೂ ಬಾಳೆ ಗಿಡಗಳನ್ನು ಮುರಿದು ಹಾಕುವುರಿಂದ ರೈತರು ಸಂಕಷ್ಟ ಅನುಭವಿಸುವಂತಾಗಿದೆ. ಇತ್ತೀಚಿನ ದಿನದಲ್ಲಿ ಅಡಿಕೆಗೆ ಕೊಳೆರೋಗದಿಂದ ನಷ್ಟ ಒಂದೆಡೆಯಾದರೆ, ಫಸಲಿಗೆ ಬರುವ ಹಂತದಲ್ಲಿರುವ ಅಡಿಕೆ ಗಿಡಗಳನ್ನು ಕಾಡು ಪ್ರಾಣಿಗಳು ತಿಂದು ಹಾಳುಮಾಡುತ್ತಿವೆ. ಕಳೆದಮೂರು ವರ್ಷಗಳಿಂದ ಮಕ್ಕಳಂತೆ ಬೆಳೆಸಿರುವ ಗಿಡಗಳು ನಾಶವಾಗಿವೆ' ಎಂದು ಸುಮಿತ್ರಮ್ಮ ಹೇಳಿದ್ದಾರೆ.
ರೈತರಿಗೆ ಕೋವಿ ಪರವಾನಿಗೆ ಇದ್ದರೂ ಪ್ರಾಣಿಗಳನ್ನು ಹತ್ಯೆ ಮಾಡಲು ಕಾನೂನಿನಲ್ಲಿ ಅವಕಾಶವಿಲ್ಲ. ಹಂದಿಗಳನ್ನು ಬೆದರಿಸಲು ವೈಜ್ಞಾನಿಕವಾಗಿಹೊಸ ಅವಿಷ್ಕಾರಗಳು ನಡೆಯಬೇಕಿವೆ. ಹಂದಿಗಳ ಹಿಂಡಿನಲ್ಲಿ ಮರಿಗಳೂ ಇರುವುದರಿಂದ ತಾಯಿ ಹಂದಿಯುಜನರ ಮೇಲೆ ದಾಳಿ ನಡೆಸುವ ಸಾಧ್ಯತೆ ಹೆಚ್ಚಾಗಿರುತ್ತದೆ.
ಕಾಡು ಹಂದಿಯನ್ನು ಕೊಲ್ಲುವುದು ಕಾನೂನು ಬಾಹಿರ. ಹಾಗಾಗಿ ಅಸಹಾಯರಾಗಿದ್ದೇವೆ ಎನ್ನುತ್ತಾರೆ ರೈತರಾದ ಗಣಪತಿ, ರಾಜಪ್ಪ.
ಅರಣ್ಯ ಇಲಾಖೆಯಿಂದ ಪರಿಹಾರ:
ಕಾರ್ಗಲ್ ವನ್ಯಜೀವಿ ವಿಭಾಗದ ಉಪ ವಲಯ ಅರಣ್ಯ ಅಧಿಕಾರಿ ಸುಧಾಕರ್ ಪ್ರತಿಕ್ರಿಯಿಸಿ, 'ಕಾಡು ಹಂದಿಯನ್ನು ಹತ್ಯೆ ಮಾಡುವುದು ವನ್ಯಜೀವಿ ಕಾನೂನು ಪ್ರಕಾರ ಅಪರಾಧವಾಗುತ್ತದೆ. ಕಾಡುಹಂ ದಿಗಳು ಬೆಳೆ ನಾಶಮಾಡಿದರೆ ರೈತರಿಗೆ ಪರಿಹಾರ (ಎಕ್ಸ್‌ಗ್ರೇಶಿಯಾ) ನೀಡುವಯೋಜನೆ ಈಗಾಗಲೇ ಜಾರಿಯಲ್ಲಿದೆ.
ರೈತರು ಬೆಳೆ ವಿಮೆ ಪಾವತಿಸಿ, ಬ್ಯಾಂಕ್ ಪಾಸ್ ಬುಕ್ ಪ್ರತಿ, ಸೂಕ್ತ ದಾಖಲೆಗಳನ್ನು ಸಲ್ಲಿಸಿದರೆ ರೈತರಿಗೆ ನಿಯಮಾನುಸಾರ ಪರಿಹಾರ ವಿತರಿಸಲು ಕ್ರಮಕೈಗೊಳ್ಳಲಾಗುವುದು ಎಂದರು.
'ರೈತರು ಹಾನಿಗೊಳಗಾದ ತಮ್ಮ ಜಮೀನಿನ ಪಹಣಿಯ ಜೊತೆಗೆ ಅರಣ್ಯ ಇಲಾಖೆಗೆ ಅರ್ಜಿ ಕೊಡಬೇಕು. ಇಲಾಖೆಯುಫೋಟೊ ಮತ್ತು ವಿಡಿಯೊಚಿತ್ರೀಕರಣ ಮಾಡಿಯೋಜನೆಯ ತಂತ್ರಾಂಶಕ್ಕೆ ಅಳವಡಿಸುತ್ತದೆ. ಅದು ಪರಿಹಾರ ಮೊತ್ತವನ್ನು ನಿಗದಿಪಡಿಸುತ್ತದೆ. ಆ ಪ್ರಕಾರ ರೈತರಿಗೆ ಪರಿಹಾರ ನೀಡಬಹುದಾಗಿದೆ' ಎಂದು ಸ್ಪಷ್ಟಪಡಿಸಿದರು.

# ಫೆ.3ರಂದು ಜಿ.ಎಂ. ವಿವಿಯಿಂದ ಒಂಭತ್ತು ಪುಸ್ತಕಗಳ ಬಿಡುಗಡೆ




**ದಾವಣಗೆರೆ:** ನಗರದ ಜಿಎಂ ವಿಶ್ವವಿದ್ಯಾಲಯವು 'ಜ್ಞಾನ ಸರಣಿ' ಹೆಸರಿನಡಿ ಜನೋಪಯುಕ್ತ ವಿಷಯಗಳನ್ನು ಹೊತ್ತಿರುವ ಒಂಭತ್ತು ಪುಸ್ತಕಗಳನ್ನು ಫೆ. 3 ರಂದು ಲೋಕಾರ್ಪಣೆ ಮಾಡುತ್ತಿದೆ ಎಂದು ತರಬೇತಿ ಮತ್ತು ಉದ್ಯೋಗ ವಿಭಾಗದ ನಿರ್ದೇಶಕ ಟಿ.ಆರ್. ತೇಜಸ್ವಿ ಕಟ್ಟಿಮನಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಫೆ. 3 ರಂದು ಜಿ.ಎಂ. ವಿಶ್ವವಿದ್ಯಾಲಯದ ಎ.ವಿ. ಕೊಠಡಿಯಲ್ಲಿ ಮುದ್ರಿತವಾದ ಈ ಪುಸ್ತಕಗಳನ್ನು ಬಿಡುಗಡೆಗೊಳಿಸಲಾಗುವುದು. ಇಂಗ್ಲೀಷ್ ಹಾಗೂ ಕನ್ನಡ ಮಾದರಿ ಪ್ರತಿಗಳನ್ನು ಉಚಿತ ಪ್ರಕಟಣೆ ಮತ್ತು ಹಂಚಿಕೆ ಮಾಡಲಾಗುವುದು ಎಂದರು.

ಬೆಂಗಳೂರಿನ ಸರ್ಕಾರಿ ದಂತ ಕಾಲೇಜಿನಲ್ಲಿ ವಿದ್ಯಾಭ್ಯಾಸ ಮುಗಿಸಿ ದಂತ ವೈದ್ಯ ಕ್ಷೇತ್ರದಲ್ಲಿ 35 ವರ್ಷ ಅನುಭವವುಳ್ಳ ಡಾ. ಉಮಾ ಮುರಳೀಧರ್ ಅವರು ದಂತ ರಚನೆ ಮತ್ತು ದಂತ ಆರೋಗ್ಯ ಮತ್ತು ಆರೈಕೆ ಬಗ್ಗೆ ಮಾಹಿತಿಯುಳ್ಳ ಡೆಂಟಲ್ ಹ್ಯಾಂಡ್ ಬುಕ್ ಎಂಬ ಪುಸ್ತಕ ಬರೆದಿದ್ದಾರೆ.

ಜಿಎಂ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ. ಎಸ್.ಆರ್. ಶಂಕಪಾಲ್ ಅವರು 'ಹವಾಮಾನ ಬದಲಾವಣೆ ಮತ್ತು ಜೀವವೈವಿಧ್ಯದ ನಷ್ಟದಿಂದ ಸಂಪನ್ಮೂಲ ಸವಕಳಿ' ಮತ್ತು 'ಸಾಮಾಜಿಕ ಅಸಮಾನತೆಗಳು, ಮಾನವೀಯತೆಯು ಅಡ್ಡಹಾದಿಯಲ್ಲಿ ನಿಂತಿರುವುದನ್ನು ಪ್ರಸ್ತುತಪಡಿಸುವ ಹಾಗೂ ವಿಭಿನ್ನ ಯೋಚನೆ, ಜವಾಬ್ದಾರಿಯುತ ವರ್ತನೆ ಮತ್ತು ಹೊಸತನ ಕಂಡುಕೊಳ್ಳಲು ಸಮುದಾಯಗಳಿಗೆ ಅರಿವು ಮೂಡಿಸುವ "ಸಸ್ಟೈನೆಬಿಲಿಟಿ ಅನ್ ಬಾಕ್ಸ್ಡ್: ಇನೋವೇಟಿಂಗ್ ಎ ಗ್ರೀನರ್ ಫ್ಯೂಚರ್" ಎಂಬ ಪುಸ್ತಕ, ಭಾರತ ಮತ್ತು ಜಾಗತಿಕ ಸಂದರ್ಭಗಳು ಮತ್ತು ಅಭಿವೃದ್ಧಿಪಡಿಸಲು ಹಲವಾರು ಅವಕಾಶಗಳನ್ನು ಗುರುತಿಸುತ್ತದೆ ಎಂದರು.

ಸಾಮಾಜಿಕ ಸಮಾನತೆ ಮತ್ತು ಭದ್ರತೆಗೆ ಶಕ್ತಿ ಮತ್ತು ತ್ಯಾಜ್ಯ ನಿರ್ವಹಣೆ ಪುಸ್ತಕವು ಒತ್ತಿಹೇಳುವ "ಸಸ್ಟೈನೆಬೆಲ್ ಫ್ಯೂಚರ್ಸ್ - ಆಪರ್ಚುನಿಟೀಸ್ ಅಂಡ್ ಇನ್ನೋವೇಷನ್ಸ್ ಫಾರ್ ಎ ಚೇಂಜಿಂಗ್ ವರ್ಲ್ಡ್" ಪುಸ್ತಕ ಹಾಗೂ ಎಲೆಕ್ಟ್ರಿಕ್ ವಾಹನಗಳ ಸಂಕೀರ್ಣತೆಗಳು ಮತ್ತು ಅವುಗಳ ಅಳವಡಿಸಿಕೊಳ್ಳುವುದರ ಪರಿಣಾಮಗಳ ಕುರಿತಾದ "ಡ್ರೈವಿಂಗ್ ದ ಫ್ಯೂಚರ್ - ಅಂಡಸ್ಟ್ಯಾಂಡಿಂಗ್ ಎಲೆಕ್ಟ್ರಿಕ್ ಕಾರ್ ಇನ್ಸೈಡ್ ಔಟ್" ಎಂಬ ಪುಸ್ತಕ ಮತ್ತು ದಾವಣಗೆರೆ ಜಿಲ್ಲೆಯ ಪರಿವರ್ತನೆಯ ಕಾರ್ಯತಂತ್ರದ ಮಾರ್ಗಸೂಚಿ ಪ್ರಸ್ತುತಪಡಿಸುವ ಹಾಗೂ ಶಿಕ್ಷಣ ಮತ್ತು ಸಮುದಾಯದ ಕ್ಷೇತ್ರಗಳಲ್ಲಿ ಜಿಎಂ ವಿಶ್ವವಿದ್ಯಾಲಯದ ಒಂದು ಅವಲೋಕನದ ಜೊತೆಗೆ ವಿಶ್ವವಿದ್ಯಾಲಯದ ಹಸ್ತಕ್ಷೇಪದ ಮೂಲಕ ಅಭಿವೃದ್ಧಿ ಜೊತೆಗೆ ದಾವಣಗೆರೆ ಜಿಲ್ಲೆಯ ಪರಿಚಯವನ್ನು ಒಳಗೊಂಡ "ಟ್ರಾನ್ಸ್‌ಫಾರ್ಮಿಂಗ್ ದಾವಣಗೆರೆ ಡಿಸ್ಟ್ರಿಕ್ಟ್ - ಇಂಟರ್ವೆನ್ಷನ್ ಆಫ್ ಜಿಎಂ ಯೂನಿವರ್ಸಿಟಿ ಥ್ರೂ ಎಜುಕೇಶನ ಅಂಡ್ ಇನ್ನೋವೇಶನ್" ಎಂಬುದು ಸೇರಿದಂತೆ ಈ 4 ಪುಸ್ತಕಗಳನ್ನು ಬರೆದಿದ್ದಾರೆ.

ಮಾಧುರಿ ಎಚ್.ಆರ್. ಮತ್ತು ಪ್ರತಿಕ್ಷಾ ಸಿ.ಸಿ. ಅವರುಗಳು "ಮಹಿಳೆಯರ ಮೆನ್ಸ್ಟ್ರುವಲ್ ಆರೋಗ್ಯ - ಆರೈಕೆ, ಶಕ್ತಿ ಮತ್ತು ಆರೋಗ್ಯದೊಂದಿಗೆ ಮಹಿಳೆಯರನ್ನು ಸಬಲಗೊಳಿಸುವುದು" ಎಂಬ ಪುಸ್ತಕ ಬರೆದಿದ್ದಾರೆ. ತೇಜಸ್ವಿನಿ ಎಚ್.ಎಂ. ಅವರು "ಹೆಲ್ಪಿಂಗ್ ಹ್ಯಾಂಡ್ಸ್ - ಸರಳ ಸಹಾಯ ಮಾರ್ಗದರ್ಶಿ: ಮಾಡಬೇಕಾದವು ಮತ್ತು ಮಾಡಬಾರಾದವು ಎಂಬ ಪುಸ್ತಕ, ಮೊಹಮ್ಮದ್ ಯೂಸುಫ್ ಮಲಿಕ್ ದಾಮನಿ, ರಾಕೇಶ್ ಎಸ್.ಎ. ಅವರುಗಳು "ದೈನಂದಿನ ಆಹಾರದ ಆರೋಗ್ಯಕರ ಶಕ್ತಿ" ಎಂಬ ಪುಸ್ತಕ, ಡಾ. ಅಮಿತ್ ಕುಮಾರ್ ಬಿ., ಶ್ರೀಮತಿ ಅಲಿಶಾ ಎಂ. ಜೈನ್ ಎಂಬುವರು "ಫ್ಲರಿಶ್ - ಆರೋಗ್ಯಕರ ಜೀವನದ ದೃಶ್ಯ ಮಾರ್ಗದರ್ಶಿ" ಎಂಬ ಪುಸ್ತಕ ಬರೆದಿದ್ದಾರೆ.

www.gmu.ac.in ಈ ವೆಬ್ ಸೈಟ್ ನಲ್ಲೂ ಒಟ್ಟು ಈ 9 ಪುಸ್ತಕಗಳಲ್ಲಿನ ಮಾಹಿತಿ ಲಭಿಸಲಿದೆ ಎಂದು ವಿವರಿಸಿದರು.

ಸುದ್ದಿಗೋಷ್ಠಿಯಲ್ಲಿ ಜಿಎಂ ವಿಶ್ವವಿದ್ಯಾಲಯದ ಮಾನವ ಸಂಪನ್ಮೂಲ ನಿರ್ದೇಶಕ ಡಾ. ಟಿ.ಎಂ. ವೀರ ಗಂಗಾಧರ ಸ್ವಾಮಿ, ಜಿಎಂ ಇನ್ಸ್ಟಿಟ್ಯೂಟ್ ಆಫ್ ಫಾರ್ಮಸಿಟಿಕಲ್ ಸೈನ್ಸ್ ಅಂಡ್ ರಿಸರ್ಚ್ ವಿಭಾಗದ ಪ್ರಾಂಶುಪಾಲರಾದ ಡಾ. ಗಿರೀಶ್ ಬೊಳಕಟ್ಟಿ, ಉಪಸ್ಥಿತರಿದ್ದರು.

# ಚನ್ನಗಿರಿ ಕ್ಷೇತ್ರದ ನೀರಾವರಿ ಅಭಿವೃದ್ಧಿಗೆ ನೆರವು ಕೋರಿದ ಶಾಸಕ ಬಸವರಾಜು ಶಿವಗಂಗಾ



**ಬೆಂಗಳೂರು:** ಉಬ್ರಾಣಿ ಹಾಗೂ ಅಮೃತಾಪುರ ಏತನೀರಾವರಿ ಯೋಜನೆಗೆ ಸಂಬಂಧಿಸಿದಂತೆ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅಧ್ಯಕ್ಷತೆಯಲ್ಲಿ ಕರ್ನಾಟಕ ನೀರಾವರಿ ನಿಗಮ ಕೇಂದ್ರ ಕಛೇರಿಯಲ್ಲಿ ನಡೆದ ಸಭೆಯಲ್ಲಿ ಚನ್ನಗಿರಿ ಕ್ಷೇತ್ರದ ನೀರಾವರಿ ಅಭಿವೃದ್ಧಿಗೆ ಹೆಚ್ಚು ಅನುದಾನ ನೀಡುವಂತೆ ಶಾಸಕರಾದ ಬಸವರಾಜು ವಿ. ಶಿವಗಂಗಾ ಒತ್ತಾಯಿಸಿದರು.

ತುಂಗಾ ಮೇಲ್ದಂಡೆ ವಲಯ ಯೋಜನೆಗಳ ಕಾಮಗಾರಿಗಳ ಪರಿಶೀಲನಾ ಸಭೆಯಲ್ಲಿ ಶಾಸಕರು ಪ್ರಸ್ತಾಪಿಸಿ ರೈತರ ಹಿತ ಕುರಿತು ಮಾನವರಿಕೆ ಮಾಡಿದರು.

ತುಂಗಾ ಮೇಲ್ದಂಡೆ ಯೋಜನೆ ವಲಯ ವ್ಯಾಪ್ತಿ ಚನ್ನಗಿರಿ ವಿಧಾನಸಭಾ ಕ್ಷೇತ್ರದ ಜಲಸಂಪನ್ಮೂಲ ಇಲಾಖೆಯಿಂದ ಪ್ರಗತಿಯಲ್ಲಿರುವ ಕಾಮಗಾರಿಗಳು, ಕೈಗೊಳ್ಳಬೇಕಾರುವ ಯೋಜನೆಗಳನ್ನು ತ್ವರಿತವಾಗಿ ಪರಿಹರಿಸುವಂತೆ ಒತ್ತಾಯಿಸಿದರು.

ಉಬ್ರಾಣಿ, ಅಮೃತಾಪುರ ಏತನೀರಾವರಿ ಯೋಜನೆಗೆ ಸಂಬಂಧಿಸಿದಂತೆ ಅಭಿವೃದ್ಧಿ ಕುರಿತು ಸಚಿವರು ಹಾಗೂ ಉಪ ಮುಖ್ಯಮಂತ್ರಿಗಳಿಗೆ ತಿಳಿಸಿದರು.

ರೈತರ ಬಗ್ಗೆ ವಿಶೇಷ ಕಾಳಜಿ ತೋರಿದ ಶಾಸಕರಾದ ಬಸವರಾಜು ವಿ. ಶಿವಗಂಗಾ ಅವರಿಗೆ ಉತ್ತಮ ಸೇವೆ ಮಾಡುತ್ತಿರುವೆ ಎಂದು ಶ್ಲಾಘನೆ ವ್ಯಕ್ತಪಡಿಸಿದರು.

ಚನ್ನಗಿರಿ ತಾಲ್ಲೂಕಿಗೆ ಜಲಸಂಪನ್ಮೂಲ ಇಲಾಖೆಯಿಂದ ಸಂಪೂರ್ಣ ಸಹಕಾರ ನೀಡುವುದಾಗಿ ತಿಳಿಸಿದರು.

ಈ ಸಂದರ್ಭದಲ್ಲಿ, ದಾವಣಗೆರೆ, ಹಾವೇರಿ, ಹುಬ್ಬಳ್ಳಿ, ಧಾರವಾಡ, ಬೆಳಗಾವಿ ಜಿಲ್ಲೆಯ ಮಾನ್ಯ ಶಾಸಕರುಗಳು, ಕರ್ನಾಟಕ ನೀರಾವರಿ ನಿಗಮದ ವ್ಯವಸ್ಥಾಪಕ ನಿರ್ದೇಶಕರು, ಅಧಿಕಾರಿಗಳು ಉಪಸ್ಥಿತರಿದ್ದರು.

# ಸೋಮವಾರ ಚನ್ನಗಿರಿ ಸ್ವಯಂ ಪ್ರೇರಿತ ಬಂದ್‌ಗೆ ಕರೆ



**ಚನ್ನಗಿರಿ:** ಚನ್ನಗಿರಿ ಪಟಣ್ಣದ ಅಮರ್ ಮೆಡಿಕಲ್ ಸ್ಟೋರ್‌ನ ಮಾಲೀಕ ಅಂಜದ್(56) ಮೆಡಿಕಲ್ ಶಾಪ್‌ಗೆ ಬರುತ್ತಿದ್ದು ಮಹಿಳೆ ಮತ್ತು ಚಿಕ್ಕ ಶಾಲಾಬಾಲಕಿಯ ಮೇಲೆ ಲೈಂಗಿಕ ದೌರ್ಜನ್ಯ ನಡೆಸುತ್ತಿದ್ದ ಸುಮಾರು 80 ಕ್ಕೂ ಹೆಚ್ಚು ವಿಡಿಯೋ ತುಣುಕುಗಳು ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದ್ದು ವಿಶ್ವಹಿಂದೂಪರಿಷತ್, ಭಜರಂಗದಳ, ಕನ್ನಡಪರ ಸಂಘಟನೆಗಳು ತೀವ್ರವಾಗಿ ಖಂಡಿಸಿದ್ದು ಸೋಮವಾರ ಪ್ರತಿಭಟನೆ ಮತ್ತು ಚನ್ನಗಿರಿ ಸ್ವಯಂ ಪ್ರೇರಿತ ಬಂದ್‌ಗೆ ಕರೆ ನೀಡಿವೆ.ಮಾಧ್ಯಮದೊಂದಿಗೆ ವಿಶ್ವಹಿಂದೂಪರಿಷತ್‌ನ ಸಂಚಾಲಕ ಮಂಜುನಾಥ್ ಮಾತನಾಡಿ ಅಮರ್‌ಮೆಡಿಕಲ್ಸ್‌ನ ಮಾಲೀಕ ಅಂಜದ್ ಎಂಬಾತ ಹಿಂದೂ ಸಮಾಜದ ಮಹಿಳೆಯರ ಮೇಲೆ ಲೈಗಿಂಕ್ ದೌರ್ಜನ್ಯ ನಡೆಸಿದ ವಿಡಿಯೋಗಳು ಹರಿದಾಡುತ್ತಿದ್ದು ಘಟನೆಗೆ ಸಂಬದಿಸಿದಂತೆ ದಾವಣಗೆರೆ ಮಹಿಳಾ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು ಪೋಲಿಸರು ಈಗಾಗಲೇ ಈ ಕಾಮುಕನನ್ನು ಬಂದಿಸಿದ್ದಾರೆ.ಈ ಪ್ರಕರಣದಲ್ಲಿ ತುಂಬಾ ಅಮಾನವೀಯ ಕೃತ್ಯ ಎಸಗಿದ್ದು ವಿಶ್ವಹಿಂದೂಪರಿಷತ್ ತೀವ್ರವಾಗಿ ಖಂಡಿಸುತ್ತಿದ್ದು ಆತನಿಗೆ ತೀವ್ರವಾದ ಶಿಕ್ಷೆಯನ್ನು ನೀಡುವಂತೆ ಆಗ್ರಹಿಸುತ್ತದೆ. ಮತ್ತು ಹಿಂದೂ ಸಮಾಜದ ಮಹಿಳೆಯರಲ್ಲಿ ಜಾಗೃತಿ ಮೂಡಿಸುವುದು ಮುಖ್ಯ ಉದ್ದೇಶವಾಗಿದ್ದು ಮಹಿಳೆಯರು ಸಹ ಎಚ್ಚರಿಕೆಯಿಂದ ಇರಬೇಕಿದೆ. ಹಿಂದೂ ಸಮಾಜಗಳು ಇಂತಹ ಪ್ರಕರಣಗಳನ್ನು ಖಂಡಿಸಿ ಜಾಗೃತರಾಗಬೇಕಿದೆ. ಸೋಮವಾರ ಪಟ್ಟಣದ ಊರಬಾಗಿಲ ಅಂಜನೇಯ ದೇಗುಲದ ಅವರಣದಿಂದ 11 ಗಂಟೆಗೆ ಹೊರಟು ಪಟ್ಟಣದ ಪ್ರಮುಖ ಬೀದಿಗಳಲ್ಲಿ ಪ್ರತಿಭಟನಾ ಮೆರವಣಿಗೆಯನ್ನು ಹಮ್ಮಿಕೊಳ್ಳಲಾಗುವುದು. ಈ ಸಂದರ್ಭದಲ್ಲಿ ಚನ್ನಗಿರಿಯ ಮಾನವೀಯ ಮೌಲ್ಯಗಳನ್ನು ಹೊಂದಿರುವ ವರ್ತಕರು ಮತ್ತು ಸಾರ್ವಜನಿಕರು ಸ್ವಯಂ ಪ್ರೇರಿತ ಬಂದ್ ಮಾಡುವ ಮೂಲಕ ಸಹಕರಿಸಬೇಕು ಎಂದು ಮನವಿ ಮಾಡಿದರು. ಸಮಾಜದಲ್ಲಿ ಜಾಗೃತಿ ಮೂಡಿಸುವ ಕಾರ್ಯವನ್ನು ವಿಶ್ವಹಿಂದೂಪರಿಷತ್ ನಿರಂತರವಾಗಿ ಮಾಡುತ್ತಾ ಬಂದಿದೆ. ಹಿಂದೂ ದರ್ಮ ಸಂಸ್ಕೃತಿ ಉಳಿಯಬೇಕಾದರೆ ಪ್ರತಿ ಮನೆಯಲ್ಲಿಯೂ ಒಬ್ಬೊಬ್ಬ ಶಿವಾಜಿ, ಝಾನ್ಸಿರಾಣಿ ಯಂತವರು ಜನಿಸಬೇಕಿದೆ ಎಂದರು.ಹಿಂದೂ ಜಾಗರಣಾ ವೇಧಿಕೆಯ ಸಂಚಾಲಕ ವಿನಯ್ ಪವಾರ್ ಮಾತನಾಡಿ ಚನ್ನಗಿರಿ ತಾಲೂಕಿನಲ್ಲಿ ಇಂತಹ ಸಾಕಷ್ಟು ಪ್ರಕರಣಗಳು ನಡೆಯುತ್ತಿದ್ದು ಲವ್ ಜಿಹಾದ್ ಮೂಲಕ ಸಾಕಷ್ಟು ಹೆಣ್ಣು ಮಕ್ಕಳನ್ನು ಟಾರ್ಗೇಟ್ ಮಾಡುತ್ತಿದ್ದಾರೆ. ಇಂತಹ ಸಂದರ್ಭದಲ್ಲಿ ಹಿಂದೂ ಸಮಾಜ ಜಾಗೃತರಾಗಬೇಕಿದೆ. ಇಂತಹ ತಪ್ಪುಗಳನ್ನು ನೇರವಾಗಿ ಖಂಡಿಸುವ ಪ್ರಯತ್ನ ಮಾಡಬೇಕಿದೆ ಎಂದರು. ಚನ್ನಗಿರಿ ಕುರುಬ ಸಮಾಜದ ಅಧ್ಯಕ್ಷ ಕೆ.ಆರ್.ಗೋಪಿ ಮಾತನಾಡಿ ಸಾಮಾಜಿಕ ಜಾಲತಾಣಗಳಲ್ಲಿ ಈಗಾಗಲೇ ಸಂಪೂರ್ಣ ಹರಿದಾಡುತ್ತಿದ್ದು ಹಿಂದೂ ಸಂಘಟನೆಗಳು ಪ್ರತಿಭಟನೆ ಮಾಡಲು ಮುಂದಾದರೆ ಸಾಕಷ್ಟು ಅಡೆತಡೆಗಳು ಮುಂದಾಗುತ್ತಿವೆ. ಆದರೆ ಇಂತಹ ಘಟನೆಗಳು ಸಂಭವಿಸಿದಾಗ ಎಲ್ಲರೂ ಒಟ್ಟಾಗಿ ಖಂಡನೆ ಮಾಡಬೇಕಾಗಿದೆ ಎಂದರು.

ಬಿಜೆಪಿ ಮುಖಂಡ ನವೀನ್ ಪಲ್ಲಕ್ಕಿ ಮತ್ತು ಪುರಸಭೆಯ ಸದಸ್ಯೆ ಕಮಲಾ ಹರೀಶ್ ಮಾತನಾಡಿ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ರಸ್ತೆಯಲ್ಲಿ ವಿದ್ಯಾರ್ಥಿಗಳು ಓಡಾಡುವಂತಹ ಸಂದರ್ಭದಲ್ಲಿ ತುಚ್ಚವಾಗಿ ಮಾತನಾಡುತ್ತಿದ್ದಾರೆ. ಸಾಕಷ್ಟು ಬಾರಿ ಪುರಸಭೆಯ ಅಧಿಕಾರಿಗಳ ಗಮನಕ್ಕೆ ತಂದರೂ ಇದುವರೆಗೂ ಯಾವುದೇ ಕ್ರಮಗಳನ್ನು ಸಹ ತೆಗೆದುಕೊಂಡಿಲ್ಲ ಎಂದರು.

ಈ ಸಂದರ್ಭದಲ್ಲಿ ಹಿಂದೂ ಸಂಘಟನೆಗಳ ಮುಖಂಡರಾದ ಶಿವಲಿಂಗಪ್ಪ, ಒನಕೆ ಓಬವ್ವ ಸಂಘಟನೆಯ ಅಧ್ಯಕ್ಷೆ ಶಶಿಕಲಾ, ಬಿ.ಜೆ.ಪಿ ಮಹಿಳಾ ಘಟಕದ ಮಾಜಿ ಅಧ್ಯಕ್ಷೆ ಕೆ.ಪಿ.ಎಂ. ಲತಾ, ಸರೋಜಮ್ಮ, ಕನ್ನಡ ನಾಡು ಹಿತ ರಕ್ಷಣಾ ವೇಧಿಕೆಯ ನಗರ ಘಟಕ ಅಧ್ಯಕ್ಷ ನಟರಾಜ್ ರಾಯ್ಕರ್ ಮತ್ತು ವಿಶ್ವಹಿಂದೂ ಪರಿಷತ್ ಮತ್ತು ಭಜರಂಗದಳದ ಕಾರ್ಯಕರ್ತರು ಹಾಜರಿದ್ದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**